ಸಂಪುಟ: ೦೬/ ಸಂಚಿಕೆ: ೨೨೫/ಶನಿವಾರ ದಿನಾಂಕ: ೦೨-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 225 / SATURDAY Date : 02-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

**॥ ಸಪ್ತಮುಷಿವಾಣಿ ॥**

ಬದುಕಿನಲ್ಲಿ ಸುತ್ತಲೂ ಕತ್ತಲೆ ಕವಿದಿರುವಾಗ ಎಲ್ಲೋ ಒಂದು ಕಡೆ ಸಣ್ಣ ಬೆಳಕು ಕಾಣಿಸುತ್ತದೆ. ಭರವಸೆ ಎಂದರೆ ಅದೇ. ಅದೇ ನಮ್ಮನ್ನು ಮುನ್ನಡೆಸುವ ಶಕ್ತಿ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ಅನ್ನಭಾಗ್ಯ ಯೋಜನೆ
### 8,433 ಕೋಟಿ ರೂ. ಹಣ ವರ್ಗಾವಣೆ



**ಬೆಂಗಳೂರು,ನ.1–** ಅನ್ನಭಾಗ್ಯ ಯೋಜನೆಯಡಿ ರಾಜ್ಯದಲ್ಲಿ 2023 ರ ಜುಲೈನಿಂದ ಇಲ್ಲಿಯವರೆಗೆ 51.39 ಕೋಟಿ ಫಲಾನುಭವಿಗಳಿಗೆ ಡಿಬಿಟಿ ಮೂಲಕ 8,433 ಕೋಟಿ ರೂ. ಹಣ ವರ್ಗಾವಣೆ ಮಾಡಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್.ಮುನಿಯಪ್ಪ ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ವತಿಯಿಂದ ದೇವನಹಳ್ಳಿ ಪಟ್ಟಣದ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 2,09,491 ಅರ್ಹ ಫಲಾನುಭವಿಗಳಿಗೆ 12,19,610 ರೂ.ಗಳನ್ನು ಡಿಬಿಟಿ ಮೂಲಕ ವರ್ಗಾಯಿಸಲಾಗಿದೆ. ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಅನ್ನ ಸುವಿಧ ಯೋಜನೆಯನ್ನು ಜಾರಿಗೆ ತರಲಾಗಿದ್ದು, 90 ವರ್ಷ ವಯಸ್ಸಿನ ಹಿರಿಯ ನಾಗರಿಕರ ಮನೆಬಾಗಿಲಿಗೆ ಆಹಾರ ಧಾನ್ಯಗಳನ್ನು ತಲುಪಿಸಲಾಗುತ್ತಿದೆ. ರಾಜ್ಯದಲ್ಲಿ 7,743 ಫಲಾನುಭವಿಗಳಿಗೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ 107 ಪಡಿತರ ಚೀಟಿದಾರರಿಗೆ ಈ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದರು. ನನ್ನ ಶಾಲೆ ನನ್ನ ಕೊಡುಗೆ ಯೋಜನೆಯಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸರ್ಕಾರಿ ಶಾಲೆಗಳನ್ನು ಸಿಎಸ್‌ಆರ್ ನಿಧಿಯಡಿ ಉನ್ನತೀಕರಿಸಿ ಸಕಲ ಸೌಲಭ್ಯಗಳನ್ನು ಕಲ್ಪಿಸಲು ಪ್ರಯತ್ನ ಮಾಡಲಾಗುತ್ತಿದೆ. ಗುಣಮಟ್ಟದ ಶಿಕ್ಷಣ ನೀಡಲು ನನ್ನ ಶಾಲೆ, ನನ್ನ ಕೊಡುಗೆ ಕಾರ್ಯಕ್ರಮವನ್ನು ಆರಂಭಿಸಿದ್ದು, ಉತ್ತಮ ಸ್ಪಂದನೆ ದೊರೆತಿದೆ ಎಂದು ಹೇಳಿದರು.

ಎತ್ತಿನಹೊಳೆ ಯೋಜನೆಯಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ 66 ಸಣ್ಣ ಕೆರೆಗಳಿಗೆ ನೀರು ತುಂಬಿಸಲು ಉದ್ದೇಶಿಸಲಾಗಿದೆ ಎಂದರು. ಪುಷ್ಪಾವತಿ ಯೋಜನೆ ಮತ್ತು ಹೆಚ್‌ಎನ್ ವ್ಯಾಲಿ ಯೋಜನೆಯಡಿ 243 ಎಂಎಲ್‌ಡಿ ಸಂಸ್ಕರಿಸಿದ ನೀರನ್ನು 1,081 ಕೋಟಿ ರೂ. ಅನುದಾನದಲ್ಲಿ ಕೆರೆಗಳಿಗೆ ನೀರು ತುಂಬಿಸಲು ಕ್ರಮ ವಹಿಸಲಾಗುತ್ತಿದೆ. ಸರ್ವ ಜನಾಂಗದ ಶಾಂತಿಯ ತೋಟವಾಗಿ ಕಂಗೊಳಿಸಿದ ನಮ ನಾಡು ಇಂದು, ಮುಂದು, ಎಂದೆಂದೂ ಎಲ್ಲಾ ಜಾತಿ, ಧರ್ಮದ ಜನರು ಸಾಮರಸ್ಯದಿಂದ ಬದುಕು ಒಂದು ಸುಂದರ ತೋಟವಾಗಿ ಉಳಿಯಬೇಕು ಎಂದು ಆಶಿಸಿದರು.

ರಾಜ್ಯೋತ್ಸವದ ಈ ಸಂದರ್ಭದಲ್ಲಿ ಸುಂದರ ಹೊಸ ನಾಳೆಯ ನಿರ್ಮಾಣದ ನಮ ಹಿರಿಯರು ಕಂಡ ಕನಸು ಇನ್ನಷ್ಟು ಸಹಕಾರಗೊಳಿಸುವ ಪಣ ತೊಡಬೇಕಾಗಿದೆ ಎಂದರು. ಮನೆಯೇ ಮೊದಲ ಪಾಠಶಾಲೆಯಾಗಿದ್ದು, ಮನೆಯಿಂದಲೇ ಮಕ್ಕಳಿಗೆ ಮಾತೃಭಾಷಾ ಕಲಿಕೆ ಮತ್ತು ಭಾಷಾ ಜ್ಞಾನ ಬೆಳೆಸುವುದು ಮುಖ್ಯವಾಗುತ್ತದೆ. ಮಕ್ಕಳಿಗೆ ನಮ ನಾಡು-ನುಡಿಯ ಬಗ್ಗೆ ಹೆಮೆ ಪಡುವಂತಹ ಕಲಿಕೆಯನ್ನು ಪ್ರೋತ್ಸಾಹಿಸಬೇಕು ಎಂದು ಅವರು ಕರೆ ನೀಡಿದರು.

## ಅಖಂಡ ಕರ್ನಾಟಕದ ಕನಸು ನನಸಾಗಿದೆ: ಸಚಿವರ ಸತೀಶ ಜಾರಕಿಹೊಳಿ



**ಬೆಳಗಾವಿ:** ವೇಣುಗ್ರಾಮ ಎಂದು ಹೆಸರುವಾಸಿಯಾಗಿದ್ದ ನಮ್ಮ ಬೆಳಗಾವಿಯು ತನ್ನ ವಿಶಿಷ್ಟ ಮತ್ತು ವಾತಾನುಕೂಲ ಪರಿಸರದಿಂದಾಗಿ ಎಲ್ಲರಿಗೂ ಪ್ರಿಯವಾಗಿದೆ. ಐತಿಹಾಸಿಕವಾಗಿ ಜಿಲ್ಲೆಯ ಹಲಸಿ ಗ್ರಾಮವು ಕದಂಬ ಅರಸರ ರಾಜಧಾನಿಯಾಗಿದ್ದ ಸಂಗತಿಯು ಶಾಸನಗಳು ಮತ್ತು ತಾಮ್ರ ಪತ್ರಗಳ ಆಧಾರದಿಂದ ತಿಳಿದುಬರುತ್ತದೆ. ಮದ್ರಾಸ್, ಮುಂಬೈ ಸೇರಿದಂತೆ ವಿವಿಧ ಪ್ರಾಂತ್ಯಗಳಲ್ಲಿ ಹಂಚಿಹೋಗಿದ್ದ ಕನ್ನಡ ಭಾಷಿಕ ಪ್ರದೇಶಗಳು ಒಂದಾಗಿ ಅಖಂಡ ಕರ್ನಾಟಕದ ಕನಸು ನನಸಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿರಾದ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಜಿಲ್ಲಾಕ್ರೀಡಾಂಗಣದಲ್ಲಿ ಶುಕ್ರವಾರ (ನ.1) ಜರುಗಿದ 69ನೇ ರಾಜ್ಯೋತ್ಸವದ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

6ನೇ ಶತಮಾನದಿಂದ ಕ್ರಿ.ಶ 760ರ ವರೆಗೂ ಬೆಳಗಾವಿಯು ಚಾಲುಕ್ಯ ಸಾಮ್ರಾಜ್ಯದ ಭಾಗವಾಗಿತ್ತು. ಕ್ರಿ.ಶ 875ರ ಅವಧಿಯಲ್ಲಿ ರಾಷ್ಟ್ರಕೂಟರ ಆಳ್ವಿಕೆಯಲ್ಲಿ ಸಾಂಸ್ಕೃತಿಕವಾಗಿ ಬೆಳೆದುಬಂದ ಬೆಳಗಾವಿ, ನಂತರ ರಟ್ಟ ವಂಶದ ಅರಸರ ರಾಜಧಾನಿಯಾಗಿತ್ತು. ಚಾರಿತ್ರಿಕವಾಗಿ ಪಾರತಂತ್ರ್ಯವನ್ನು ವಿರೋಧಿಸಿ ಬ್ರಿಟೀಷರೊಡನೆ ಸ್ವಾತಂತ್ರ್ಯ ಹೋರಾಟಕ್ಕೆ ನಾಂದಿ ಹಾಡಿದ ಕಿತ್ತೂರಿನ ರಾಣಿ ಚೆನ್ನಮ್ಮ; ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಹಾಗೂ ಪ್ರಪ್ರಥಮ ಮಹಿಳಾ ಸೈನ್ಯವನ್ನು ಕಟ್ಟಿದ ಬೆಳವಡಿ ಮಲ್ಲಮ್ಮ ನಮ್ಮ ನಾಡಿನ ಧೀಮಂತ ಶಕ್ತಿಯಾಗಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಮೆರವಣಿಗೆ: 69ನೇ ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ ವಿವಿಧ ರೂಪಕ ನಿಮಿತ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ನಾಡದೇವಿ ಭುವನೇಶ್ವರಿ ಪ್ರತಿಮೆಗೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ತದನಂತರ ಜರುಗಿದ ಆರ್ಕಷಕ ಮೆರವಣಿಗೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೃಷಿ ಇಲಾಖೆ, ಅರಣ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ರೂಪಕಗಳು ಸಾರ್ವಜನಿಕರ ಗಮನ ಸೆಳೆದವು. ನಾಗರೀಕ ಪೊಲೀಸ್ ಪಡೆ, ಕೆ.ಎಸ್.ಆರ್.ಪಿ ಪುರುಷ ಮತ್ತು ಮಹಿಳಾ ತುಕಡಿ, ಅಬಕಾರಿ ಇಲಾಖೆ, ಗೃಹ ರಕ್ಷಕ ದಳ, ಎನ್.ಸಿ.ಸಿ, ಭಾರತ ಸೇವಾದಳ ಮಹೇಶ್ವರಿ ಅಂದ ಮಕ್ಕಳ ಶಾಲೆ ಸೇರಿದಂತೆ ವಿವಿಧ ಶಾಲಾ ಮಕ್ಕಳು ಪರೇಡನಲ್ಲಿ ಭಾಗವಹಿಸಿದ್ದವು. ಕಾರ್ಯಕ್ರಮದಲ್ಲಿ ಸಂಸದರಾದ ಜಗದೀಶ ಶೆಟ್ಟರ, ಹಟ್ಟಿಹೊಳಿ, ಸಾಬಣ್ಣ ತಳವಾರ, ಮಹಾಪೌರರಾದ ಸವಿತಾ ಕಾಂಬಳೆ, ಉಪಮಹಾಪೌರ ಆನಂದ ಚವ್ಹಾಣ, ನಗರ ಸೇವಕರು, ಜಿಲ್ಲಾಧಿಕಾರಿ ನಗರ ಪೋಲಿಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ನಬ್ಯಾಂಗ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ ಸಿ.ಇ.ಓ ರಾಹುಲ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಉಪವಿಭಾಗಾಧಿಕಾರಿ ಶ್ರವಣ ನಾಯಕ, ಗಣ್ಯರು,



ಶಾಸಕರುಗಳಾದ ರಾಜು ಆಸೀಫ್ (ಸೇಠ), ಅಭಯ ಪಾಟೀಲ, ವಿಧಾನ ಪರಿಷತ್ ಸದಸ್ಯರುಗಳಾದ ಚನ್ನರಾಜ ಸಾರ್ವಜನಿಕರು ಹಾಗೂ ವಿವಿಧ ಶಾಲಾ ಕಾಲೇಜು ವಿಧ್ಯಾರ್ಥಿಗಳು ಉಪಸ್ಥಿತಿರಿದ್ದರು.

## 500 ಕರ್ನಾಟಕ ಪಬ್ಲಿಕ್
### ಶಾಲೆಗಳ ಅನುಷ್ಠಾನ : ಮಧು ಬಂಗಾರಪ್ಪ



**ಬೆಂಗಳೂರು,** –ಕಾರ್ಪೊರೇಟ್ ಸಂಸ್ಥೆಗಳ ಸಿಎಸ್‌ಆರ್ ಮಿತಿಯಡಿ ರಾಜ್ಯದಲ್ಲಿ ಮೊದಲ ಹಂತದಲ್ಲಿ 500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹಾಗೂ ಗ್ರೀನ್‌ಫೀಲ್ಡ್ ಯೋಜನೆಯಡಿ 100 ಶಾಲೆಗಳನ್ನು ಗುರುತಿಸಿ, ಯೋಜನೆಯನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿರುವುದಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧುಬಂಗಾರಪ್ಪ ತಿಳಿಸಿದರು. ಶಾಲಾಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನಗರದ ಕಂಠೀರವ ಕ್ರೀಡಾಂಗಣದಲ್ಲಿ ಹಮಿಕೊಂಡಿದ್ದ 69ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸರ್ಕಾರಿ ಶಾಲೆಯ ಗುಣಾತಕ ಶಿಕ್ಷಣಕ್ಕಾಗಿ ಕಲಿಕಾ ಬಲವರ್ಧನೆ, ಮರುಸಿಂಚನ, ಕಲಿಕಾಸರೆ, ಗಣಿತ ಗಣಕ ಮುಂತಾದ ಕಾರ್ಯಕ್ರಮಗಳನ್ನು ಹಮಿಕೊಳ್ಳಲಾಗಿದೆ ಎಂದರು.

ಈ ಸಂಬಂಧ ಹಲವಾರು ಸಂಘ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದ್ದು, ಮಕ್ಕಳ ಶಾಲಾ ಹೊರೆ ಇಳಿಸಲು ಪಠ್ಯಪುಸ್ತಕಗಳನ್ನು ಸೆಮಿಸ್ಟರ್‌ನಂತೆ ವಿಭಾಗಿಸಲಾಗಿದೆ ಎಂದು ಅವರು ಹೇಳಿದರು.

ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದ್ದು, ಉತ್ತಮ ಗುಣಮಟ್ಟದ ಶಾಲಾ ಶಿಕ್ಷಣವನ್ನು ನೀಡಲು ಸತತ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ರಾಜ್ಯದ ಎಲ್ಲಾ ಶಾಲೆಗಳಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಪ್ರಥಮ ಹಾಗೂ ದ್ವಿತೀಯ ಭಾಷೆಯನ್ನಾಗಿ ಬೋಧಿಸಲಾಗುತ್ತಿದೆ ಎಂದು ಅವರು ತಿಳಿಸಿದರು. ಮಕ್ಕಳಲ್ಲಿ ಪೋಷಕಾಂಶಗಳನ್ನು ಹೆಚ್ಚಿಸುವ ಸಲುವಾಗಿ ಮೊಟ್ಟೆ, ಚಿಕ್ಕಿ, ಬಾಳೆಹಣ್ಣು, ಹಾಲು, ರಾಗಿಮಾಲ್ಟನ್ನು ನೀಡಲಾಗುತ್ತಿದೆ ಎಂದು ಹೇಳಿದರು. ನಮ ಶಾಲೆ ನಮ ಜವಾಬ್ದಾರಿ ಎಂಬ ಕಾರ್ಯಕ್ರಮದ ಮೂಲಕ ಪ್ರತಿ ಶಾಲೆಯಲ್ಲಿ ಹಳೆ ವಿದ್ಯಾರ್ಥಿ ಸಂಘ ಸ್ಥಾಪಿಸಿದ್ದು, ಅಪಾರ ಸಂಖ್ಯೆಯಲ್ಲಿ ಮುಂದೆ ಬಂದಿದ್ದಾರೆ. ಈಗ ಉತ್ಸಾಹದಿಂದ ಶಾಲಾ ಅಭಿವೃದ್ಧಿಯಲ್ಲಿ ಸಮುದಾಯದ ನಾಗರಿಕರು ಕೈ ಜೋಡಿಸುತ್ತಿದ್ದಾರೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಉತ್ತಮಪಡಿಸಲು 784 ಕೊಠಡಿಗಳನ್ನು 115 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಶಾಲೆಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಶೌಚಾಲಯಗಳ ನಿರ್ಮಾಣಕ್ಕಾಗಿ 122.75 ಕೋಟಿ ರೂ. ಮಂಜೂರು ಮಾಡಲಾಗಿದೆ. ರಾಜ್ಯದ 5,716 ಶಾಲೆಗಳ 13,832 ಕೊಠಡಿಗಳ ದುರಸ್ತಿಗಾಗಿ 150 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಕನ್ನಡ ನಾಡಿನ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಿ ಅವರಲ್ಲಿ ಆತವಿಶ್ವಾಸ, ಭ್ರಾತೃತ್ವ, ಸಹಬಾಳ್ವೆ, ಸಹಕಾರ, ಪರಿಸರ ಕಾಳಜಿ ಮೂಡಿಸಲಾಗುತ್ತಿದೆ ಎಂದರು.

ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ 42,817 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಕ್ಷರ ಆವಿಷ್ಕಾರ ಯೋಜನೆಯಡಿಯಲ್ಲಿ 1008 ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳನ್ನು ಪ್ರಾರಂಭಿಸಲಾಗಿದೆ. 36,658 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ.

ಭಾರತದ ಇತಿಹಾಸದಲ್ಲಿ ಸ್ವಾತಂತ್ರ್ಯ ಸಂಗ್ರಾಮಕ್ಕೆ ದೊರೆತಿರುವ ಮಹತ್ವದಂತೆ ಕರ್ನಾಟಕದ ಇತಿಹಾಸದಲ್ಲಿ ಕರ್ನಾಟಕ ಏಕೀಕರಣಕ್ಕಾಗಿ ನಡೆದ ಚಳವಳಿಯು ಮಹತ್ವ ಪಡೆದಿದೆ. 1956ರ ನ.1 ರಂದು ಮೈಸೂರು ರಾಜ್ಯ ಅಸ್ತಿತ್ವಕ್ಕೆ ಬಂದಿತು.

1973 ರಲ್ಲಿ ಅದು ಕರ್ನಾಟಕ ಎಂದು ಮರುನಾಮಕರಣಗೊಂಡಿತು. ಇದರ ಸುವರ್ಣ ಮಹೋತ್ಸವವನ್ನು ಆಚರಿಸುತ್ತಿದ್ದೇವೆ. ಏಕೀಕರಣಕ್ಕಾಗಿ ಶ್ರಮಿಸಿದ ಹಲವಾರು ಮಹನೀಯರನ್ನು ಕೃತಜ್ಞತೆಯಿಂದ ಸರಿಸಬೇಕಾಗಿದೆ ಎಂದು ಅವರು ಹೇಳಿದರು.

## ೬೯ನೇ ರಾಜ್ಯೋತ್ಸವ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ



**ಬೆಳಗಾವಿ :** ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ (ನ.1) ಜರುಗಿದ 69ನೇ ರಾಜ್ಯೋತ್ಸವದ ಪ್ರಯುಕ್ತ ಜರುಗಿದ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಮಾಧ್ಯಮ ಪ್ರತಿನಿಧಿಗಳು, ಕನ್ನಡಪರ ಹೋರಾಟಗಾರರು ಮತ್ತು ವಿವಿಧ ಕ್ಷೇತ್ರಗಳ ಸಾಧಕರನ್ನು ಜಿಲ್ಲಾಡಳಿತ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಸೇರಿದಂತೆ ಗಣ್ಯರುಗಳು ಸನ್ಮಾನಿಸಿದರು. **ಮಾಧ್ಯಮ ಪ್ರತಿನಿಧಿಗಳ ವಿಭಾಗ:** ಮುದ್ರಣ ಮಾಧ್ಯಮ ವಿಭಾಗ: ಪಿ.ಟಿ.ಐ. ಸುದ್ದಿ ಸಂಸ್ಥೆ ವರದಿಗಾರರಾದ ಸುಭಾಷ್ ಮದ್ದುರಾವ ಕುಲಕರ್ಣಿ ಹಾಗೂ ಉದಯವಾಣಿ ದಿನಪತ್ರಿಕೆಯ ಜಿಲ್ಲಾ ಹಿರಿಯ ವರದಿಗಾರರಾದ ಭೈರೋಬಾ ಶಿವಾಜಿ ಕಾಂಬಳೆ. ಪತ್ರಿಕಾ ಛಾಯಾಗ್ರಾಹಕರ ವಿಭಾಗ: ಪ್ರಜಾವಾಣಿ ಮತ್ತು ಡೆಕ್ಕನ್ ಹೆರಾಲ್ಡ್ ದಿನಪತ್ರಿಕೆ ಛಾಯಾಗ್ರಾಹಕರಾದ ಏಕನಾಥ ರಾಮಚಂದ್ರ ಅಗಸಿಮನಿ. ವಿದ್ಯುನ್ಮಾನ ಮಾಧ್ಯಮ ವಿಭಾಗ: ಪ್ರಜಾ ಟಿ.ವಿ. ಜಿಲ್ಲಾ ವರದಿಗಾರರಾದ ಚಂದ್ರು ಹಣಮಂತ ಶ್ರೀರಾಮುಡು ಮತ್ತು ಚಿಕ್ಕೋಡಿ ಸುವರ್ಣ ನ್ಯೂಸ್ ವರದಿಗಾರರಾದ ಮುಸ್ತಾಕ್‌ಅಹ್ಮದ್ ಸಯ್ಯದ್ ಹುಸೇನ್ ಪೀರಜಾದೆ. ಟಿವಿ ಕ್ಯಾಮರಾಮೆನ್ ವಿಭಾಗ: ನ್ಯೂಸ್ ಫರ್ಸ್ಟ್ ಕ್ಯಾಮೆರಾಮನ್ ರೋಹಿತ ನಾರಾಯಣ ಶಿಂಧೆ ಮತ್ತು ಇನ್ ನ್ಯೂಸ್ ಛಾಯಾಗ್ರಾಹಕ ಸುಭಾನಿ ಇಮಾಮಸಾಬ್ ಮುಲ್ಲಾ.

ಜಿಲ್ಲಾ/ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರುಗಳ ವಿಭಾಗ: ಸಮದರ್ಶಿ ದಿನಪತ್ರಿಕೆಯ ಸಂಪಾದಕರಾದ ಅಶ್ರಫ್ ಬಾಬಾಸಾಬ್ ಧಾರವಾಡಕರ. ತಾಲೂಕು ವರದಿಗಾರರ ವಿಭಾಗ: ಚನ್ನಮ್ಮನ ಕಿತ್ತೂರಿನ ಪ್ರಜಾವಾಣಿ ದಿನಪತ್ರಿಕೆಯ ತಾಲೂಕು ವರದಿಗಾರರಾದ ಪ್ರದೀಪ ನೀಲಕಂಧರ ಮೇಲಿನಮನಿ ಮತ್ತು ಕಾಗವಾಡ ತಾಲೂಕಿನ ಸಂಯುಕ್ತ ಕರ್ನಾಟಕ ಹಾಗೂ ಕನ್ನಡಪ್ರಭ ದಿನಪತ್ರಿಕೆಯ ತಾಲೂಕು ವರದಿಗಾರರಾದ ಸಿದ್ಧಯ್ಯ ಗಂಗಯ್ಯ ಹಿರೇಮಠ. ಪತ್ರಿಕಾ ವಿತರಕರ ವಿಭಾಗ: ಬೈಲಹೊಂಗಲ್ ತಾಲೂಕಿನ ನೇಗಿನಹಾಳ ಗ್ರಾಮದ ಸದೆಪ್ಪ ಫಕೀರಪ್ಪ ಗರಗದ. ಕನ್ನಡಪರ ಹೋರಾಟಗಾರರ ವಿಭಾಗ: ಹೊಳೆಪ್ಪ ಭೀಮಪ್ಪ ಸುಲಧಾಳ(ಮಾರ್ಕಂಡೇಯ ನಗರ, ಬೆಳಗಾವಿ), ಮಾರುತಿ ಲಕ್ಕಪ್ಪ ಮಾನೋಜಿ(ಬೆಳಗಾವಿ), ಬಸವರಾಜ ಖಾನಪ್ಪನವರ(ಗೋಕಾಕ), ರಾಜು ಕೋಲಾ(ಬಾಳೆಕುಂದ್ರಿ ಕೆ.ಎಚ್), ಉದಯ ಪದ್ಮನ್ನವರ(ಗಾಂಧಿನಗರ, ಬೆಳಗಾವಿ), ರಮೇಶ್ ನಾಯ್ಕರ್(ಮಾರುತಿನಗರ, ಬೆಳಗಾವಿ), ಶ್ರೀಮತಿ ಫರೀದಾ ದೇವಲಾಪುರ(ಆಟೋನಗರ, ಬೆಳಗಾವಿ), ಗಿರೀಶ್ ಕಾಮಕರ(ಭಾಗ್ಯನಗರ, ಬೆಳಗಾವಿ), ಡಾ.ಎಸ್.ಡಿ.ಪಾಟೀಲ(ಕಾಕತಿ), ಜಗನ್ನಾಥ ಬಾಮನೆ(ಅಥಣಿ), ವಿನಯ ಥವಳಿ(ಖಾಸಬಾಗ, ಬೆಳಗಾವಿ), ಮನೋಹರ ಪುಡಕಲನಟ್ಟಿ(ಹನುಮಾನ ನಗರ, ಬೆಳಗಾವಿ). ಇವರುಗಳನ್ನು ಸಚಿವರು, ಗಣ್ಯರುಗಳು ಸನ್ಮಾನಿಸಿದರು.

## ನಮ್ಮ ಕನ್ನಡ ಭಾಷೆ ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗರ ಅದ್ಯ ಕರ್ತವ್ಯ: ಮುಖ್ಯಮಂತ್ರಿ

**ಬೆಂಗಳೂರು:** ನಮ್ಮ ಭಾಷೆಗೆ ಸುಮಾರು ಎರಡು ಸಾವಿರ ವರ್ಷಗಳ ಇತಿಹಾಸ ಇದೆ. ನಮ್ಮ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗರ ಅದ್ಯ ಕರ್ತವ್ಯ. ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 69 ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ನಾಡದೇವಿ ಭುವನೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸಿ ಹಾಗೂ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಇಡೀ ಕರ್ನಾಟಕದಾದ್ಯಂತ ವಿಜೃಂಭಣೆಯಿಂದ 69 ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸುತ್ತಿದ್ದು, ಕನ್ನಡ ನಾಡಿನ ಸಮಸ್ತ ಜನತೆಗೂ ಕನ್ನಡ ರಾಜ್ಯೋತ್ಸವದ ಶುಭಾಷಯ ಕೋರಿದರು.

ಭಾಷೆಯನ್ನು ಬೆಳೆಸಿ ಉಳಿಸಲು ಮೊದಲು ಕನ್ನಡಿಗರಾಗಿ, ಕನ್ನಡೇತರರಿಗೆ ಕನ್ನಡವನ್ನು ಕಲಿಸಲು ಪ್ರಯತ್ನಿಸುವ ಮೂಲಕ ಕನ್ನಡ ವಾತಾವರಣವನ್ನು ನಿರ್ಮಿಸಿ ಎಂದು ರಾಜ್ಯದ ಜನರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಕರ್ನಾಟಕದಲ್ಲಿ 200 ಕ್ಕೂ ಹೆಚ್ಚು ಭಾಷೆಗಳಿದ್ದು, ಕನ್ನಡ, ಗಾಳಿ, ನೀರು, ಆಹಾರ ಸೇವನೆ ಮಾಡಿದ ಮೇಲೆ ನಾವೆಲ್ಲರೂ ಕನ್ನಡಿಗರು. ಕನ್ನಡ ಭಾಷೆಗೆ 2000 ಕ್ಕೂ ಅಧಿಕ ಇತಿಹಾಸವಿದೆ. ಕೇಂದ್ರ ಸರ್ಕಾರ ಶಾಸ್ತ್ರೀಯ ಭಾಷೆಯನ್ನಾಗಿ ಪರಿಗಣಿಸಿದೆ. ನಾವು ಯಾವುದೇ ಕಾರಣಕ್ಕೂ ಕನ್ನಡ ಭಾಷೆಯನ್ನು ಬಲಿಕೊಟ್ಟು ಉದಾರಿಗಳಾಗಬಾರದು. ಭಾಷೆಯ ವ್ಯಾಮೋಹ ಅತಿಯಾಗಬಾರದು, ಅದೇ ರೀತಿ ಕನ್ನಡ ಅಭಿಮಾನವನ್ನು ಬಿಟ್ಟುಕೊಡಬಾರದು. ಭಾಷೆಯನ್ನು ಎತ್ತರಕ್ಕೆ ಬೆಳೆಸುವುದರ ಜೊತೆಗೆ ಬೇರೆ ಭಾಷೆಯನ್ನು ಕಲಿತು ಭಾಷಾ ಸಂಪತ್ತನ್ನು ಬೆಳೆಸಿಕೊಂಡು ಕನ್ನಡ ಮಾತೆಯನ್ನು ಉತ್ತುಂಗಕ್ಕೇರಿಸಬೇಕು. ಮಹಾತ್ಮಗಾಂಧೀಜಿ ಅವರು ಹೇಳಿದಂತೆ ನಾವು ನಮ್ಮ ದೇಶ ಭಾಷೆಯಲ್ಲಿ ಶಿಕ್ಷಣ ಪಡೆದರೆ ಹೆಚ್ಚು ಶಕ್ತಿಯುತವಾಗಿ ಬೆಳೆಯುತ್ತೇವೆ ಎಂದು ಆಶಿಸಿದರು.

ಸುವರ್ಣ ಕರ್ನಾಟಕ ಸಂಭ್ರಮೋತ್ಸವ ಅಚರಣೆ :

ಕರ್ನಾಟಕ ಏಕೀಕರಣವಾಗಿ 68 ವರ್ಷ ಕಳೆದು, 69 ನೇ ವರ್ಷಕ್ಕೆ ಕಾಲಿಟ್ಟಿದ್ದೇವೆ. 1947 ರಲ್ಲಿ ಭಾರತ ದೇಶ ಸ್ವಾತಂತ್ರ್ಯವಾದ ನಂತರ ನೂರಾರು ಸಂಸ್ಥಾನಗಳನ್ನು ಒಗ್ಗೂಡಿಸುವ ಕಾರ್ಯ ಯಶಸ್ವಿಯಾಗಿ ನಡೆಯಿತು. ಭಾಷಾವಾರು ಪ್ರಾಂತ್ಯಗಳನ್ನು ಗುರುತಿಸಿ 1956ರ ನವೆಂಬರ್ 1 ರಂದು ಮೈಸೂರು ರಾಜ್ಯ ಉದಯವಾಯಿತು. 1973 ನವೆಂಬರ್ 1 ರವರೆಗೆ ಮೈಸೂರು ರಾಜ್ಯವಾಗಿದ್ದನ್ನು ಅಂದಿನ ಮಾಜಿ ಮುಖ್ಯಮಂತ್ರಿ ದಿ. ಡಿ. ದೇವರಾಜ ಅರಸು ಅವರು ಇಡೀ ರಾಜ್ಯವನ್ನು ಪ್ರತಿನಿಧಿಸುವ ಕರ್ನಾಟಕ ರಾಜ್ಯ ಎಂದು 1973 ನವೆಂಬರ್ 1 ರಂದು ಮರುನಾಮಕರಣ ಮಾಡಿದರು. ತಾನು ಮುಖ್ಯಮಂತ್ರಿಯಾದ ನಂತರ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ 2023 ನವೆಂಬರ್ 1 ರಂದು ಬಜೆಟ್‌ನಲ್ಲಿ ಇಡೀ ವರ್ಷ ಕರ್ನಾಟಕ ಸುವರ್ಣ ಸಂಭ್ರಮ ದಿನವನ್ನಾಗಿ ಆಚರಿಸಬೇಕೆಂದು ಘೋಷಣೆ ಮಾಡಲಾಯಿತು. ಕನ್ನಡ ನಾಡು, ನುಡಿ, ಸಂಸ್ಕೃತಿ, ಕಲೆ, ಪರಂಪರೆಯನ್ನು ಉಳಿಸಿ ಬೆಳೆಸಬೇಕೆಂಬ ಉದ್ದೇಶದಿಂದ "ಕರ್ನಾಟಕ ಸುವರ್ಣ ಸಂಭ್ರಮ"ವನ್ನು ಆಚರಿಸಲಾಗುತ್ತಿದೆ ಎಂದರು.

ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಘೋಷವಾಕ್ಯದೊಡನೆ ಸಮಸ್ತ ನಾಡಿನ ಜನರಿಗೆ ತಿಳಿಸಬೇಕೆಂದು ಅರ್ಥಪೂರ್ಣವಾಗಿ ಇಡೀ ವರ್ಷ ಆಚರಿಸಲಾಯಿತು. ಕನ್ನಡಿಗರಾಗಿ ಮಾತ್ರ ಭಾಷೆಯನ್ನು ನಮ್ಮ ವ್ಯವಹಾರದಲ್ಲಿ ವ್ಯಾವಹಾರಿಕ ಭಾಷೆಯನ್ನಾಗಿ ಮಾಡುವುದರ ಜೊತೆಗೆ ಕನ್ನಡ ಮಾತನಾಡುತ್ತೇವೆ ಎಂದು ಪ್ರತಿಜ್ಞೆ ಮಾಡಬೇಕು. ಕನ್ನಡೇತರರಿಗೂ ಕನ್ನಡವನ್ನು ಕಲಿಸಲು ಪ್ರಯತ್ನಿಸಬೇಕು ಎಂದರು.

ಸಾಮಾಜಿಕ ಜಾಲತಾಣಗಳಲ್ಲಿ ಇತ್ತೀಚೆಗೆ ಕನ್ನಡ ಮತ್ತು ಕನ್ನಡಿಗರನ್ನು ಹೀಯಾಳಿಸುವ ಪ್ರವೃತ್ತಿ ಬೆಳೆಯುತ್ತಿದ್ದು, ಇದು ನಾಡ ದ್ರೋಹವಾಗಿದೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕೇಂದ್ರದಿಂದ ಕರ್ನಾಟಕಕ್ಕೆ ತೆರಿಗೆಯಲ್ಲಿ ಅನ್ಯಾಯ:

ಕರ್ನಾಟಕಕ್ಕೆ ತೆರಿಗೆ ಪಾಲು ನೀಡುವುದರಲ್ಲಿ ಕೇಂದ್ರ ಸರ್ಕಾರದಿಂದ ಬಹಳ ಅನ್ಯಾಯವಾಗುತ್ತಿದೆ. ಇಡೀ ದೇಶದಲ್ಲೇ ಅತಿ ಹೆಚ್ಚು ತೆರಿಗೆ ನೀಡುವ ಎರಡನೇ ರಾಜ್ಯ ಕರ್ನಾಟಕವಾಗಿದೆ. ನಾವು 4 ಲಕ್ಷ ಕೋಟಿಗೂ ಹೆಚ್ಚು ತೆರಿಗೆ ನೀಡಿದರೂ, ಕೇಂದ್ರದಿಂದ ದೊರೆಯುವ ತೆರಿಗೆ ಪಾಲು ಕೇವಲ 50 ರಿಂದ 60 ಸಾವಿರ ಕೋಟಿ ಮಾತ್ರ. ಅಂದರೆ ನಾವು ನೀಡುವ ಪ್ರತಿ ನೂರು ರೂಪಾಯಿಗೆ ಕೇಂದ್ರ ಸರ್ಕಾರ ಕೇವಲ ಹದಿಮೂರರಿಂದ ಹದಿನೈದು ಪೈಸೆ ಮಾತ್ರ. ರಾಜ್ಯಕ್ಕೆ ನ್ಯಾಯುತವಾಗಿ ಬರಬೇಕಾದ ತೆರಿಗೆ ಪಾಲನ್ನು ನೀಡಿ ಎಂದು ಕೇಂದ್ರಕ್ಕೆ ಮನವಿ ಮಾಡಲಾಗುತ್ತಿದೆ. ರಾಜ್ಯದ ಸಂಸದರು ಲೋಕಸಭೆಗೆ ಆಯ್ಕೆಯಾಗಿ ಹೋಗಿದ್ದು, ಲೋಕಸಭಾ ಅಧಿವೇಶನದಲ್ಲಿ ಕರ್ನಾಟಕ ರಾಜ್ಯದ ಪರವಾಗಿ ಧ್ವನಿ ಎತ್ತಬೇಕೆಂದರು ಕೇಂದ್ರದ ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರನ್ನು ಇದೇ ಸಂದರ್ಭದಲ್ಲಿ ಒತ್ತಾಯ ಮಾಡಿದರು.



ಬಡ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಉದ್ದೇಶದಿಂದ ಪೌಷ್ಟಿಕಾಂಶ ಆಹಾರ ನೀಡಲಾಗುತ್ತಿದೆ ಹಾಗೂ ಕನ್ನಡ ಸ್ಪಷ್ಟವಾಗಿ ಬರೆಯಲು ಮತ್ತು ಓದಲು ಬಾರದವರಿಗೆ ಕನ್ನಡ ಕಲಿಸುವ ಉದ್ದೇಶದಿಂದ "ಕನ್ನಡ ದೀವಿಗೆ" ಕಿರುಹೊತ್ತಿಗೆಯನ್ನು ಇಂದು ಲೋಕಾರ್ಪಣೆ ಮಾಡಲಾಗಿದೆ ಎಂದರು.

ನಮ್ಮ ಕರ್ನಾಟಕ ನಮ್ಮ ಹೆಮ್ಮೆ – ಡಿ.ಕೆ.ಶಿ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾತನಾಡಿ, ನಾವೆಲ್ಲರೂ ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿದ್ದೇವೆ. ಆಚಾರಕ್ಕೆ ಅರಸನಾಗು, ನೀತಿಗೆ ಪ್ರಭುವಾಗು, ಮಾತಿನಲ್ಲಿ ಚೂಡಾಮಣಿಯಾಗು, ಕನ್ನಡ ಜ್ಯೋತಿ ಜಗಕ್ಕೆಲ್ಲ ಬೆಳಗು ಎಂದು ನಮ್ಮ ಹಿರಿಯರು ಹೇಳಿದ್ದಾರೆ. ಕರ್ನಾಟಕ ಹೆಸರಾಗಿ, ಉಸಿರಾಗಿ ಇಂದು 51 ವರ್ಷಕ್ಕೆ ಕಾಲಿಟ್ಟಿದ್ದೇವೆ. ನಮ್ಮ ಸ್ವರ್ಗವೇ ಕರ್ನಾಟಕವಾಗಿದ್ದು, ಕನ್ನಡವೇ ನಮ್ಮ ದೈವ ಭಾಷೆ. ಕರ್ನಾಟಕದಲ್ಲಿ ತುಂಗಾ ಭದ್ರಾ, ಕಾವೇರಿ ನಮ್ಮ ಪಾಲಿಗೆ ಪುಣ್ಯ ತೀರ್ಥವಾಗಿದೆ. ನಮ್ಮ ಕರ್ನಾಟಕ ನಮ್ಮ ಹೆಮ್ಮೆಯಾಗಿದ್ದು, ಬದುಕು ನೀಡಿದ ಕನ್ನಡ ಮಾತೆಗೆ ನಮ್ಮ ನಮನ ಎಂದರು.

ಕನ್ನಡ ಭಾಷೆಯನ್ನು ಬದುಕಿನ ಭಾಷೆಯನ್ನಾಗಿಸುವುದು ನಮ್ಮ ಗುರಿ. ನಮ್ಮ ತಾಯ್ನಾಡಿಗೆ ಗೌರವ ಸಲ್ಲಿಸುವುದರೊಂದಿಗೆ ಈ ನೆಲಕ್ಕೆ ಕೃತಜ್ಞತೆ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯ. ಕರ್ನಾಟಕ ಕೀರ್ತಿ ಪತಾಕೆ ಹಾರಿಸುವುದರ ಜೊತೆಗೆ ಬದುಕಿನ ಪ್ರತಿಯೊಂದು ಕ್ಷಣವೂ ಕನ್ನಡವೇ ನಮ್ಮ ಉಸಿರಾಗಿರಬೇಕು ಎಂಬ ಉದ್ದೇಶದಿಂದ ಈಗಾಗಲೇ ನಮ್ಮ ರಾಜ್ಯದಲ್ಲಿ ಹಾಗೂ ಬೆಂಗಳೂರು ನಗರ ಜಿಲ್ಲೆಯಲ್ಲಿಯ ಸಹ ಈ ವರ್ಷ ಎಲ್ಲಾ ಶಾಲಾ ಸಂಸ್ಥೆಗಳು ಖಾಸಗಿ ಸಂಸ್ಥೆಗಳು ಕನ್ನಡ ಬಾವುಟವನ್ನು ಹಾರಿಸಬೇಕು ಎಂದು ಸರ್ಕಾರ ಮನವಿ ಮಾಡಿದೆ ಎಂದರು.

ನಮ್ಮ ರಾಜ್ಯದಲ್ಲಿ ನಾಡಿನ ಧ್ವಜ ಮತ್ತು ನಾಡಗೀತೆಗೆ ಬಹಳ ವಿಶೇಷವಿದೆ. ಯುವಕರು, ವಿದ್ಯಾರ್ಥಿಗಳು ಈ ದೇಶದ ಆಸ್ತಿಯಾಗಿದ್ದು, ಇಡೀ ವಿಶ್ವವೇ ನಮ್ಮನ್ನು ನೋಡುತ್ತಿದೆ. ತಾವೆಲ್ಲಾ ಎರಡು ಸಾವಿರ ವರ್ಷ ಇತಿಹಾಸವುಳ್ಳ ಕನ್ನಡ ಭಾಷೆ, ನೆಲ, ಸಂಸ್ಕೃತಿ, ಕರ್ನಾಟಕದ ಖ್ಯಾತಿಯನ್ನು ಬೆಳೆಸುವುದರ ಜೊತೆಗೆ ನಮ್ಮ ನಾಡಿನ ಇತಿಹಾಸವನ್ನು ಎತ್ತಿಹಿಡಿಯಬೇಕು ಎಂದು ತಿಳಿಸಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಎಸ್.ಮಧು ಬಂಗಾರಪ್ಪ ಮಾತನಾಡಿ, ನಮ್ಮ ಕರ್ನಾಟಕವು ಭಾಷೆ, ಶಿಲ್ಪಕಲೆ, ಸಾಹಿತ್ಯ, ಸಂಸ್ಕೃತಿ, ನೆಲ, ಜಲ, ಸಂಪತ್ತುಗಳಿಂದ ಸಮೃದ್ಧವಾಗಿದ್ದು, ಸಾಮಾಜಿಕವಾಗಿ, ಆರ್ಥಿಕವಾಗಿ ಪ್ರತಿಯೊಬ್ಬರೂ ಅಭಿವೃದ್ಧಿ ಹೊಂದಲು ಎಲ್ಲಾ ಅವಕಾಶಗಳನ್ನು ಒದಗಿಸಿದೆ. ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದೆ. ಅದಕ್ಕಾಗಿ ರಾಜ್ಯದಲ್ಲಿ ಉತ್ತಮ ಗುಣಮಟ್ಟದ ಶಾಲಾ ಶಿಕ್ಷಣವನ್ನು ನೀಡಲು ಸತತ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ರಾಜ್ಯದ ಎಲ್ಲಾ ಶಾಲೆಗಳಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಭಾಷೆ ಅಥವಾ ದ್ವಿತೀಯ ಭಾಷೆಯಾಗಿ ಭೋದಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ 70 ಸಾವಿರಕ್ಕೂ ಹೆಚ್ಚು ಸರ್ಕಾರಿ, ಅನುದಾನಿತ ಖಾಸಗಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 1 ಕೋಟಿ 4 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಶಾಲೆಗಳ ಗುಣಮಟ್ಟ ಹೆಚ್ಚಿಸಲು ಹಲವು ನೂತನ ಯೋಜನೆಗಳನ್ನು ಸರ್ಕಾರ ರೂಪಿಸಿದೆ. ನಮ್ಮ ಶಾಲೆ ನಮ್ಮ ಜವಾಬ್ದಾರಿ ಎಂಬ ಕಾರ್ಯಕ್ರಮದ ಮೂಲಕ ಪ್ರತಿ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿ ಸಂಘ ಸ್ಥಾಪಿಸಲಾಗಿದೆ. ತಾವು ಕಲಿತ ಶಾಲೆಗಾಗಿ ನೆರವು ನೀಡಲು ಹಳೆಯ ವಿದ್ಯಾರ್ಥಿಗಳು ಅಪಾರ ಸಂಖ್ಯೆಯಲ್ಲಿ ಮುಂದೆ ಬಂದಿದ್ದಾರೆ ಎಂದರು.

ಮಕ್ಕಳು ಪೌಷ್ಟಿಕ ಆಹಾರ ಸೇವಿಸಿ ಆರೋಗ್ಯವಂತರಾಗಿದ್ದರೆ ಅವರ ಕಲಿಕಾ ಸಾಮರ್ಥ್ಯ ಹೆಚ್ಚಾಗುತ್ತದೆ ಎಂಬ ಉದ್ದೇಶದಿಂದ ಸರ್ಕಾರ ಆ ಮಕ್ಕಳ ಆರೋಗ್ಯದ ಕಡೆ ಹೆಚ್ಚಿನ ಒತ್ತು ನೀಡಿ, ಮಕ್ಕಳಲ್ಲಿ ಪೋಷಕಾಂಶಗಳನ್ನು ಹೆಚ್ಚಿಸುವ ಸಲುವಾಗಿ ಈ ಹಿಂದೆ ಶಾಲೆಗಳಲ್ಲಿ ವಾರಕ್ಕೆ ಎರಡು ದಿನ ಮೊಟ್ಟೆ, ಚಿಕ್ಕೆ, ಬಾಳೆಹಣ್ಣು ನೀಡಲಾಗುತ್ತಿತ್ತು, ಈ ವರ್ಷದಿಂದ ಅಜೀಂ ಪ್ರೇಮ್ ಜೀ ಫೌಂಡೇಶನ್ ಸಹಯೋಗದೊಂದಿಗೆ ಶಾಲಾ ಶಿಕ್ಷಣ ಇಲಾಖೆಯು ವಾರದಲ್ಲಿ 6 ದಿನ ಮೊಟ್ಟೆ ನೀಡುತ್ತಿದೆ. ಈ ಹಿಂದೆ ವಾರದ ಐದು ದಿನಗಳು ಬಿಸಿ ಹಾಲು ನೀಡಲಾಗುತ್ತಿತ್ತು. ಕಳೆದ ಸಾಲಿನಿಂದ ಶ್ರೀ ಸತ್ಯಸಾಯಿ ಟ್ರಸ್ಟ್ ಸಹಯೋಗದಲ್ಲಿ ಹಾಲಿನೊಂದಿಗೆ ವಾರಕ್ಕೆ ಮೂರು ದಿನ ರಾಗಿ ಮಾಲ್ಟ್ ಸಹ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಉಚಿತ ವಿದ್ಯುತ್ ಮತ್ತು ನೀರು ಸೌಲಭ್ಯ ಜಾರಿಗೊಳಿಸಲಾಗಿದೆ ಎಂದರು.

ಸರ್ಕಾರಿ ಶಾಲೆಗಳ ನಿರ್ವಹಣಾ ಅನುದಾನವನ್ನು ಹೆಚ್ಚಿಸಲಾಗಿದ್ದು, ರೂ. 117 ಕೋಟಿಯನ್ನು ಖರ್ಚು ಮಾಡಲಾಗುತ್ತಿದೆ. ಕಾರ್ಪೊರೇಟ್ ಸಂಸ್ಥೆಗಳ ಸಿಎಸ್‌ಆರ್ ನಿಧಿಯಡಿಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಮೊದಲ ಹಂತದಲ್ಲಿ 500 ಕರ್ನಾಟಕ ಪಬ್ಲಿಕ್ ಶಾಲೆಗಳು ಹಾಗೂ ಗ್ರೀನ್‌ಫೀಲ್ಡ್ ಯೋಜನೆಯಡಿ 100 ಶಾಲೆಗಳನ್ನು ಗುರುತಿಸಲಾಗಿದ್ದು, ಈ ಶಾಲೆಗಳ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಭಾರತ ಸಂವಿಧಾನದ ಪೀಠಿಕೆಯನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ವಿದ್ಯಾರ್ಥಿಗಳು ಪ್ರಾರ್ಥನಾ ಸಮಯದಲ್ಲಿ ಓದುವ ಮತ್ತು ಪ್ರತಿಜ್ಞೆ ಮಾಡುವ ಮೂಲಕ ಸಂವಿಧಾನದ ಮೂಲತತ್ವಗಳನ್ನು ಮೈಗೂಡಿಸಿಕೊಳ್ಳುತ್ತಿದ್ದಾರೆ. ಸುಮಾರು 1 ಕೋಟಿ 4 ಲಕ್ಷ ವಿದ್ಯಾರ್ಥಿಗಳು ಸಂವಿಧಾನದ ಪೀಠಿಕೆಯನ್ನು ಓದುತ್ತಿದ್ದಾರೆ. ಈಗಿನಿಂದಲೇ ಮಕ್ಕಳಿಗೆ ಸಮಾನತೆ, ಭ್ರಾತೃತ್ವ ಮತ್ತು ಸಾಂವಿಧಾನಿಕ ಮೌಲ್ಯಗಳನ್ನು ಭಿತ್ತಿ ನಾಡಿನ ಉತ್ತಮ ಪ್ರಜೆಗಳನ್ನಾಗಿ ರೂಪಿಸುವುದು ಸರ್ಕಾರದ ಆಶಯವಾಗಿದೆ ಎಂದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ರಿಜ್ವಾನ್ ಅರ್ಷದ್ ಮಾತನಾಡಿ, ಕನ್ನಡ ರಾಜ್ಯೋತ್ಸವ ಎಲ್ಲಾ ಕನ್ನಡಗರಿಗೆ ದೊಡ್ಡ ಹಬ್ಬವಾಗಿದೆ. ಕನ್ನಡ ಭಾಷೆಗೆ ಶ್ರೇಷ್ಠ ಪರಂಪರೆ ಇತಿಹಾಸವಿದೆ. ಎಂಟು ಜ್ಞಾನಪೀಠ ಪ್ರಶಸ್ತಿ ಪಡೆದ ಹೆಗ್ಗಳಿಕೆ ಕರ್ನಾಟಕದ್ದಾಗಿದೆ. ನಮ್ಮ ಕಲೆ, ಸಂಸ್ಕೃತಿ, ನಾಡಿನ ಹಿರಿಮೆಯು ವಿಶ್ವದಲ್ಲೇ ಪ್ರಸಿದ್ದಿ ಪಡೆದಿದೆ. ಮಾಹಿತಿ ತಂತ್ರಜ್ಞಾನವನ್ನು ಬೆಂಗಳೂರಿನವರು ಇಡೀ ವಿಶ್ವಕ್ಕೆ ಪರಿಚಯಿಸಿದ್ದಾರೆ. ನಮ್ಮ ರಾಜ್ಯದ ನೆಲ, ಜಲ, ಭಾಷೆ, ಮಣ್ಣಿನ ಕಣ-ಕಣದಲ್ಲೂ ಅಡಗಿದೆ ಎಂದರು. ಸಮಾರಂಭದಲ್ಲಿ 16 ತಂಡಗಳು ಪಥಸಂಚಲನ ನಡೆಸಿದವು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಮಧು ಬಂಗಾರಪ್ಪ ಗೌರವ ವಂದನೆ ಸ್ವೀಕರಿಸಿದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಮಗಳನ್ನು ಏರ್ಪಡಿಸಲಾಗಿತ್ತು. ಸಮಾರಂಭದಲ್ಲಿ ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಶಾಸಕ ಎನ್.ಎ.ಹ್ಯಾರಿಸ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಿತೇಶ್‌ಕುಮಾರ್ ಸಿಂಗ್, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತ ಡಾ.ಕೆ.ವಿ.ತ್ರಿಲೋಕ್‌ಚಂದ್ರ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದೇಶ ಕಂಡ ಅಪ್ರತಿಮ ನಾಯಕ ಸರ್ದಾರ್ ಪಟೇಲ್

## ಬೆಳಗಾವಿ ಜಿಲ್ಲಾ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಸುಭಾಷ ಪಾಟೀಲ

**ಬೆಳಗಾವಿ.** 1947ರ ಆಗಸ್ಟ್ 5ರಂದು ದಾಖಲೆಗಳಲ್ಲಿ ಭಾರತಕ್ಕೆ ಸ್ವಾತಂತ್ರ್ಯ ದೊರೆಯಿತು. ಆದರೆ ದೇಶದಾದ್ಯಂತ ಹಬ್ಬಿದ್ದ ನೂರಾರು ರಾಜಸಂಸ್ಥಾನಗಳನ್ನು ಭಾರತ ಒಕ್ಕೂಟದಲ್ಲಿ ವಿಲೀನಗೊಳಿಸುವುದು ಸವಾಲೇ ಆಗಿತ್ತು. ಈ ಕೆಲಸವನ್ನು ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ, ರೈತ ಚಳವಳಿಯ ರೂವಾರಿ, ಗೃಹಸಚಿವರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಸಮರ್ಥವಾಗಿ ಮಾಡಿದರು. ಪ್ರೀತಿ ಬಳಸುವಲ್ಲಿ ಪ್ರೀತಿಯಿಂದ, ದಂಡಪ್ರಯೋಗ ಮಾಡಬೇಕಾದಲ್ಲಿ ಅದರಿಂದ ಕೆಲಸ ಸಾಧಿಸಿದರು; ಒಕ್ಕೂಟ ಭಾರತವನ್ನು ಕಟ್ಟಿದರು. ಇಂದು ಭಾರತವೊಂದು ಒಕ್ಕೂಟವಾಗಿ ಉಳಿದಿದ್ದರೆ ಅದು ಅವ-ರಿಂದಲೇ. ಅವರ ನೆನಪಿನಲ್ಲೆ ಪ್ರಧಾನಿ ನರೇಂದ್ರ ಮೋದಿಜಿ ಅವರ ನೇತೃತ್ವದ ಸರಕಾರ ಪಟೇಲ್ ಅವರ ಜನ್ಮದಿನವಾದ ಅಕ್ಟೋಬರ್ 31ನ್ನು 'ಏಕತಾ ದಿವಸ್' ಎಂದು ಘೋಷಿಸಿದೆ ಎಂದು ಬೆಳಗಾವಿ ಜಿಲ್ಲಾ ಬಿಜೆಪಿ (ಗ್ರಾಮಾಂತರ ) ಅಧ್ಯಕ್ಷ ಸುಭಾಷ ಪಾಟೀಲ ಹೇಳಿದರು.

ಸೋಮವಾರದಂದು ಭಾರತೀಯ ಜನತಾ ಪಾರ್ಟಿ ಬೆಳಗಾವಿ ಜಿಲ್ಲೆಯ ವತಿಯಿಂದ *ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜನುಮದಿನದ ನಿಮಿತ್ತವಾಗಿ "ರನ್ ಫಾರ್ ಯುನಿಟಿ"* ಅಂದರೆ *"ಏಕತೆಗಾಗಿ ಓಟ"* ಕಾರ್ಯಕ್ರಮದಲ್ಲಿ ಮಾತನಾಡಿದರು.




ಮಾಜಿ ಶಾಸಕ ಸಂಜಯ್ ಪಾಟೀಲ್ ಮಾತನಾಡಿ 1919ರಲ್ಲಿ ಗುಜರಾತಿನ ಖೇಡಾ ಪ್ರಾಂತ ತೀವ್ರ ಕ್ಷಾಮದಿಂದ ತತ್ತರಿಸುತ್ತಿದ್ದು, ಅಲ್ಲಿಯ ರೈತರು ಕರ ವಿನಾಯಿತಿಗೆ ಬೇಡಿಕೆಯಿಟ್ಟರು. ಪಟೇಲರು ಹಳ್ಳಿಹಳ್ಳಿ ತಿರುಗಿ, ರಾಜ್ಯವ್ಯಾಪಿ

ಆಂದೋಲನದಲ್ಲಿ ತೊಡಗಿಸಿದರು. ರಾಜ್ಯದೆಲ್ಲೆಡೆ ಎಲ್ಲರಿಗೂ ಪಟೇಲರ ನಾಯಕತ್ವ ಒಪ್ಪಿಗೆಯಾಯಿತು. ಬ್ರಿಟಿಷ್ ಅಧಿಕಾರಿಗಳ ದೌರ್ಜನ್ಯದ ನಡುವೆಯೂ ಹಿಂಸಾತ್ಮಕವಾಗಿ

ಸಾಗಿದ ಈ ಚಳವಳಿಗೆ ಸರಕಾರ ಮಣಿದು, ಕರವನ್ನು ಮುಂದೂಡಿತು. ಪಟೇಲರು ಈ ಸತ್ಯಾಗ್ರಹದಿಂದ ಮಹಾನಾಯಕ ಎಂದು ಗುಜರಾತಿ ಜನಮನ್ನಣೆ ಪಡೆದರು. 1919ರಿಂದ1928ರವರೆಗೆ ಪಟೇಲರು, ಅಸ್ಪೃಶ್ಯತೆ, ಮದ್ಯಪಾನದ ವಿರುದ್ಧ ವ್ಯಾಪಕ ಚಳವಳಿ ನಡೆಸಿದರು. 1922ರಲ್ಲಿ ಅಹಮದಾಬಾದಿನ ಮುನಿಸಿಪಾಲಿಟಿಯ ಅಧ್ಯಕ್ಷ ರಾಗಿ ವಿದ್ಯುತ್ ಸರಬರಾಜು, ಚರಂಡಿ ಹಾಗೂ ನೈರ್ಮಲ್ಯ ವ್ಯವಸ್ಥೆ, ಹಾಗೂ ಶಿಕ್ಷ ಣ ವ್ಯವಸ್ಥೆಗಳಲ್ಲಿ ಭಾರಿ ಸುಧಾರಣೆ ತಂದರು. 1928ರಲ್ಲಿ ಬಾರ್ಡೋಲಿಯು ಕ್ಷಾಮಕ್ಕಿಡಾಯಿತು. ಸರಕಾರ ಕಂದಾಯವನ್ನು ಹೆಚ್ಚು ಮಾಡಿತು. ಇದರ ವಿರುದ್ಧ ಪಟೇಲರು ಜನಸಮೂಹವನ್ನು ಒಟ್ಟುಗೂಡಿಸಿ ನಡೆಸಿದ ಪ್ರತಿಭಟನೆ ದೇಶದಲ್ಲೆಲ್ಲ ಹೆಸರು ಮಾಡಿತು ಎಂದು ಹೇಳಿದರು. ಈ ಸಂದರ್ಭದಲ್ಲಿ ಭಾ.ಜ.ಪಾ ರಾಜ್ಯ ಉಪಾಧ್ಯಕ್ಷ ಅನಿಲ್ ಬೆನಕೆ, ಶಾಸಕ ವಿಠ್ಠಲ್ ಹಲಗೆಕರ್, ಮಹಾನಗರ ಜಿಲ್ಲಾಧ್ಯಕ್ಷರಾದ ಗೀತಾ ಸುತಾರ, ಮಹಾಪೌರರಾದ ಸವಿತಾ ಕಾಂಬಳೆ, ಮಾಜಿ ಶಾಸಕ ಅರವಿಂದ ಪಾಟೀಲ,

ಭಾ.ಜ.ಪಾ ಮುಖಂಡ ರವಿ ಪಾಟೀಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್ ಮಾದಮ್ಮನವರ, ರಾಜ್ಯ ಸಾಮಾಜಿಕ ಜಾಲತಾಣ ಸದಸ್ಯ ನಿತಿನ್ ಚೌಗಲೆ, ಜಿಲ್ಲಾ ಮಾಧ್ಯಮ ಪ್ರಮುಖ್ ಸಚಿನ್ ಕಡಿ, ಜಿಲ್ಲಾ ಪ್ರಕೋಷ್ಠಗಳ ಸಂಯೋಜಕ ಮಹೇಶ್ ಮೋಹಿತೆ, ಪ್ರಶಾಂತ್ ಅಮ್ಮಿನಭಾವಿ, ಸುಭಾಷ್ ಸಣ್ಣವೀರಪ್ಪನವರ, ಚೇತನ್ ಅಂಗಡಿ, ಪ್ರಸಾದ್ ದೇವರಮನಿ, ವಿಠ್ಠಲ್ ಸಾಯಣ್ಣವರ,ಮನೋಜ್ ಪಾಟೀಲ್, ಪ್ರವೀಣ್ ಶಿಂಗಾರಿ, ನಾಗಪ್ಪ ಸಂಗೊಳ್ಳಿ , ಶ್ರೀಕಾಂತ್ ಬೆಲ್ಲದ, ಧನ್ಯಕುಮಾರ ಪಾಟೀಲ್ ಹಾಗೂ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಮಾಜದ ಧ್ವನಿಯಾಗಿ ಕೆಲಸ ಮಾಡಲಿ

**ರಬಕವಿ-ಬನಹಟ್ಟಿ:** ಸಂಘ-ಸಂಸ್ಥೆಗಳು ಸಮಾಜದ ಧ್ವನಿಯಾಗಿ ಕೆಲಸ ಮಾಡಬೇಕೆಂದು ಬನಹಟ್ಟಿಯ ಹಿರೇಮಠದ ಶ್ರೀ ಶರಣಬಸವ ಶಿವಾಚಾರ್ಯರು ನುಡಿದರು.

ತಾಲೂಕಿನ ನಾವಲಗಿ ಗ್ರಾಮದಲ್ಲಿ ಜಂಗಮ ಸಮಾಜದ ವತಿಯಿಂದ ಜಗದ್ಗುರು ರೇಣುಕಾಚಾರ್ಯ ಯುವಕ ಸಂಘದ ಉದ್ಘಾಟನೆ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಸಮಾಜದಲ್ಲಿರುವ ಬಡವರ ಪರ ಟೊಂಕಕಟ್ಟಿ ಸರ್ವ ಪದಾಧಿಕಾ-ರಿಗಳು ನಿಂತುಕೊಂಡು ಮೇಲೆತ್ತುವ ಕಾರ್ಯ ಮಾಡಿದಾಗ ಮಾತ್ರ ಸಂಘ ಸ್ಥಾಪನೆಗೊಂಡಿರುವುದಕ್ಕೆ ನಿಜಕ್ಕೂ ಸಾರ್ಥಕವಾಗುತ್ತದೆ ಎಂದು ಹೇಳಿದರು.

ತೇರದಾಳ- ನಾವಲಗಿಯ ಗಂಗಾಧರ ಶ್ರೀಗಳು ಮಾತನಾಡಿ ಸಂಘಟನೆಯಿಂದ ಸಮಾಜಕ್ಕೆ ಬಲ ಬರುತ್ತದೆ ಸರ್ವ ಸದಸ್ಯರು ಹೊದಾಣಿಕೆಯಿಂದ ಪ್ರತಿಯೊಬ್ಬರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಗ್ಗಟ್ಟಿನಿಂದ ಕೆಲಸ ಮಾಡಬೇಕೆಂದರು.

ಪ್ರವಚನ ಕೇಸರಿ ಶ್ರೀಶೈಲಯ ಹಿರೇಮಠ ಶ್ರೀಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯ ಮೇಲೆ ಮರೇಗುದ್ದಿಯ ಅಡವಿ ಸಿದ್ದೇಶ್ವರ ಮಠದ ಗುರುಪಾದ ಸ್ವಾಮೀಜಿ, ಮುತ್ತಿನಕಂತಿಮಠದ ಶಿವಲಿಂಗ ಶಿವಾಚಾರ್ಯರು, ಸಿದ್ದು ಕೊಣ್ಣೂರ, ವಿದ್ಯಾಧರ ಸವದಿ, ಜಮಖಂಡಿಎ-ಮ ಜಂಗಮ ಸಮಾಜದ ಹಿರಿಯರಾದ ಅಶೋಕ ಗಾಂವಿ, ದುರದುಂಡಯ್ಯ ಲಿಂಗದ, ಶಿವಪುತ್ರಯ್ಯ ಸಿದ್ದಗಿರಿಮಠ, ಗ್ರಾಪಂ ಅಧ್ಯಕ್ಷ ಸದಾಶಿವ ಸವದಿ, ಶಿವಾನಂದ ಬಾಗಲಕೋಟಮಠ, ಬಸಯ್ಯ ಶ್ರೀ ಹಿರೇಮಠ, ಗುರು ಮರಡಿಮಠ, ಶಿವಲಿಂಗಯ್ಯ ಅಮ್ಮಣ-ಗಿಮಠ, ಅಶೋಕ ಮರಡಿಮಠ, ಮುಪ್ಪಯ್ಯ ಹಿರೇಮಠ, ಶಿವಲಿಂಗಯ್ಯ ಅಮಣ್ಣಗಿಮಠ, ಮಲ್ಲಪ್ಪ ಗಣಿ, ದಾನಪ್ಪ ಅಸಂಗಿ, ಬಸಯ್ಯ ಹಿರೇಮಠ, ಸಂಘದ ಅಧ್ಯಕ್ಷ ಗಂಗಯ್ಯ ಹಿರೇಮಠ, ಕುಮಾರ ಹಿರೇಮಠ, ಬಸಯ್ಯ ಕಾಢದೇವರ, ಮಹಾಂತೇಶ ಕಾಡದೇವರ ಸೇರಿದಂತೆ ಅನೇಕರಿದ್ದರು.



**ಚೂರು-ಪಾರು**

## ಪೃಥ್ವಿ ಬ್ಯಾಕೊಡಗೆ ಜಿಲ್ಲಾ ರಾಜ್ಯೋತ್ಸವ

**ಮಹಾಲಿಂಗಪುರ:** ಸಮೀಪದ ಕೆಸರಗೊಪ್ಪ ಗ್ರಾಮದ ಪೃಥ್ವಿ ಧರೆಪ್ಪ ಬ್ಯಾಕೋಡ ಕ್ರೀಡಾಕ್ಷೇತ್ರದಲ್ಲಿ ಬಾಗಲಕೋಟೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಅತಿ ಕಿರಿಯ ವಯಸ್ಸಿನಲ್ಲಿ ಹಿರಿಯ ಸಾಧನೆ ಮಾಡಿ ಜಿಲ್ಲಾ



ಮಟ್ಟದ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಕೆಸರಗೊಪ್ಪ ಗ್ರಾಮದ ಈ ಸಾಧಕಿ ಇತ್ತೀಚೆಗೆ ಜರುಗಿದ ರಾಷ್ಟ್ರಮಟ್ಟದ ಜೂನಿಯರ್ ಚಾಂಪಿಯನ್ ಶಿಪ್ 35ನೇ ಸೌಥ್ ಝೋನ್ ಕ್ರೀಡಾಕೂಟದಲ್ಲಿ ಬಂಗಾರದ ಪದಕ ಗೆದ್ದು ಕ್ರೀಡಾ ಕ್ಷೇತ್ರದಲ್ಲಿ ಮಾಡಿದ ಸಾಧನೆ ಗುರುತಿಸಿ 2024ರ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ನ. 1 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ನೇತೃತ್ವದಲ್ಲಿ ಪ್ರಶಸ್ತಿ ಪ್ರದಾನವಾಗಲಿದೆ. ಕೆಸರಗೊಪ್ಪ ಗ್ರಾಮದ ಗುರುಹಿರಿಯರು, ಕುಟುಂಬ ವರ್ಗದವರು, ಗ್ರಾಮದ ಮಾಜಿ ಹಾಗೂ ಹಾಲಿ ಕ್ರೀಡಾಪಟುಗಳು ಮತ್ತು ಶಿಕ್ಷಕ ಬಂಧುಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ರಾಜ್ಯೋತ್ಸವ ಪ್ರಶಸ್ತಿ ಪ್ರದಾನ, ಪುಸ್ತಕ ಬಿಡುಗಡೆ ಇಂದು

**ಬಸವನಬಾಗೇವಾಡಿ:** ಪಟ್ಟಣದ ವಿರಕ್ತಮಠದಲ್ಲಿ ಕರುನಾಡು ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕ ಹಾಗೂ ತಾಲೂಕು ಘಟಕದ ಸಹಯೋಗದಲ್ಲಿ ನ.2 ರಂದು ಮಧ್ಯಾನ್ನ 2 ಗಂಟೆಗೆ ಕರ್ನಾಟಕ ರಾಜ್ಯೋತ್ಸವ ಸಮಾರಂಭ ಹಮ್ಮಿಕೊಂಡಿದೆ. ಈ ಸಮಾರಂಭದಲ್ಲಿ ಪೂಜ್ಯರಿಗೆ ಬಿನ್ನವತ್ತಳೆ ಸಮರ್ಪಣೆ, ಕರುನಾಡು ರಾಜ್ಯೋತ್ಸವ ಪ್ರಶಸ್ತಿ ಪ್ರದಾನ, ಚುಟುಕು ಕವಿಗೋಷ್ಠಿ ಹಾಗೂ ಪುಸ್ತಕ ಬಿಡುಗಡೆ ಕಾರ್ಯಕ್ರಮ ಜರುಗಲಿದೆ. ಬಸವನಬಾಗೇವಾಡಿಯ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಹಾಗೂ ಹೂಣಶ್ಯಾಳ ಪಿಬಿ ಹಿರೇಮಠದ ಆನಂದ ದೇವರಿಗೆ ಬಿನ್ನವತ್ತಳೆ ಸಮರ್ಪಣಾ ಕಾರ್ಯಕ್ರಮ ನಡೆಯಲಿದೆ. ಸಮಾರಂಭ ಅಧ್ಯಕ್ಷತೆಯನ್ನು ತಾಲೂಕು ಕಸಾಪ ಮಾಜಿ ಅಧ್ಯಕ್ಷ ವಿವೇಕಾನಂದ ಕಲ್ಯಾಣಶೆಟ್ಟಿ ವಹಿಸುವರು. ನರಸಲಗಿಯ ಎಂ.ಡಿ.ಎಸ್ ಪಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಎ.ಎಂ. ನರಸರಡ್ಡಿ ಸಮಾರಂಭ ಉದ್ಘಾಟಿಸುವರು. ಕರುನಾಡು ಸಾಹಿತ್ಯ ಪರಿಷತ್ತಿನ ತಾಲೂಕಾ ಅಧ್ಯಕ್ಷ ನೀಲಪ್ಪ ಅಂಗಡಿ ಉಪಸ್ಥಿತಿರುವರು. ತಾಲೂಕು ಕಸಾಪ ನಿಕಟಪೂರ್ವ ಅಧ್ಯಕ್ಷ ಶಿವರುದ್ರಯ್ಯ ಹೀರೇಮಠ ಅವರು ಲೇಖಕಿ ರುಬಿಯಾ ಬೇಗಂ ನದಾಫ್ ರವರ ಚೊಚ್ಚಲ ಕೃತಿ ಏಳುಬೀಳಿನ ಹಾದಿ ಆತ್ಮಕಥೆ-'ನ ಪುಸ್ತಕ ಬಿಡುಗಡೆ ಮಾಡಲಿದ್ದಾರೆ. ಕಜಾಪ ತಾಲೂಕು ಅಧ್ಯಕ್ಷ ದೇವೇಂದ್ರ ಗೋನಾಳ ಏಳುಬೀಳಿನ ಹಾದಿ ಪುಸ್ತಕ ಪರಿಚಯ ಮಾಡಲಿದ್ದಾರೆ. ಸಹಾಯಕ ಪ್ರಾಧ್ಯಾಪಕ ಡಾ. ಬಸವರಾಜ ಹಡಪದ ಅವರು ಸಾಹಿತಿ ಪ್ರಭಾಕರ ಖೇಡದ ಅವರ ನಲವತ್ತರ ಬಾಲಕಿ ಕಥಾಸಂಕಲನ ಪರಿಚಯ ಮಾಡಲಿದ್ದಾರೆ. ಇದೇ ಸಂದರ್ಭದಲ್ಲಿ ಖ್ಯಾತ ರಂಗಭೂಮಿ ನಿರ್ದೇಶಕ ಬಾಬು ಮಾಸ್ತರ ಟಕ್ಕಳಕಿ ಹಾಗೂ ಪತ್ರಕರ್ತೆ ಲಕ್ಷ್ಮೀ ಬಾಗಲಕೋಟಿ ಅವರಿಗೆ ಕರುನಾಡು ರಾಜ್ಯೋತ್ಸವ ರಾಜ್ಯ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ. ಬಸವನಾಡಿನ ಕವಿ,ಕವಯಿತ್ರಿಯರಿಂದ ಚುಟುಕು ಕವಿಗೋಷ್ಠಿ ನಡೆಯಲಿದೆ ಎಂದು ಕರುನಾಡು ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಅಸ್ಲಂ ಶೇಖ ನರಸಲಗಿ ತಿಳಿಸಿದ್ದಾರೆ.



**ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಬಸವನಬಾಗೇವಾಡಿಯ ಜನಪದ ಗಾಯಕ ಬಸವರಾಜ ಹಾರಿವಾಳ ಅವರ ನಿವಾಸಕ್ಕೆ ತೆರಳಿದ ಗುರುವಾರ ಹಿರಿಯ ಸಾಹಿತಿ ಲ.ರು.ಗೊಳಸಂಗಿ ದಂಪತಿ ಜನಪದ ಗಾಯಕ ಬಸವರಾಜ ಹಾರಿವಾಳ, ಮಹಾದೇವಿ ಹಾರಿವಾಳ ದಂಪತಿಗಳನ್ನು ಸನ್ಮಾನಿಸಿದರು.**

# ಕನ್ನಡ ಅನುಷ್ಠಾನಕ್ಕೆ ಬೇಕಾದ ಅಗತ್ಯ ಕ್ರಮ ಕೈಗೊಳ್ಳಲಾಗಿದೆ

## ಉಡುಪಿಯಲ್ಲಿ ರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ

**ಉಡುಪಿ:** ಉಡುಪಿ ಜಿಲ್ಲಾಡಳಿತ ವತಿಯಿಂದ ಅಜ್ಜರಕಾಡಿನ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಧ್ವಜಾರೋಹಣ ನೆರವೇರಿಸಿದರು.

ಬಳಿಕ ಶಾಲಾ-ಕಾಲೇಜು ವಿದ್ಯಾರ್ಥಿಗಳು ನಡೆಸಿಕೊಟ್ಟ ಪಥ ಸಂಚಲದಲ್ಲಿ ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ದೇಶದ ಭಾಷೆ ಮತ್ತು ಸಾಹಿತ್ಯ ಪರಂಪರೆಯಲ್ಲಿ ಕನ್ನಡ ನಾಡು ಮತ್ತು ಕನ್ನಡ ಭಾಷೆಗೆ ಉನ್ನತ ಸ್ಥಾನವಿದೆ. ಕನ್ನಡ ಭಾಷೆಯು 8 ಬಾರಿ ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿರುವುದು ನಮ್ಮ ಸಾಹಿತ್ಯ ಭಾಷೆಯ ಶ್ರೀಮಂತಿ-ಕೆಯನ್ನು ತೋರಿಸುತ್ತದೆ. ಕನ್ನಡ ಬರಿ ಭಾಷೆಯಲ್ಲ. ಇದೊಂದು ಶಕ್ತಿ. ನಮ್ಮ ನಾಡು-ನುಡಿ, ಸಂಸ್ಕೃತಿಗೆ ಭವ್ಯವಾದ 2000 ವರ್ಷಗಳಿಗೂ ಮೀರಿದ ಇತಿಹಾಸವಿದೆ. ಕಾವೇರಿಯಿಂದ ಗೋದಾವರಿಯವರೆಗೆ ಕನ್ನಡ ನಾಡು ಹಬ್ಬಿದೆ ಎಂದು ಕನ್ನಡದ ಮೊದಲ ಕೃತಿ "ಕವಿರಾಜಮಾರ್ಗ" ದಲ್ಲಿ ಉಲ್ಲೇಖಿಸಿರುವುದು ಇದಕ್ಕೆ ಸಾಕ್ಷಿ ಎಂದರು.

ಇಂತಹ ಭವ್ಯ ಪರಂಪರೆಯ ಈ ನಮ್ಮ ನೆಲದ ಸಂಪತ್ತು, ಸಂಪ್ರದಾಯ, ಪರಂಪರೆ, ಕಲೆ, ಸಂಸ್ಕೃತಿ ಹಾಗೂ ಭಾಷೆ ಇವುಗಳನ್ನೆಲ್ಲಾ ಉಳಿಸಿ-ಬೆಳೆಸಿಕೊಂಡು ಹೋಗುವುದು ಪ್ರತಿಯೊಬ್ಬ ಕನ್ನಡಿಗರ ಆದ್ಯ ಕರ್ತವ್ಯ..

ಆಡಳಿತದಲ್ಲಿ ಕನ್ನಡ ನೂರಕ್ಕೆ ನೂರರಷ್ಟು ಬಳಕೆಯಾಗಬೇಕು. ನಮ್ಮ ಸರ್ಕಾರದ ಆಶಯವೂ ಅದೇ ಆಗಿದೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ದೃಢ ಹೆಜ್ಜೆಗಳನ್ನು ಇಟ್ಟಿದೆ. ಕನ್ನಡ ಅನುಷ್ಠಾನಕ್ಕೆ ಬೇಕಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ನಮ್ಮ ಯುವ ಪೀಳಿಗೆಗೆ




ಸಾಹಿತ್ಯ, ಪರಿಸರ, ಜನಪದ ಕಲೆಗಳನ್ನು ಉಳಿಸಲು ಹಾಗೂ ಸಂಸ್ಕೃತಿಯ ಪರಿಚಯ ಮಾಡಿಸಲು ಅನೇಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ಅಧಿನಿಯಮವನ್ನು ತಿದ್ದುಪಡಿ ಮಾಡುವ ಮೂಲಕ ಸರ್ಕಾರ ಅಥ-'ವಾ ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್ ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು ಹಾಗೂ ಹೋಟೆಲ್‌ಗಳು ಮುಂತಾದವುಗಳು ತಮ್ಮ ನಾಮಫಲಕಗಳಲ್ಲಿ ಕನ್ನಡ ಭಾಷೆಯಲ್ಲಿ ಕನಿಷ್ಠ ಶೇ.60 ರಷ್ಟು ಪ್ರದರ್ಶಿಸಬೇಕು ಹಾಗೂ ಕನ್ನಡ ಭಾಷೆಯು ನಾಮ ಫಲಕದ ಮೇಲ್ಭಾಗದಲ್ಲಿ ಪ್ರದರ್ಶಿತವಾಗಿದೆ ಎಂದು ಸ್ಥಳೀಯ ಸಂಸ್ಥೆಗಳು ಖಚಿತ ಪಡಿಸಿಕೊಳ್ಳತಕ್ಕದ್ದು ಎಂದು ಸೂಚಿಸಲಾಗಿದೆ.

ರಾಜ್ಯ ಸರಕಾರಿ ನೌಕರರು ಕಡ್ಡಾಯವಾಗಿ ತಮ್ಮ ಗುರುತಿನ ಚೀಟಿಗೆ ಕನ್ನಡ ಧ್ವಜದ ಬಣ್ಣವಾದ ಹಳದಿ - ಕೆಂಪು ಬಣ್ಣದ ಕೊರಳು ದಾರ ಹಾಕುವಂತೆ ಆದ-'ೇಶ ಹೊರಡಿಸಲಾಗಿದೆ. ಕರ್ನಾಟಕದಲ್ಲಿ ಕನ್ನಡಕ್ಕೆ ಮೊದಲ ಆದ್ಯತೆ ನೀಡುವುದರಲ್ಲಿ ನಮ್ಮ ಸರಕಾರ ಹಿಂದೆ ಬಿದ್ದಿಲ್ಲ.ಸಮೃದ್ಧ ಕರ್ನಾಟಕ ನಿರ್ಮಾಣ ಮಾಡುವುದೇ ನಮ್ಮ ಸರ್ಕಾರದ ಪ್ರಮುಖ ಉದ್ದೇಶವಾಗಿದೆ. ಸರ್ವರಿಗೂ ಸಾಮಾಜಿಕ ಹಾಗೂ ಆರ್ಥಿಕ ಸ್ವಾತಂತ್ರ್ಯ ನೀಡಲು ಅನೇಕ ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ. ಈ ಮೂಲಕ ಜನರ ರಾಜಕೀಯ, ಆರ್ಥಿಕ ಮತ್ತು ಸಾಮಾಜಿ-ಕ ಸ್ವಾತಂತ್ರ್ಯಕ್ಕೆ ಯಾವುದೇ ರೀತಿಯ ಧಕ್ಕೆ ಆಗದಂತೆ ನೋಡಿಕೊಳ್ಳುವುದು ನಮ್ಮ ಸರ್ಕಾರದ ಕಳಕಳಿಯಾಗಿದೆ. ನಮ್ಮ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ದಿವಾಳಿ ಆಗಲಿದೆ ಎಂದು ನಿರೀಕ್ಷೆ ಮಾಡಿದವರಿಗೆ ಈಗ ಭ್ರಮನಿರಸನವಾಗಿದೆ. ಇವುಗಳ ನಡುವೆಯೂ ನಾವು ಆರ್ಥಿಕ ಬೆಳವಣಿಗೆ ಸಾಧಿಸಿ ತೋರಿಸಿ ಅವರಿಗೆ ಉತ್ತರ ನೀಡಿದ್ದೇವೆ.

ನಾಡಿನಲ್ಲಿ ಕನ್ನಡವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಲು ಸರ್ವತೋಮುಖವಾಗಿ ಬೆಳೆಸಲು ನಮ್ಮ ಸರ್ಕಾರಕ್ಕೆ ಸಂಪೂರ್ಣ ಬದ್ಧತೆ ಇದೆ. ಇದಕ್ಕೆ ನಮ್ಮ ಕನ್ನಡದ ಜನರೂ ಪೂರ್ಣ ಸಹಕಾರ ನೀಡಬೇಕು. ಕನ್ನಡ ನಾಡಿನಲ್ಲಿ ಕನ್ನಡದ ಮನಸ್ಸುಗಳು ನಿರ್ಮಾಣವಾಗಬೇಕು. ಕನ್ನಡ ಪುಸ್ತಕಗಳನ್ನು ಹೆಚ್ಚು ಹೆಚ್ಚಾಗಿ ಓದುವ, ಕನ್ನಡ ಸಂಸ್ಕೃತಿಯನ್ನು ಅಭಿಮಾನಿಸಿ, ಪ್ರೀತಿಸುವ ಮನೋಭಾವ ನಮ್ಮ ಜನರಲ್ಲಿ ಬರಬೇಕು.

ಉಡುಪಿ ಕ್ಷೇತ್ರದ ಶಾಸಕ ಯಶ್ಪಾಲ್ ಸುವರ್ಣ, ಡಿಸಿ ಡಾ.ಕೆ.ವಿದ್ಯಾಕುಮಾರಿ, ಎಸ್ಪಿ ಡಾ.ಕೆ.ಅರುಣ್, ಅಪರ ಜಿಲ್ಲಾಧಿಕಾರಿ ಮಮತಾ ದೇವಿ, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್,ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನಕರ್ ಹೇರೂರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನೀಲಾವರ್ ಸುರೇಂದ್ರ ಅಡಿಗ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಅಶೋಕ್ ಕುಮಾರ್ ಕೊಡವೂರು ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ರಾಜ್ಯಮಟ್ಟದ ವಾಲಿಬಾಲ್ ಕ್ರೀಡಾಕೂಟ ಯಶಸ್ವಿಗೆ ಸಹಕರಿಸಿ

**ತಾಳಿಕೋಟಿ:** ಪಟ್ಟಣದ ಶ್ರೀ ಎಸ್. ಎಸ್. ವಿದ್ಯಾ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಎಚ್.ಎಸ್.ಪಾಟೀಲ ಸ್ವತಂತ್ರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಇದೇ ದಿ.3 ರಿಂದ 5 ರವರೆಗೆ 3 ದಿನಗಳ ಕಾಲ ನಡೆಯಲಿರುವ ರಾಯಮಟ್ಟದ ವಾಲಿಬಾಲ್ ಕ್ರೀಡಾಕೂಟವು ಅತ್ಯಂತ ಯಶಸ್ವಿದಾಯಕವಾಗಿ ನಡೆಯಬೇಕು ಮೈಧಾನ ಒಳಗೊಂಡು ಇನ್ನಿತರ ವ್ಯವಸ್ಥೆ ಅಚ್ಚುಕಟ್ಟಾಗಿ ನಡೆದಿದೆ ಎಂದು ವಿಜಯಪೂರ ಪಧವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಡಾ.ಸಿ.ಕೆ.ಹೊಸಮನಿ ಅವರು ಹೇಳಿದರು.

ಗುರುವಾರದಂದು ಪಟ್ಟಣದ ಎಸ್.ಎಸ್.ವಿದ್ಯಾ ಸಂಸ್ಥೆಗೆ ಬೆಟ್ಟಿ ನೀಡಿ ರಾಜ್ಯಮಟ್ಟ ವಾಲಿಬಾಲ್ ಕ್ರೀಡಾಕೂಟಕ್ಕೆ ಸಂಬಂದಿಸಿ ಮೈಧಾನ ಮತ್ತು ಜನರಿಗೆ ವಿಕ್ಷೀಸಲು ಸಜ್ಜುಗೊಳಿಸಿರುವದು ಅಲ್ಲದೇ ಇನ್ನಿತರ ವ್ಯವಸ್ಥೆಯನ್ನು ಪರಿಶೀಲಿಸಿ ಟ್ರೋಪಿ ಬಿಡುಗಡೆ ಗೊಳಿಸಿ ನಂತರ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಾಜ್ಯಮಟ್ಟದ ಬಾಲಕ ಬಾಲಕಿಯರ 2024 -25 ನೇ ಸಾಲಿನ ವಾಲಿಬಾಲ್ ಕ್ರೀಡಾಕೂಟವು ಕೇವಲ ಹೆಚ್.ಎಸ್ ಪಾಟೀಲ್ ಕಾಲೇಜಿಗೆ ಸೀಮಿತವಲ್ಲ ಎಲ್ಲಾ ಪದವಿಪೂರ್ವ ಶಿಕ್ಷಣ ಇಲಾಖೆಯ ಸಿಬ್ಬಂದಿಗಳು ಎಚ್-ಎಸ್ ಪಾಟೀಲರೊಂದಿಗೆ ಕೈಜೋಡಿಸಬೇಕು ರಾಜ್ಯದ ಸುಮಾರು 32 ಜಿಲ್ಲೆಗಳಿಂದ ಕ್ರೀಡಾಪಟುಗಳು ಆಗಮಿಸುತ್ತಿರುವದರಿಂದ ಹಾಗೂ ಸಚಿವ, ಶಾಸಕರು ಅಲ್ಲದೇ ಶಿಕ್ಷಣ ಇಲಾಖೆಯ ಉನ್ನತ ಮಟ್ಟದ ಅಧಿಕಾರಿಗಳು ಕೂಡಾ ಆಗಮಿಸುತ್ತಿರುವದು ಈ ಕ್ರೀಡಾಕೂಟವು ರಾಷ್ಟ್ರಮಟ್ಟದ ಕ್ರೀಡಾಕೂಟದ ರೀತಿಯಲ್ಲಿ ನಡೆಯಬೇಕು ಈ ಕಾರ್ಯದಲ್ಲಿ ದೈಹಿಕ ಶಿಕ್ಷಣದ ಎಲ್ಲರೂ ಭಾಗಿಗಳಾಗಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕೆಂದರು.

ಜಿಲ್ಲಾ ದೈಹಿಕ ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಎಸ್.ದುರ್ಗಿ ಅವರು ಮಾತನಾಡಿ ಜಿಲ್ಲಾ ದೈಹಿಕ ಉಪನ್ಯಾಸಕರ ಸಂಘ ಅಲ್ಲದೇ ಜಿಲ್ಲೆಯ ಎಲ್ಲಾ ಪ.ಪೂ ಕಾಲೇಜಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಕ್ರೀಡಾಕೂಟಕ್ಕೆ



ಸಹಕರಿಸುತ್ತೇವೆ ರಾಜ್ಯಮಟ್ಟದ ವಾಲಿಬಾಲ್ ಕ್ರೀಡಾಕೂಟ ಮಾದರಿಯ ಕ್ರೀಡಾಕೂಟವಾಗಿ ಕಾಣಬೇಕು ಇದಕ್ಕೆ ಎಲ್ಲರ ಸಹಕಾರವು ಅಗತ್ಯವಾಗಿದೆ ದೈಹಿಕ ಶಿಕ್ಷಣದ ಎಲ್ಲ ಉಪನ್ಯಾಸಕರು ಈಗಾಗಲೇ ಕ್ರೀಡಾಕೂಟದ ಯಶಸ್ವಿಗೆ ಸನ್ನದರಾಗಿದ್ದಾರೆಂದರು.

ವಿಜಯಪುರ ಪಧವಿಪೂರ್ವ ಶಿಕ್ಷಣ ಇಲಾಖೆಯ ಶಾಖಾಧಿಕಾರಿ ಪ್ರಕಾಶ ಗೊಂಗಡಿ ಅವರು ಮಾತನಾಡಿ 2017-18 ನೇ ಸಾಲಿನಲ್ಲಿ ರಾಜ್ಯಮಟ್ಟದ ಕಬಡ್ಡಿ ಕ್ರೀಡಾಕೂಟವು ಇದೇ ಎಚ್.ಎಸ್.ಪಾಟೀಲ ಪ.ಪೂ.ಕಾಲೇಜಿನಲ್ಲಿ ಯಶಸ್ವಿಯಾಗಿ ನಡೆದಿದೆ ಅದರಂತೆ ಈ ಭಾರಿ ರಾಜ್ಯಮಟ್ಟದ ವಾಲಿಬಾಲ್ ಕ್ರೀಡಾಕೂಟವು ಇದೇ ಶಿಕ್ಷಣ ಸಂಸ್ಥೆಗೆ ಒದಗಿ ಬಂದಿರುವದು ಸಂತಸ ತಂದಿದೆ ಈ ಕ್ರೀಡಾಕೂಟವು ಕೂಡಾ ಯಶಸ್ವಿಯಾಗುವದರಲ್ಲಿ ಯಾವುದೇ ಸಂಶಯವಿಲ್ಲಾ ರಾಷ್ಟ್ರಮಟ್ಟದ ವಾಲಿಬಾಲ್ ಕ್ರೀಡಾಕೂಟದ ಮಾದರಿಯಲ್ಲಿ ಎಲ್ಲ ರೀತಿಯ ತಯಾರಿ ಮಾಡಿಕೊಂಡಿರುವದು ಸಂತಸ ತಂದಿದೆ ಎಂದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಬಿ.ಎಸ್.ಪಾಟೀಲ (ಯಾಳಗಿ)ಯವರು ಮಾತನಾಡಿ ರಾಜ್ಯಮಟ್ಟದ ವಾಲಿಬಾಲ್ ಕ್ರೀಡಾಕೂಟವು ಕೇವಲ ಎಚ್ ಎಸ್ ಪಾಟೀಲರಿಂದ ಯಶಸ್ವಿಗೊಳಿಸಲು ಸಾಧ್ಯವಿಲ್ಲ ಎಲ್ಲರೂ ಕೈಜೋಡಿಸಿದಾಗ ಮಾತ್ರ ಸಾಧ್ಯವಾಗಲಿದೆ ಎಂದರು.ಶಿಕ್ಷಕ ಶ್ರೀಕಾಂತ ಪತ್ತಾರ ಅವರು ಕ್ರೀಡಾಕೂಟದ ಸಂಪೂರ್ಣ ತಯಾರಿ ಬಗ್ಗೆ ವಿವರಿಸಿದರು.

ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಎಚ್.ಎಸ್.ಪಾಟೀಲ ಅವರು ಮಾತನಾಡಿ ರಾಜ್ಯಮಟ್ಟದ ವಾಲಿಬಾಲ್ ಕ್ರೀಡಾಕೂಟದ ಯಶಸ್ವಿಗೆ ತಾಳಿಕೋಟೆಯ ಎಲ್ಲ ಶಾಲಾ ಕಾಲೇಜಿನ ಅಧ್ಯಕ್ಷರುಗಳು ತನು,ಮನ ಹಾಗೂ ಧನದಿಂದ ಸಹಾಯ ಒದಗಿಸಿದ್ದಾರೆ ಕ್ರೀಡಾಕೂಟದ ಯಶಸ್ವಿಗೆ ಸಹಕರಿಸಿದ್ದಾರೆಂದರು.

ಆರ್.ಎಲ್.ಕೊಪ್ಪದರವರು ಕ್ರೀಡಾಕೂಟದ ಮೈದಾನ ಸಿದ್ದತೆಯ ಬಗ್ಗೆ ಹಾಗೂ ಎಚ್.ಎಸ್.ಪಾಟೀಲ ಬಿ.ಪಿ.ಎಡ್ ಕಾಲೇಜಿನ ಪ್ರಾಚಾರ್ಯರಾದ ಶಿವಕುಮಾರ ನಾಯಕ ಉಪನ್ಯಾಸಕರುಗಳಾದ ಅಮರೇಶ ನಾಗರಾಳ, ಶರಣು, ಬಿರಾದಾರ ಬಿಪಿಎಡ್ ಪ್ರಶಿಕ್ಷಣಾರ್ಥಿಗಳು ಮೈದಾನ ತಯಾರಿ ನಡೆಸುಸುತ್ತಿರುವದರ ಬಗ್ಗೆ ವಿವರಿಸಿದರು.

ಇದೇ ಸಮಯದಲ್ಲಿ ಕ್ರೀಡಾಕೂಟದ ಕೈಪಿಡಿ ಹಾಗೂ ಟ್ರೋಫಿ ಬಿಡುಗಡೆ ಮಾಡಲಾಯಿತು. ಸಭೆಯ ವೇದಿಕೆಯಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಆರ್. ಎಸ್.ಪಾಟೀಲ್(ಕೂಚಬಾಳ) ಬ್ರಿಲಿಯಂಟ್ ಶಾಲಾ ಅಧ್ಯಕ್ಷ ನಾನಾಗೌಡ ಪಾಟೀಲ್, ಶ್ರೀ ಫನಮಠೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಸ್.ಎಂ.ಸಜ್ಜನ್, ಬಿ.ಎನ್. ನಾಯ್ಕೋಡಿ, ಕೆ.ಜಿ.ಲಮಾಣಿ, ಶ್ರೀಮತಿ ನೀಲಮ್ಮಪಾಟೀಲ, ಕಾಶೀನಾಥ. ಮುರಾಳ, ಮುರಿಗೆಪ್ಪ ಸರಶೆಟ್ಟಿ, ಉಪಸ್ಥಿತರಿದ್ದರು.


ಪ್ರಾಚಾರ್ಯ ಎಮ್.ಎಸ್.ಬಿರಾದಾರ, ದೈಹಿಕ ಉಪನ್ಯಾಸಕ ಎಸ್.ಬಿ.ಮಂಗ್ಯಾಳ್ ಪ್ರೌಢ ಶಾಲೆಯ ದೈಹಿಕ ಶಿಕ್ಷಕರಾದ ಎಮ್.ಎಸ್.ರಾಯಗೊಂಡ, ಮುದ್ದೇಬಿಹಾಳ ಮತ್ತು ತಾಳಿಕೋಟೆ ತಾಲೂಕಿನ ಪಿಯು ಕಾಲೇಜ್ ಪ್ರಾಚಾರ್ಯರು, ಹಿರಿಯ ಉಪನ್ಯಾಸಕರು, ಶಿಕ್ಷಕರು, ಕ್ರೀಡಾಕೂಟ ಪಟುಗಳು, ಉಪಸ್ಥಿತರಿದ್ದರು. ಶಿಕ್ಷಕ ಬಿ.ಆಯ್.ಹಿರೇಹೊಳಿ ನಿರೂಪಿಸಿ ವಂದಿಸಿದರು.

# ಪುಸ್ತಕಗಳು ನಿರ್ಜೀವ ವಸ್ತುಗಳಲ್ಲ: ಎಚ್.ಬಿ.ಬಾರಿಕಾಯಿ

**ಬಸವನಬಾಗೇವಾಡಿ:** ಪುಸ್ತಕಗಳು ನಿರ್ಜೀವ ವಸ್ತುಗಳಲ್ಲ. ಅವುಗಳಿಗೆ ಜೀವವಿದೆ. ಅದಕ್ಕೇನೆ ಬಲ್ಲವರು ಕೋಶ ಓದಬೇಕು.ದೇಶ ಸುತ್ತಬೇಕೆಂದು ಹೇಳಿದ್ದಾರೆ ಎಂದು ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸೊಸಾಯಿಟಿಯ ನಿರ್ದೇಶಕ ಎಚ್.ಬಿ.ಬಾರಿಕಾಯಿ ಹೇಳಿದರು.

ತಾಲೂಕಿನ ಇಂಗಳೇಶ್ವರ ಗ್ರಾಮದ ಹಿರೇಮಠದಲ್ಲಿ ಮಂಗಳವಾರ ಬಸವನಬಾಗೇವಾಡಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿಯವರು ಹಮ್ಮಿಕೊಂಡಿರುವ ಪುಸ್ತಕ ಜೋಳಿಗೆ ಅಭಿಯಾನದಲ್ಲಿ ಮಾತನಾಡಿದ ಅವರು, ಈ ಪ್ರಪಂಚದಲ್ಲಿ ಅನ್ನ ಆಶ್ರಯದ ಜೊತೆಗೆ ಅರಿವಿನ ಪಾತ್ರ ಬಹಳ ಮುಖ್ಯವಾಗಿದೆ. ಮಠಗಳ ಆಶ್ರಯದಲ್ಲಿ ಓದಿದವರು ಇಂದು ಉನ್ನತ ಹುದ್ದೆಯಲ್ಲಿರುವದಕ್ಕೆ ಮಠಗ ನೀಡಿರುವ ಅರಿವು ಕಾರಣವೆಂದರೆ ತಪ್ಪಾಗಲಾರದು. ಮೈಯಲ್ಲಿ ಹರಿದ ಬಟ್ಟೆ ಇದ್ದರೂ ಕೈಯಲ್ಲಿ ಒಂದು ಪುಸ್ತಕವಿರಲಿ. ಪುಸ್ತಕಗಳು ನಮ್ಮ ಜೀವನವನ್ನು ರೂಪಿಸುತ್ತವೆ ಎಂದರು.

ಪುಸ್ತಕ ಜೋಳಿಗೆಯ ರೂವಾರಿ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ದೀಪಾವಳಿ ಸೇರಿದಂತೆ ಮತ್ತಿತರ ಸಂದರ್ಭದಲ್ಲಿ ಮನೆಯನ್ನು ಸ್ವಚ್ಛಗೊಳಿಸುವಾಗ ರದ್ದಿಗೆ ಹಾಕುವ ಪುಸ್ತಕಗಳನ್ನು ನಮ್ಮ ಪುಸ್ತಕ ಜೋಳಿಗೆಗೆ ಹಾಕುವ ಮೂಲಕ ಶ್ರೀಮಠದ ಗ್ರಂಥಾಲಯ ಮೂಲಕ ಓದುಗರಿಗೆ, ಸ್ಪರ್ಧಾತ್ಮಕ



ಪರೀಕ್ಷೆಗಳನ್ನು ಎದುರಿಸುವ ಅಸಹಾಯಕ ವಿದ್ಯಾರ್ಥಿಗಳಿಗೆ ನೆರವಾಗಬೇಕು. ನಮ್ಮ ಶ್ರೀಮಠದ ಗ್ರಂಥಾಲಯದಲ್ಲಿ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಬೇಕಾದ ಪುಸ್ತಕ, ವಿವಿಧ ಅಕಾಡೆಮಿಯ ಪುಸ್ತಕಗಳಿವೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದರು.

ತಾಲೂಕು ಕಸಾಪ ಮಾಜಿ ಅಧ್ಯಕ್ಷ ನಿಂಗಪ್ಪ ಬೊಮ್ಮನಹಳ್ಳಿ ಮಾತನಾಡಿ, ಸಿದ್ದಲಿಂಗ ಸ್ವಾಮೀಜಿಯವರ ಪುಸ್ತಕ ಜೋಳಿಗೆ ಸಂಕಲ್ಪ ದೊಡ್ಡದು. ಜೋಳಿಗೆಯನ್ನು ಹೊತ್ತುಕೊಂಡು ಊರೂರು ಅಲೆದು ಪುಸ್ತಕಗಳನ್ನು ಸಂಗ್ರಹಿಸಿ ಜಾಗೃತಿಗೊಳಿಸುವದು ಸಣ್ಣ ಕಾರ್ಯವಲ್ಲ. ದುಶ್ಚಟಗಳನ್ನು ಬೇಡುವ ಮಹಾಂತ ಜೋಳಿಗೆಯಂತೆ ಮಸ್ತಕಕ್ಕೆ ಜ್ಞಾನ ನೀಡುವ ಪುಸ್ತಕ ಜೋಳಿಗೆ ಜನರ ಮನಸ್ಸು ಮುಟ್ಟುತ್ತಿದೆ ಎಂದರು.

ಸಾಹಿತಿ ಪ್ರಭಾಕರ ಖೇಡದ ಮಾತನಾಡಿ, ನಮಗೇಕೆ ಸಮಾಜದ ಚಿಂತೆ ಎಂದು ಸುಮ್ಮನೆ ಕೂಡುವದು ಸರಿಯಲ್ಲ. ಕಲುಷಿತ, ಭೀಬತ್ಸ ಸಮಾಜದ ಕೈಗೆ ನಮ್ಮ ಮಕ್ಕಳು ಸಹಜವಾಗಿ ಸಿಗುತ್ತಾರೆ. ಆದ್ದರಿಂದ ಸುಭದ್ರ,ಅರಿವಿನ ಸಮಾಜವನ್ನು ಕಟ್ಟುವದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ರಾಕ್ಷಸ ಎದೆಗೆ ಅಕ್ಷರ ಇಳಿದಾಗಲೇ ಆತ ಸಾಕ್ಷರರಾಗುತ್ತಾನೆ. ಪ್ರತಿಯೊಬ್ಬರಿಗೂ ಪುಸ್ತಕ ಓದು ಅಗತ್ಯವಿದೆ ಎಂದರು.

ಮುಚ್ಚಿಟ್ಟ ಪುಸ್ತಕ ಕೈಗಳಿಂದ ಕೈಗಳಿಗೆ, ಕಣ್ಣುಗಳಿಂದ ಕಣ್ಣುಗಳಿಗೆ ಬದಲಾಗುತ್ತಲೇ ಇರಬೇಕು. ಈ ದಿಶೆಯಲ್ಲಿ ಪೂಜ್ಯರ ಜೋಳಿಗೆಯ ಹಿಂದೆ ಪ್ರಜಾವಂತ ಸಮಾಜ ಇರಬೇಕೆಂದರು.

ಸಾಹಿತಿ ಕೆ.ಎಸ್.ಬಾಗೇವಾಡಿ, ತಾಲೂಕು ಕಸಾಪ ಗೌರವ ಕಾರ್ಯದರ್ಶಿ ಶಿವು ಮಡಿಕೇಶ್ವರ ಮಾತನಾಡಿದರು. ಪುಸ್ತಕ ಜೋಳಿಗೆಗೆ ಹಿರೇಮಠದ ಬ್ರಂಗೀಶ ಶಿವಾಚಾರ್ಯ ಸ್ವಾಮೀಜಿ, ತಾಲೂಕು ಕಸಾಪ ಮಾಜಿ ಅಧ್ಯಕ್ಷ ನಿಂಗಪ್ಪ ಬೊಮ್ಮನಹಳ್ಳಿ, ಸಾಹಿತಿ ಈರಣ್ಣ ಬೆಕಿನಾಳ, ಕಲ್ಲಯ್ಯ ಹಿರೇಮಠ, ಕೆ.ಎಸ್.ಬಾಗೇವಾಡಿ, ಬಿ.ಬಿ.ಬಾಗೇವಾಡಿ, ಎಸ್.ಜಿ.ಬಾಗೇವಾಡಿ, ಎಂ.ಎನ್.ಅವಟಿ, ನಾಗಣ್ಣ ಚಿಗ-ರಿ,ಶ್ರೀಶೈಲ ಬಾಗೇವಾಡಿ,ಪರಶುರಾಮ ಎಮ್ಮಿ, ಶಿವಪ್ಪ ಸಜ್ಜನ, ನಾಗಪ್ಪ ಬಾಗೇವಾಡಿ, ಮಲ್ಲಪ್ಪ ಪತ್ತಾರ, ಮಾಮಲ್ಲಪ್ಪ ಅವಟಿ ಇತರರು ಪುಸ್ತಕಗಳನ್ನು ನೀಡಿದರು. ಅಭಿಯಾನದಲ್ಲಿ ರವಿಗೌಡ ಚಿಕ್ಕೊಂಡ, ಚಂದ್ರು ಹದಿಮೂರು ಇತರರು ಇದ್ದರು. ಬಿ.ಬಿ.ಬಾಗೇವಾಡಿ ನಿರೂಪಿಸಿದರು.

## ಮೊಸಳೆ ಹಿಡಿಯಲು ಕಾರ್ಯಾಚರಣೆ

**ಮೋಳೆ:** ಕಾಗವಾಡ ತಾಕೂಕಿನ ಐನಾಪುರ ಪಟ್ಟಣದ ಹೊರವಲಯದಲ್ಲಿರುವ ಬೃಹತ್ ಕಲ್ಲು ಕ್ವಾರಿ( ಖನಿ)ಯಲ್ಲಿನ ನೀರಿನಲ್ಲಿರುವ ಮೊಸಳೆಗಳನ್ನು ಸೆರೆ ಹಿಡಿಯುವ ಕಾರ್ಯಾಚರಣೆ ನಡೆದಿದ್ದು, ಶೀಘ್ರದಲ್ಲಿಯೇ ಮೊಸಳೆಗಳನ್ನು ಹಿಡಿಯಲಾಗುವುದು ಎಂದು ಅರಣ್ಯಾಧಿಕಾರಿ ರಾಜೇಶ ಅರ್ಜುನವಾಡ ತಿಳಿಸಿದ್ದಾರೆ.

ಈ ಕಲ್ಲು ಕ್ವಾರಿಯಲ್ಲಿ ಸಂಗ್ರಹಗೊಂಡಿರುವ ನೀರಿನಲ್ಲಿ ಮೊಸಳೆಗಳಿರುವುದನ್ನು ಕಂಡು ಜನ ಭಯಭೀತರಾಗಿದ್ದಾರೆ. ಹೀಗಾಗಿ, ಯಾವುದೇ ಅನಾಹುತವಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಶೀಘ್ರವೇ ಮೊಸಳೆಗಳನ್ನು ಸೆರೆ ಹಿಡಿಯಲಾಗುವುದು ಎಂದು ಹೇಳಿದ್ದಾರೆ.

ಈ ಬೃಹತ್ ಕಲ್ಲು ಖನಿಯಲ್ಲಿ ಸುಮಾರು 80 ಅಡಿ ಆಳವಿದ್ದು, ಮೊಸಳೆಗಳನ್ನು ಹುಡುಕುವುದು ಕಷ್ಟವಾಗಿದೆ. ಅಲ್ಲದೇ, ಪ್ರತಿದಿನವೂ ಕೂಡ ಮಾಂಸದ ತುಂಡುಗಳೊಂದಿಗೆ ಸೆರೆ ಹಿಡಿಯುವ ಕಾರ್ಯಾಚರಣೆ ನಡೆಸುತ್ತಿದ್ದರೂ ಕೂಡ ಮೊಸಳೆ ಹೊರಕ್ಕೆ ಬರುತ್ತಿಲ್ಲ ಎಂದು ಅವರು ಮಾಹಿತಿ ನೀಡಿದ್ದಾರೆ.

ಕಾರ್ಯಾಚರಣೆ ವೀಕ್ಷಿಸಲು ನೂರಾರು ಜನ ಖನಿ ಸುತ್ತಮುತ್ತ ಸೇರುತ್ತಿದ್ದಾರೆ. ಹೀಗಾಗಿ, ಜನರ ಕೂಗಾಟ, ಕೇಕೆಗೆ ಮೊಸಳೆಗಳು ಹೊರ ಬರದೇ ನೀರಿನಲ್ಲಿಯೇ ಅವಿತುಕೊಳ್ಳುತ್ತಿವೆ. ಜನರ ಸಪ್ಪಳ ಕಾರ್ಯಾಚರಣೆಗೆ ಅಡ್ಡಿಯಾಗುತ್ತಿದ್ದು, ಜನತೆ ಸಹಕಾರ ನೀಡವಂತೆಯೂ ಅರಣ್ಯಾಧಿಕಾರಿಗಳು ಮನವಿ ಮಾಡಿದ್ದಾರೆ.

ಈ ಕಲ್ಲು ಕ್ವಾರಿಯಲ್ಲಿ ಎರಡು ಮೊಸಳೆಗಳಿವೆ ಎಂದು ಸಾರ್ವಜನಿಕರು ಮಾಹಿತಿ ನೀಡಿದ್ದಾರೆ. ಜನತೆ ಯಾವುದೇ ಕಾರಣಕ್ಕೂ ಆತಂಕಪಡುವ ಅಗತ್ಯವಿಲ್ಲ. ಮೊಸಳೆ ಕಾರ್ಯಾಚರಣೆ ಯಶಸ್ವಿಯಾಗುವವರೆಗೂ ಖನಿಯಲ್ಲಿನ ನೀರಿನಲ್ಲಿ ಯಾರೂ ಇಳಿಯಬೇಡಿ. ಜಾನುವಾರುಗಳನ್ನು ಕೂಡ ತರಬೇಡಿ ಎಂದು ಮನವಿ ಮಾಡಲಾಗಿದೆ.

# ೬೯ನೆಯ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ

# ಸಾಧಕರಿಗೆ ಸನ್ಮಾನ ಗಮನ ಸೆಳೆದ ಪಥ ಸಂಚಲನ

ಗದಗ : ಗದುಗಿನ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು 69ನೆಯ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ಸಾರ್ವಜನಿಕ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ವಿವಿಧ ದಳಗಳ ವೀಕ್ಷಣೆ ಮಾಡಿದರು.

ಆಕರ್ಷಕ ಪಥಸಂಚಲನದ ನೇತೃತ್ವವನ್ನು ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಪರೇಡ ಕಮಾಂಡರ್ ವಿದ್ಯಾನಂದ ನಾಯಕ ನೇತೃತ್ವವನ್ನು ಅವರು ವಹಿಸಿದ್ದರು. ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ ಪಡೆಯ ನೇತೃತ್ವವನ್ನು ಆರ್.ಎಸ್.ಐ ಸತೀಶ ಠಕ್ಕರ್ಳಕ್ಕಿ ವಹಿಸಿದ್ದರು. ನಾಗರಿಕ ಪೊಲೀಸ ಪಡೆಯ ನೇತೃತ್ವವನ್ನು ಗದಗ ಗ್ರಾಮೀಣ ಘಟಕದ ಪಿಎಸ್ಐ ಕಿರಣ ಕೋಣನಕೇರಿ, ಗೃಹ ರಕ್ಷಕ ದಳದ ನೇತೃತ್ವವನ್ನು ಎಂ.ಎನ್.ವಸ್ತ್ರದ, ಅಗ್ನಿಶಾಮಕ ಪಡೆಯ ನೇತೃತ್ವವನ್ನು ಲೋಕೇಶ ಎಫ್.ಎಸ್.ಓ, ಅಬಕಾರಿ ದಳದ ನೇತೃತ್ವವನ್ನು ಶ್ರೀಮತಿ ವಿಜಯಲಕ್ಷ್ಮೀ, ಅರಣ್ಯ ರಕ್ಷಕ ಪಡೆಯ ನೇತೃತ್ವವನ್ನು ಡೆಪ್ಯೂಟಿ ಆರ್.ಎಫ್.ಓ ಸಚಿನ ಬಿಸನಳ್ಳಿ, 38 ಕೆಎಆರ್ ಬಟಾಲಿನ್ ಗದಗನ ನೇತೃತ್ವವನ್ನು ಕುಮಾರಿ ನೀಲಮ್ಮ ಕರಡಿ, ನಗರದ ಎಸ್.ಎಂ.ಕೃಷ್ಣಾ ನಗರದ ಸರ್ಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯ ನೇತೃತ್ವವನ್ನು ಕುಮಾರಿ ಅಂಜನಾ, ಬೆಟಗೇರಿಯ ಸೇಂಟ್ ಜಾನ್ ಪ್ರೌಢಶಾಲೆಯ ನೇತೃತ್ವವನ್ನು ಕುಮಾರ್ ಸೋಮಶೇಖರ, ವಿ.ಡಿ.ಎಸ್.ಟಿ.ಸಿ. ಬಾಲಕಿಯರ ಪ್ರೌಢಶಾಲೆಯ ನೇತೃತ್ವವನ್ನು ಕುಮಾರಿ ಗೌರಿ, ಎಸ್.ಎಂ.ಕೃಷ್ಣಾ ನಗರದ ಸರ್ಕಾರಿ ಹಿರಿಯ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯ ನೇತೃತ್ವನವನು



ಕುಮಾರಿ ಸ್ನೇಹಾ, 38 ಕೆಎಆರ್ ಬಟಾಲಿನ್ ಎನ್.ಸಿ.ಸಿ ಸೀನಿಯರ್ಸ್ ಗದಗನ ನೇತೃತ್ವವನ್ನು ಕುಮಾರ ಗುರುಪ್ರಸಾದ, ಕೆ.ಎಲ್.ಇ ಪ್ರೌಢ ಶಾಲೆ ನೇತೃತ್ವವನ್ನು ಕುಮಾರಿ ಜುಬೇರಿಯಾ ವಹಿಸಿದ್ದರು. ಪಥ ಸಂಚಲನದಲ್ಲಿ ಪಾಲ್ಗೊಂಡು ಉತ್ತಮ ಪ್ರದರ್ಶನ ನೀಡಿದ ತಂಡಗಳಿಗೆ ಸಚಿವರು ಸನ್ಮಾನಿಸಿದರು.

69ನೆಯ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಗುರುತಿಸಿ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಸೇರಿದಂತೆ ಇತರೆ ಗಣ್ಯರು ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡರು.

ಸನ್ಮಾನಿತರು:

ಜಾನಪದ, ಸಂಗೀತ, ನಾಟಕ, ಬಯಲಾಟ, ಲಲಿತಕಲೆ, ಸಾಹಿತ್ಯ, ಸಾಮಾಜಿಕ ರಂಗಗಳಲ್ಲಿ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯಿಂದ ಕರ್ನಾಟಕ ನೃತ್ಯ ಅಕಾಡೆಮಿಯಿಂದ ನೀಡಲಾಗುವ 2024 ನೇ ಸಾಲಿನ ಕವಿ ಕುಮಾರವ್ಯಾಸ ಪ್ರಶಸ್ತಿ ಪಡೆದಿದ್ದಕ್ಕಾಗಿ ಸಿದ್ದೇಶ್ವರ ಶಾಸ್ತ್ರೀ ತೆಲ್ಲೂರು, ಸುಮಾರು 25 ವರ್ಷಗಳಿಂದ ಶಿಲ್ಪಕಲಾ ಕ್ಷೇತ್ರದಲ್ಲಿ : ಅತ್ಯುತ್ತಮ ಸೇವೆ ಸಲ್ಲಿಸುತ್ತಿದ್ದು, ನವಂಬರ್ 01 2023 ರಂದು ನಡೆದ ಕರ್ನಾಟಕ ಸಂಭ್ರಮ–50 ರ ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳಿಗೆ ನೀಡಿದ ತಾಯಿ ಭುವನೇಶ್ವರ ಮೂರ್ತಿಯನ್ನು ತಯಾರಿಸಿದ್ದಕ್ಕಾಗಿ ರೋಣದ ಶಂಕ್ರಪ್ಪ ದೇವಪ್ಪ ಬಡಿಗೇರ, ಅಂತರಾಷ್ಟ್ರೀಯ ಮಹಿಳಾ ದಿನಚರಣೆ ಕಾರ್ಯಕ್ರಮದಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದಕ್ಕಾಗಿ 2023–24 ನೇ ಸಾಲಿನ ಕಿತ್ತೂರು ರಾಣಿ ಚೆನ್ನಮ್ಮ ರಾಜ್ಯಮಟ್ಟದ ಪ್ರಶಸ್ತಿ ಪಡೆದಿದ್ದಕ್ಕಾಗಿ ಶ್ರೀಮತಿ ವಿ.ವಿ. ಹಿರೇಮಠ, ಸುಮಾರು 30 ವರ್ಷಗಳಿಂದ ಸಂಗೀತ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ್ದಕ್ಕಾಗಿ ಶ್ರೀಮತಿ ಉಷಾ ಕಾರಂತ, ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿದ್ದಸಿದ್ದಕ್ಕಾಗಿ ಡಾ.ಎಸ್.ಸಿ. ಚವಡಿ ಅವರುಗಳನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.

ಮಾಧ್ಯಮ ವಿಭಾಗ : ಕನ್ನಡ ನಾಡು ನುಡಿ ಕುರಿತು ಉತ್ತಮ ವರದಿಗಳನ್ನು ಮಾಡಿ ತಮ್ಮದೇ ಸೇವೆ ಸಲ್ಲಿಸಿದ್ದಕ್ಕಾಗಿ ಗದಗ ಸಂಯುಕ್ತ ಕರ್ನಾಟಕ ದಿನಪತ್ರಿಕೆ ವರದಿಗಾರ ಸೂರ್ಯನಾರಾಯಣ ನರಗುಂದಕರ, ಹೊಸದಿಗಂತ ದಿನಪತ್ರಿಕೆ ವರದಿಗಾರ ವೆಂಕಟೇಶ ಇಮ್ರಾಪೂರ, ಸುವರ್ಣ ಟಿ.ವಿ ವರದಿಗಾರ ಗಿರೀಶ ಕಮ್ಮಾರ, ಮುಳಗುಂದ ವಿಜಯವಾಣಿ ವರದಿಗಾರ ವಿ.ಡಿ. ಕಣವಿ, ಮುಂಡರಗಿ ಪ್ರಜಾವಾಣಿ ವರದಿಗಾರ ಕಾಶಿನಾಥ ಬಿಳಿಮಗ್ಗದ, ಶಿರಹಟ್ಟಿ ಕಿತ್ತೂರು ಕರ್ನಾಟಕ ವರದಿಗಾರ ಎ.ಎಚ್.ಖಾಜಿ, ಗದಗ ಉದಯವಾಣಿ ವರದಿಗಾರ ಅರುಣಕುಮಾರ ಹೀರೆಮಠ, ಕಿತ್ತರೂಕರ್ನಾಟಕ ದಿನ ಪತ್ರಿಕೆ ಛಾಯಗ್ರಾಹಕ ಎಚ್ಚರಪ್ಪ ಮಹೇಂದ್ರಕರ ಇವರ ಸೇವೆಯನ್ನು ಗುರುತಿಸಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಸಮಾಜ ಸೇವೆ ಹಾಗೂ ಸಹಕಾರ ಕ್ಷೇತ್ರ : ಕುರ್ತಕೋಟಿಯ ಅಪ್ಪಣ್ಣ ಇನಾಮತಿ, ಗದಗಿನ ಚಂದ್ರಗೌಡ ಮರಿಯಪ್ಪಗೌಡರ, ವಿರೇಂದ್ರ ಹೂಲಿ, ಕುರ್ತಕೋಟಿ ಅಲ್ಲಾಭಕ್ಷ ತಹಶೀಲದಾರ, ಗದಗನ ಬಾಲಚಂದ್ರ ಭರಮಗೌಡರ, ರಾಜೀವಗಾಂಧಿ ನಗರದ ಉಮೇಶ ಮಲ್ಲಪ್ಪ ಹಡಪದ ಅವರುಗಳನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಶಿಕ್ಷಣ ಮತ್ತು ಕ್ರೀಡಾ ವಿಭಾಗ: ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ್ದಕ್ಕಗಿ ಕೆಂಚನಗೌಡರ, ಮಹಾತ್ಮಾ ಗಾಂಧಿ ಜಯಂತಿ ಅಂಗವಾಗಿ ಜರುಗಿದ ಪ್ರಬಂಧ ಸ್ಪರ್ಧೆಯಲ್ಲಿ ಪದವಿ ಪೂರ್ವ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಗದಗ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿಜಯಕುಮಾರ ದೊಡ್ಡಮನಿ, ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆಗೈದ ಕುಮಾರಿ ಪ್ರಣತಿ ಆರ್. ಗಡಾದ, ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈದ ಹರೀಶ್ ಮುಟಗಾರ್, ಕುಸ್ತಿ ಕ್ರೀಡೆಯಲ್ಲಿ ಸಾಧನೆಗೈದ ವೈಷ್ಣವಿ ಇಮ್ಮಡಿಯವರ ಹಾಗೂ ವರಲಕ್ಷ್ಮಿ ಕದಡಿ, ಸಮಾಜಕಿಕ ಕ್ಷೇತ್ರದಲ್ಲಿ ಪ್ರಾಮಾಣಿಕ ಸೇವೆಗೈದ ಅರ್ಮಾನ್ ತಾಜುದ್ದೀನ್ ವಡಗೇರ ಅವರನ್ನು ಸನ್ಮಾನಿಸಲಾಯಿತು.

ಸ್ತಬ್ಧ ಚಿತ್ರ: ಶಿಕ್ಷಣ ಇಲಾಖೆ, ಜಿಲ್ಲಾ ಪಂಚಾಯತ, ಕೆ ಎಸ್ ಆರ್ ಟಿ ಸಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಬೆಟಗೇರಿ ನಗರಸಭೆ, ತೋಟಗಾರಿಕೆ ಇಲಾಖೆ ಹಾಗೂ ಕೃಷಿ ಇಲಾಖೆಗಳಿಂದ ವಿವಿಧ ಯೋಜನೆಗಳ ಸ್ತಬ್ಧ ಚಿತ್ರಗಳನ್ನು ರೂಪಿಸಿ ಪ್ರದರ್ಶಿಸಲಾಯಿತು. ಇವುಗಳಲ್ಲಿ ಎನ್ ಡಬ್ಲ್ಯು ಕೆ ಎಸ್ ಆರ್ ಟಿ ಸಿ ನಿರ್ಮಿಸಿದ ಸಬರಮತಿ ಆಶ್ರಮದ ಸ್ತಬ್ಧ ಚಿತ್ರಕ್ಕೆ ಪ್ರಥಮ ಬಹುಮಾನ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ದ್ವಿತೀಯ ಬಹುಮಾನ ಹಾಗೂ ಶಿಕ್ಷಣ ಇಲಾಖೆ ನಿರ್ಮಿಸಿದ ಸ್ತಬ್ಧ ಚಿತ್ರಗಳು ತೃತೀಯ ಬಹುಮಾನ ಪಡೆದವು.

ಸಾಂಸ್ಕೃತಿಕ ಕಾರ್ಯಕ್ರಮ: ವಿವಿಧ ಶಾಲಾ ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ನಗರದ ಸಿ ಡಿ ಓ ಜೈನ್ ಪ್ರೌಢಶಾಲೆ ಪ್ರಥಮ ಸ್ಥಾನ ಲೋಯಲಾ ಪ್ರಾಥಮಿಕ ಶಾಲೆ ದ್ವಿತೀಯ ಸ್ಥಾನ ಹಾಗೂ ಸೇಂಟ್ ಜಾನ್ ಪ್ರಾಥಮಿಕ ಶಾಲೆಯು ತೃತೀಯ ಬಹುಮಾನ ಪಡೆಯಿತು. ಉಪಸ್ಥಿತಿ: ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಉಪರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಅಪಾರ ಸಂಖ್ಯೆಯಲ್ಲಿ ಶಾಲಾ ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.

## ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ : 2024 –25 ನೇ ಸಾಲಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ಸಾಲ ಯೋಜನೆ, ನೇರ ಸಾಲ ಯೋಜನೆ, ಉದ್ಯಮ ಶೀಲತಾ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೇಡಿಟ್ ಯೋಜನೆ, ಗಂಗಾ ಕಲ್ಯಾಣ ಎಲ್ಲಾ ಯೋಜನೆಗಳಡಿಯಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಂಶದ http://sevasindu.karnataka.gov.in ನಲ್ಲಿ ಅಥವಾ ಕರ್ನಾಟಕ ಒನ್, ಗ್ರಾಮ ಒನ ನಲ್ಲಿ ನವೆಂಬರ 23ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹತೆಗಳು:.ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪರಿಶಿಷ್ಟ ಪಂಗಡದವರಾಗಿರಬೇಕು, ಹಾಗೂ ಕಳೆದ 15 ವರ್ಷದಿಂದ ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಕನಿಷ್ಠ 18 ವರ್ಷ ವಯೋಮಿತಿಯಲ್ಲಿರಬೇಕು. ವಾರ್ಷಿಕ ಆದಾಯ ಗ್ರಾಮೀಣ 1,50,000 ರೂ, ನಗರ ಪ್ರದೇಶ 2,00,000 ರೂ, ಮಿತಿಯಲ್ಲಿರ್ಬೇಕು. ಅರ್ಜಿದಾರರು ಅಥವಾ ಕುಟುಂಬದವರು ಯಾವುದೇ ಸದ್ಯಸರು ಸರ್ಕಾರಿ, ಅರೆ ಸರ್ಕಾರಿ ನೌಕರಿ ಹೊಂದಿರಬಾರದು. ಜಾತಿ, ಆದಾಯ ಪತ್ರ, ರೇಶನಕಾರ್ಡ ಅಥವಾ ಚುನಾವಣೆ ಗುರುತಿನ ಚೀಟಿ, ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ. ಡ್ರೈವಿಂಗ್ ಲೈಸ್‌ನ್ಸ್, ಬ್ಯಾಂಕ್ ಪುಸ್ತಕ, ಸಣ್ಣ ಹಿಂಡುವಳಿ(ಗಂಗಕಲ್ಯಾಣ ಯೋಜನೆ) ದಾಖಲಾತಿಗಳನ್ನು ಹೊಂದಿರಬೇಕು.

ಹೆಚ್ಚಿನ ಮಾಹಿತಿಗಾಗಿ ಯೋಜನೆಯ ಅರ್ಹತೆ, ಮತ್ತು ಸಲ್ಲಿಸುವ ದಾಖಲಾತಿಗಳ ಕುರಿತು ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ , ನಿಗಮಗಳ ವೆಬ್ ಸೈಟ್ , ಕಲ್ಯಾಣ ಮಿತ್ರ ಏಕಿಕೃತ ಎಸ್ ಸಿ, ಎಸ್ ಟಿ ಸಹಾಯವಾಣಿ ಸಂಖ್ಯೆ 9482300400 ಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ೬೯ನೇ ಕರ್ನಾಟಕ ರಾಜ್ಯೋತ್ಸವ : ಕನ್ನಡ ನಾಡು ನುಡಿ ಸೇವೆ ಗೈದ ಮಹಾನೀಯರನ್ನು ಸ್ಮರಿಸಿದ ಸಚಿವ ಸಂತೋಷ ಲಾಡ್

ಧಾರವಾಡ : ಈ ಕನ್ನಡ ಹಬ್ಬವನ್ನು ನಾವೆಲ್ಲರೂ ಅತ್ಯಂತ ಸಡಗರ, ಸಂಭ್ರಮದಿಂದ ಧ್ವಜಾರೋಹಣ ಮಾಡುವ ಮೂಲಕ ಆಚರಿಸುತ್ತಿದ್ದೇವೆ. ಇದು ನಮಗೆಲ್ಲರಿಗೂ ಪ್ರಮುಖ ಮತ್ತು ಹೆಮ್ಮೆಯ ಹಬ್ಬವಾಗಿದೆ ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ನಗರದ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ 69ನೇ ಕರ್ನಾಟಕ ರಾಜ್ಯೋತ್ಸವದ ನಿಮಿತ್ತ ರಾಷ್ಟ್ರೀಯ ಧ್ವಜಾರೋಹಣ ನೆರವೇರಿಸಿ, ಮಾತನಾಡಿದರು.

ಕರ್ನಾಟಕ ಏಕೀಕರಣ ದೇಶದ ಸ್ವಾತಂತ್ರ್ಯ ಹೋರಾಟದಷ್ಟೇ ಪ್ರಾಮುಖ್ಯತೆ ಪಡೆದಿದೆ. ಇದೇ ಸಂದರ್ಭದಲ್ಲಿ ಭೌಗೋಳಿಕವಾಗಿ 19 ವಿವಿಧ ಆಡಳಿತ ಭಾಗಗಳಲ್ಲಿ ಹರಿದು ಹಂಚಿ ಹೋಗಿದ್ದ ಕನ್ನಡದ ಮನಸ್ಸುಗಳನ್ನು ಭಾಷಾವಾರು ಪ್ರಾಂತ್ಯಗಳ ಆಧಾರದ ಮೇಲೆ 1956 ರಲ್ಲಿ ಒಗ್ಗೂಡಿಸಲಾಯಿತು. ಕನ್ನಡ ಮಾತನಾಡುವ ವಿವಿಧ ಭಾಗಗಳು ಸೇರಿ ಮೈಸೂರು ರಾಜ್ಯವು ಉದಯವಾಯಿತು ಎಂದರು.

ಕರ್ನಾಟಕ ಏಕೀಕರಣ ಚಳವಳಿಯನ್ನು ಹುಟ್ಟುಹಾಕಿದ್ದು ಧಾರವಾಡ ಜಿಲ್ಲೆ. ಈ ಸಂಗತಿ ನಮ್ಮೆಲ್ಲರ ಅಭಿಮಾನದ ಸಂಕೇತವಾಗಿದೆ. ಏಕೀಕರಣ ಚಳವಳಿಯ ಪ್ರಮುಖರಾದ ಆಲೂರ ವೆಂಕಟರಾವ್, ರಾ.ಹ. ದೇಶಪಾಂಡೆ, ಡೆಪ್ಯೂಟಿ ಚನ್ನಬಸಪ್ಪ, ಅದರಗುಂಚಿ ಶಂಕರಗೌಡ ಪಾಟೀಲ ಮತ್ತು ಇತರರನ್ನು ಈ ಸಂದರ್ಭದಲ್ಲಿ ನೆನಪಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಕರ್ನಾಟಕವು ವಿವಿಧತೆಯಲ್ಲಿ ಏಕತೆಯನ್ನು ಹೊಂದಿರುವ ರಾಜ್ಯವಾಗಿದೆ. ಕನ್ನಡ ಭಾಷೆಯು ನಮ್ಮ ಪರಂಪರೆ, ಸಾಹಿತ್ಯವನ್ನು ಸಾರಿ ಹೇಳುತ್ತದೆ. ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದ್ದು, ಎಲ್ಲಾ ಕಚೇರಿಗಳು, ಅಂಗಡಿಗಳು, ವಿವಿಧ ವಾಣಿಜ್ಯೋದ್ಯಮ ಸಂಸ್ಥೆಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಅಳವಡಿಸಲು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮವನ್ನು ಜಾರಿಗೆ ತರಲಾಗಿದೆ. ಇಂದು ರಾಜ್ಯದಾದ್ಯಂತ ಸರ್ಕಾರದಿಂದ ಕನ್ನಡಾಂಬೆಗೆ ನುಡಿನಮನ ಅರ್ಪಿಸಲಾಗುತ್ತಿದೆ ಎಂದು ಸಚಿವ ಸಂತೋಷ ಲಾಡ್ ತಿಳಿಸಿದರು.

ನರೇಂದ್ರ ಗ್ರಾಮದ ರಾಮಚಂದ್ರ ಹನುಮಂತ ದೇಶಪಾಂಡೆಯವರು ಕನ್ನಡದ ಕವಿ ಹಾಗೂ ಇತಿಹಾಸಕಾರರಾಗಿದ್ದರು. ಧಾರವಾಡ ಜಿಲ್ಲೆಯು ಸಾಹಿತ್ಯ ಹಾಗೂ ಸಾಂಸ್ಕೃತಿಕವಾಗಿ ಶ್ರೀಮಂತ ಜಿಲ್ಲೆಯಾಗಿದೆ. ಕರ್ನಾಟಕ ಸರ್ಕಾರವು ಡಾ. ದ.ರಾ.ಬೇಂದ್ರೆ, ಡಾ.ಮಲ್ಲಿಕಾರ್ಜುನ ಮನಸೂರ, ಬಸವರಾಜ ರಾಜಗುರು, ಆಲೂರು ವೆಂಕಟರಾವ್, ಡಿ.ವ್ಹಿ. ಹಾಲಭಾವಿ, ಡಾ. ಗಂಗೂಬಾಯಿ ಹಾನಗಲ್, ಡಾ. ಎಂ.ಎಂ. ಕಲಬುರ್ಗಿ



ಅವರ ಹೆಸರಿನಲ್ಲಿ ಟ್ರಸ್ಟ್‌ಗಳನ್ನು ಸ್ಥಾಪಿಸುವ ಮುಖಾಂತರ ಕನ್ನಡ ಸಂಸ್ಕೃತಿಗೆ ಪ್ರೋತ್ಸಾಹ ನೀಡುತ್ತಿದೆ.

ರಾಜ್ಯ ಸರ್ಕಾರವು ನುಡಿದಂತೆ ನಡೆದಿದ್ದು, ಜನಪರ ಯೋಜನೆಗಳಾದ ಶಕ್ತಿ ಯೋಜನೆ, ಗೃಹಲಕ್ಷ್ಮಿ ಯೋಜನೆ, ಅನ್ನ ಭಾಗ್ಯ ಯೋಜನೆ, ಗೃಹ ಜ್ಯೋತಿ ಹಾಗೂ ಯುವ ನಿಧಿ ಯೋಜನೆಯನ್ನು ಇಡೀ ರಾಜ್ಯವು ಸೇರಿದಂತೆ ಧಾರವಾಡ ಜಿಲ್ಲೆಯಲ್ಲಿ ಯಶಸ್ವಿಯಾಗಿ ಜಾರಿಗೊಳಿಸಲಾಗುತ್ತಿದೆ.

ಶಕ್ತಿ ಯೋಜನೆಯಡಿ ಧಾರವಾಡ ಜಿಲ್ಲೆಯಲ್ಲಿ ಇಲ್ಲಿಯವರೆಗೂ 1.07 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಿದ್ದು, ರೂ.30.54 ಕೋಟಿಗಳ ಮೊತ್ತದ ಸೇವೆಯನ್ನು ಪಡೆದಿರುತ್ತಾರೆ. ಗೃಹಲಕ್ಷ್ಮಿ ಯೋಜನೆಯಡಿ 3,82,189 ಮಹಿಳಾ ಫಲಾನುಭವಿಗಳಿಗೆ ರೂ.820.40 ಕೋಟಿ ಯನ್ನು ವಿತರಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ 3,84,630 ಕುಟುಂಬಗಳಿಗೆ ಆಹಾರ ಭದ್ರತೆ ಒದಗಿಸುವದರ ಜೊತೆಗೆ ನಗದಾಗಿ ರೂ.256 ಕೋಟಿಗಳನ್ನು ವಿತರಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ 4,96,928 ಗೃಹ ಬಳಕೆದಾರರು ಈ ಯೋಜನೆಯ ಪ್ರಯೋಜನ ಪಡೆದಿರುತ್ತಾರೆ. ಯುವನಿಧಿ ಯೋಜನೆಯಡಿ 3829 ಫಲಾನುಭವಿಗಳಿಗೆ ರೂ.3.85 ಕೋಟಿಗಳ ನೇರ ನಗದು ಒದಗಿಸಲಾಗಿದೆ ಎಂದು ಸಚಿವ ಸಂತೋಷ ಲಾಡ್ ಅವರು ಹೇಳಿದರು. ಧಾರವಾಡ ಜಿಲ್ಲೆಯಲ್ಲಿ ಹಿಂಗಾರಿನಲ್ಲಿ ಇಲ್ಲಿಯವರೆಗೆ 0.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಅಕ್ಟೋಬರ್ ತಿಂಗಳಲ್ಲಿ ವಾಡಿಕೆಗಿಂತ ಹೆಚ್ಚು ಮತ್ತು ನಿರಂತರವಾಗಿ ಮಳೆ ಆಗುತ್ತಿರುವುದರಿಂದ ರೈತರ ಬಿತ್ತನೆಗೆ ತೊಂದರೆಯಾಗಿದ್ದು, ಹಿಂಗಾರು ಬಿತ್ತನೆಗೆ ಹಿನ್ನಡೆಯಾಗಿದೆ ಎಂದು ಸಚಿವರು ತಿಳಿಸಿದರು. ನಾವು ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ಕನ್ನಡದಲ್ಲೇ ಮಾತನಾಡುತ್ತೇವೆ. ಬರೆಯುತ್ತೇವೆ, ನಿತ್ಯ ವ್ಯವಹಾರದಲ್ಲಿ ಕನ್ನಡವನ್ನೇ ಬಳಸುತ್ತೇವೆ. ಕನ್ನಡ ನುಡಿ, ಸಂಸ್ಕೃತಿ, ಪರಂಪರೆ ಉಳಿಸಲು ಸದಾ ಶ್ರಮಿಸುತ್ತೇವೆ ಎಂದು ಇದೇ ವೇಳೆ ಪ್ರಮಾಣ ಮಾಡೋಣ ಎಂದು ಸಾರ್ವಜನಿಕರಲ್ಲಿ ಸಚಿವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಂಸದ ಪ್ರೊ ಐ.ಜಿ.ಸನದಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಉಪ ಪೊಲೀಸ್ ಆಯುಕ್ತ ಮಾನಿಂಗ್ ನಂದಗಾವಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಹುಡಾ ಆಯುಕ್ತ ಡಾ.ಸಂತೋಷ ಬಿರಾದಾರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಬಿ.ಎಸ್.ಮುಗನೂರಮಠ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ, ತಹಶೀಲದಾರರಾದ ಡಿ.ಎಚ್.ಹೂಗಾರ, ಕೆ.ಆರ್.ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ

ಬೆಕ್ಕೇರಿ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ಗಣ್ಯರು, ಹಿರಿಯ ಅಧಿಕಾರಿ ಸಿಬ್ಬಂದಿಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮಹನೀಯರ ಪ್ರತಿಮೆಗೆ ಮಾಲಾರ್ಪಣೆ: ಕಾರ್ಯಕ್ರಮ ಪೂರ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಬಳಿಯ ಕಾರ್ಗಿಲ್ ಸ್ಮಾರಕ, ಡೆಪ್ಯೂಟಿ ಚನ್ನಬಸಪ್ಪ ಪ್ರತಿಮೆ, ಕೆ.ಜಿ.ಕುಂದಣಗಾರ ಪ್ರತಿಮೆಗೆ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಿದರು. ಜನಜಾಗೃತಿ ಸ್ಥಬ್ಧಚಿತ್ರದ ವಾಹನಕ್ಕೆ ಸಚಿವರಿಂದ ಚಾಲನೆ: ಕಾರ್ಯಕ್ರಮದ ನಂತರ ಜಿಲ್ಲಾ ಉಸ್ತುವಾರಿ ಸಚಿವರು, ಆರೋಗ್ಯ ಇಲಾಖೆಯಿಂದ ಹೆಣ್ಣು ಭ್ರೂಣ ಹತ್ಯೆ ನಿಷೇಧ ಕುರಿತ ಜನಜಾಗೃತಿಗಾಗಿ ರೂಪಿಸಿದ್ದ ಸ್ಥಬ್ಧಚಿತ್ರದ ವಾಹನಕ್ಕೆ ಮತ್ತು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಧಾರವಾಡ ಗ್ರಾಮೀಣ ವಿಭಾಗ ಕನ್ನಡ ಕ್ರಿಯಾ ಸಮಿತಿಯು ರೂಪಿಸಿದ್ದ ನಾಡಮಾತೆ ಭುವನೇಶ್ವರಿ ಭಾವಚಿತ್ರದ ಭವ್ಯ ಮೆರವಣಿಗೆಗೆ ಚಾಲನೆ ನೀಡಿದರು.

ಕಾರ್ಮಿಕ ಇಲಾಖೆಯಿಂದ ಅಸಂಘಟಿತ ವರ್ಗದ ಕಾರ್ಮಿಕರಿಗೆ ಲಭ್ಯವಿರುವ ಸೌಲಭ್ಯಗಳ ಕುರಿತು ಸಾರ್ವಜನಿಕ ಪ್ರಚಾರಕ್ಕಾಗಿ ರೂಪಿಸಿರುವ ಆರು ಆಟೋಗಳಿಗೆ ಸಚಿವರು ಹಸಿರು ಬಾವುಟ ತೋರಿ ಚಾಲನೆ ನೀಡಿದರು.

ಆಕರ್ಷಕ ಪಥಸಂಚಲನ: ಇಂದು ಜರುಗಿದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ, ಅಧಿಕಾರಿಗಳಾದ ಮಂಜುನಾಥ ಕುರಗೋಡ ಅವರ ನೇತೃತ್ವದಲ್ಲಿ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ವಾಸು ರಕ್ಷೇದ ಅವರ ನೇತೃತ್ವದಲ್ಲಿ ಜಿಲ್ಲಾ ನಾಗರಿಕ ಪೊಲೀಸ್ ಪಡೆ, ಧಾರವಾಡ ಶಹರದ ಪಿಎಸ್ಐ ಸ್ವಾತಿ ಮುರಾರಿ ಅವರ ನೇತೃತ್ವದ ಹುಬ್ಬಳ್ಳಿ ಧಾರವಾಡ ನಗರ ಪೊಲೀಸ್ ಆಯುಕ್ತರ ತಂಡ, ರಾಚಯ್ಯ ಅಮರಪ್ಪನಮಠ ಅವರ ನೇತೃತ್ವದ ಜಿಲ್ಲಾ ಗೃಹರಕ್ಷಕ ದಳ, ಪ್ರಭಾಕರ ಟಿ.ಹೊಸಮನಿ ಅವರ ನೇತೃತ್ವದ ಅಗ್ನಿಶಾಮಕ ದಳ, ಡಿ.ಆರ್.ಎಫ್.ಓ. ಚಂದ್ರಶೇಖರ ರೊಟ್ಟಿ ಅವರ ನೇತೃತ್ವದ ಅರಣ್ಯ ಇಲಾಖೆ ತಂಡ, ಸುಜಯ ಪರಕಾಳಿ ನೇತೃತ್ವದ ನೇವಲ್ ಎನ್.ಸಿ.ಸಿ. ಕೆ.ಇ.ಬೋರ್ಡ್ಸ್ ಸ್ಕೂಲ್, ವಿಜಯ ಹಿರೇಮಠ ನೇತೃತ್ವದ ಆದರ್ಶ ವಿದ್ಯಾಲಯದ ಭಾರತ ಸೇವಾ ದಳ, ಸಹನಾ ಮುನವಳ್ಳಿ ನೇತೃತ್ವದ ಪ್ರಜಂಟೇಶನ್ ಸ್ಕೂಲ್, ಗೌತಮಿ ಭಟ್ ನೇತೃತ್ವದ ಕೆ.ಎನ್.ಕೆ ಬಾಲಕೀಯರ ಪ್ರೌಢಶಾಲೆ, ರಿಷಭ್ ಘಾರವಾಲೆ ನೇತೃತ್ವದ ರಾಜೀವಗಾಂಧಿ ಆಂಗ್ಲ ಮಾಧ್ಯಮ ಶಾಲೆ, ಯುವರಾಜ ಕೊಲ್ಹಾರ ನೇತೃತ್ವದ ಸೇಂಟ್ ಜೋಸೆಪ್ಸ್ ಸ್ಕೂಲ್, ಮಹಮ್ಮದ ಉಮರ್ ನೇತೃತ್ವದ ಶ್ರೀ ಎನ್.ಎ.ಮುತ್ತಣ್ಣ ಸ್ಮಾರಕ ಪೊಲೀಸ್ ಮಕ್ಕಳ ವಸತಿ ಶಾಲೆಯ ಮಕ್ಕಳು ಕವಾಯತಿನಲ್ಲಿ ಭಾಗಿಯಾಗಿದ್ದರು.

ಜಿಲ್ಲಾ ಸಶಸ್ತ್ರ ಪೊಲೀಸ್ ಬ್ಯಾಂಡನ ಬ್ಯಾಂಡ್ ಮಾಸ್ಟರ್ ಎ.ಆರ್.ಎಸ್.ಐ. ಅವರಾದ ವಾಯ್.ಎಫ್.ಭಜಂತ್ರಿ, ಸ್ಟಿಕ್ ಮೇಜರ್ ಸಾಗರ ಬಸರಕೋಟಿ ಅವರ ತಂಡ ಸುಶ್ರಾವ್ಯವಾಗಿ ಬ್ಯಾಂಡ್ ನುಡಿಸಿತು. ಪಥಸಂಚಲನದಲ್ಲಿ ಬಹುಮಾನ ವಿಜೇತ ತಂಡಗಳು: 69ನೇ ಕರ್ನಾಟಕ ರಾಜ್ಯೋತ್ಸವದ ಇಂದಿನ ಕವಾಯತಿನಲ್ಲಿ ಭಾಗಿಯಾಗಿದ್ದ, ಕುಮಾರ ಮಹಮದ್ ಉಮರ್ ಅವರ ನೇತೃತ್ವದ ಎನ್.ಎ.ಮುತ್ತಣ್ಣ ಸ್ಮಾರಕ ಪೊಲೀಸ್ ಮಕ್ಕಳ ವಸತಿ ಶಾಲೆಯ ತಂಡವು ಪ್ರಥಮ ಸ್ಥಾನ ಪಡೆದುಕೊಂಡಿದೆ.

ಕುಮಾರ ಸುಜಯ ಪರಕಾಳಿ ಅವರ ನೇತೃತ್ವದ ಕೆ.ಇ.ಬೋರ್ಡ್ಸ್ ಸ್ಕೂಲ್(ನೇವಲ್ ಎನ್.ಸಿ.ಸಿ)ನ ತಂಡವು ದ್ವಿತೀಯ ಸ್ಥಾನ ಪಡೆದುಕೊಂಡಿದೆ.

ಕುಮಾರಿ ಗೌತಮಿ ಭಟ್ ಅವರ ನೇತೃತ್ವದ ಕೆ.ಎನ್.ಕೆ. ಬಾಲಕಿಯರ ಶಾಲೆಯ ತಂಡವು ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಬಹುಮಾನ ವಿಜೇತರಿಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಶಿಲ್ಡ್ ಮತ್ತು ಪ್ರಮಾಣಪತ್ರ ವಿತರಿಸಿ, ಶುಭಾಶಯ ಕೋರಿದರು. ಸಾಂಸ್ಕೃತಿಕ ಸೌರಭ: ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಬೆಳಿಗ್ಗೆ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಆಕರ್ಷಕವಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸುವ ಮೂಲಕ ನೇರೆದ ಜನರ ಗಮನ ಸೆಳೆದರು. ಜೆಎಸ್ಎಸ್ ಸಂಸ್ಥೆಯ ಕನ್ನಡ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳಿಂದ ಹಾಗೂ ಕರ್ನಾಟಕ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿಗಳಿಂದ ಮತ್ತು ಬಿಜಿಎಸ್ ಪ್ರೌಢಶಾಲಾ ವಿದ್ಯಾರ್ಥಿಗಳಿಂದ ಸಮೂಹ ನೃತ್ಯಗಳು ಜರುಗಿದವು.

## ನಮ್ಮ ಕನ್ನಡ ನಾಡು ಕಲೆ ಸಾಹಿತ್ಯ ಸಂಸ್ಕೃತಿ ಶಿಕ್ಷಣ ಸಂಗೀತ ಕ್ಷೇತ್ರದ ಬೀಡು ಗದುಗಿನ ಇತಿಹಾಸದಲ್ಲಿ ಕರ್ನಾಟಕ ಸಂಭ್ರಮ-50 ಐತಿಹಾಸಿಕ ಮೈಲಿಗಲ್ಲು



ಗದಗ : ಉದಯವಾಗಲಿ ನಮ್ಮ ಚಲುವ ಕನ್ನಡ ನಾಡು, ಬದುಕು ಬಲುಹಿನ ನಿಧಿಯು ಸದಭಿಮಾನದ ಗೂಡು ಎಂದು ಗದುಗಿನ ಹುಯಿಲಗೋಳ ನಾರಾಯಣರಾಯರಿಂದ ರಚನೆಯಾದ ಈ ಗೀತೆಯು ಶತಮಾನೋತ್ಸವ ಆಚರಿಸುತ್ತಿದೆ. 1970ರ ವರೆಗೆ ಇದುವೇ ನಾಡಗೀತೆಯಾಗಿ ಗೌರವ ಪಡೆದದ್ದು ನಮ್ಮೆಲ್ಲರಿಗೆ ಹೆಮ್ಮೆ ಹಾಗೂ ಅಭಿಮಾನದ ಸಂಗತಿ ಎಂದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರು ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತದಿಂದ ಏರ್ಪಡಿಸಲಾದ ಕನ್ನಡ ರಾಜ್ಯೋತ್ಸವದ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಅನೇಕ ಮಹನೀಯರು ನಾಡಿನ ಏಕೀಕರಣಕ್ಕಾಗಿ ಹೋರಾಡಿದ ಫಲಶ್ರುತಿಯಾಗಿ ಹರಿದು ಹಂಚಿಹೋಗಿದ್ದ ಈ ರಾಜ್ಯವು 1956 ರಲ್ಲಿ ಮೈಸೂರು ರಾಜ್ಯವಾಗಿ ಉದಯವಾಯಿತು. ಭಾಷಾವಾರು ಪ್ರಾಂತ್ಯ ನಿರ್ಮಾಣವಾಗಬೇಕೆಂದು ಕರ್ನಾಟಕ ಏಕೀಕರಣ ಚಳುವಳಿಯ ಉದ್ದೇಶವಾಗಿದ್ದರಿಂದ ಮೈಸೂರು ರಾಜ್ಯವನ್ನು 1973 ನವೆಂಬರ್ 01 ರಂದು ಕರ್ನಾಟಕ ರಾಜ್ಯವೆಂದು ಪುನರ್ ನಾಮಕರಣ ಮಾಡಲಾಯಿತು ಎಂದು ತಿಳಿಸಿದರು.

ನಮ್ಮ ಕನ್ನಡ ನಾಡು ಕಲೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ ಹಾಗೂ ಸಂಗೀತ ಕ್ಷೇತ್ರದ ಬೀಡು. ಇದಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ. ಏಕೀಕರಣ ಚಳುವಳಿಯ ಅಗತ್ಯವನ್ನು ಪ್ರಬಲವಾಗಿ ಪ್ರತಿಪಾದಿಸಿದ್ದ ಕನ್ನಡದ ಕುಲಪುರೋಹಿತರಾದ ವೆಂಕಟರಾಯರು, ಅಂದಾನಪ್ಪ ದೊಡ್ಡಮೇಟಿ ಅವರನ್ನು ನಾವೆಲ್ಲ ಈ ಸಂದರ್ಭದಲ್ಲಿ ಗೌರವದಿಂದ ಸ್ಮರಿಸೋಣ ಎಂದರು.

ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ರನ್ನ, ಸವಡಿಯ ಒಂದನೆಯ ನಾಗವರ್ಮ, ಚಿಕ್ಕಹಂದಿಗೋಳದ ಶಾಸನಕವಿ ಮಲ್ಲ, ದುರ್ಗಸಿಂಹ, ಕುಮಾರವ್ಯಾಸ, ಚಾಮರಸ, ನಯಸೇನ, ಪುಲಿಗೆರೆಯ ಸೋಮನಾಥ, ಮುಕ್ತಾಯಕ್ಕ ಒಂದಡೆಯಾದರೆ ಇನ್ನೊಂದೆಡೆ ನಮ್ಮ ಸಾಹಿತ್ಯ ಕ್ಷೇತ್ರದ ಶ್ರೀಮಂತಿಕೆಯ ಕಿರೀಟಕ್ಕೆ ಗರಿಯನ್ನು ಮೂಡಿಸಿದವರು ಹುಯಿಗೋಳ ನಾರಾಯಣರಾಯರು, ಡಾ. ಎಂ. ಎಸ್. ಸುಂಕಾಪುರ, ಪ್ರೊ. ಕೀರ್ತಿನಾಥ ಕುರ್ತಕೋಟಿ, ಡಾ. ಚನ್ನವೀರ ಕಣವಿ, ಡಾ. ಗಿರಡ್ಡಿ ಗೋವಿಂದರಾಜ, ಡಾ. ಎನ್. ಕೆ. ಕುಲಕರ್ಣಿ, ಮಾಧವ ಕುಲಕರ್ಣಿ, ಡಾ. ಎಚ್. ಎನ್. ಹೂಗಾರ, ಡಾ. ರಾಜಶೇಖರ ಭೂಸನೂರಮಠ, ಹಿಂದೂಸ್ಥಾನಿ ಗಾಯಕ ಭಾರತ ರತ್ನ ಪುರಸ್ಕೃತ ಪಂಡಿತ ಭೀಮಸೇನ ಜೋಶಿಯವರು, ಸಂಗೀತ ದಿಗ್ಗಜರಾದ ಪಂಚಾಕ್ಷರಿ ಗವಾಯಿಗಳು ಮತ್ತು ವಿಕಲಚೇತನರ ಬಾಳಿನ ಬೆಳಕಾದ ಡಾ. ಪುಟ್ಟರಾಜ ಕವಿಗವಾಯಿಗಳು, ಕನ್ನಡದ ಜಗದ್ಗುರುಗಳೆಂದ ಮನೆಮಾತಾದ ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು. ಪತ್ರಿಕಾರಂಗದ ದಿಗ್ಗಜರಾದ ಪ.ಲೋ. ಬಂಕಾಪುರ, ಜೀವನ, ಪಂಢರಿನಾಥ ಗಲಗಲಿ, ಹ.ರಾ. ಕಿದಿಯೂರ, ಎಚ್. ಎಸ್. ಹೊಂಬಾಳಿ, ಕೌತಾಳ ವೀರಪ್ಪ, ಆರ್. ಕೆ. ಜಮಾದಾರ ಮೊದಲಾದವರು ಸ್ಮರಣೀಯರು ಎಂದು ನುಡಿದರು.

ಕರ್ನಾಟಕ ಸಂಭ್ರಮ–50: ಗದುಗಿನ ಇತಿಹಾಸದಲ್ಲಿ ಕರ್ನಾಟಕ ಸಂಭ್ರಮ–50 ಐತಿಹಾಸಿಕ ಮೈಲಿಗಲ್ಲು. ಕನ್ನಡ ಭಾಷೆಯನ್ನಾಡುವ ಕನ್ನಡಿಗರು ಒಂದೇ ರಾಜ್ಯದ ಆಳ್ವಿಕೆಯಲ್ಲಿ ಒಂದಾಗಬೇಕು ಎನ್ನುವ ಆಶಯದಂತೆ ನವಂಬರ್–1, 1956 ರಂದು ಕರ್ನಾಟಕ ಏಕೀಕರಣವಾಯಿತು. ಗದುಗಿನ ಕಾಟನ್ ಸೇಲ್ ಸೊಸೈಟಿಯಲ್ಲಿ ದಿನಾಂಕ: 27, 28 ಮತ್ತು 29ರ ಡಿಸೆಂಬರ್ 1961 ರಲ್ಲಿ ಜರುಗಿದ 43ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಶ್ರೀ ಕೆ. ಜಿ. ಕುಂದಣಗಾರ ಮತ್ತು ಸ್ವಾಗತ ಸಮಿತಿಯ ಅಧ್ಯಕ್ಷರಾದ ಶ್ರೀ ಕೆ. ಎಚ್. ಪಾಟೀಲ ಅವರ ಆಶಯದಂತೆ ಮೈಸೂರು ರಾಜ್ಯಕ್ಕೆ ಕರ್ನಾಟಕ ರಾಜ್ಯವೆಂದು ನಾಮಕರಣವಾಗಲಿ ಎಂದು ಸಮ್ಮೇಳನದಲ್ಲಿ ನಿರ್ಣಯ ಕೈಗೊಳ್ಳಲಾಯಿತು. ನಂತರ ಹೋರಾಟದ ಫಲವಾಗಿ 1973 ನವಂಬರ್ 01 ರಂದು ಮೈಸೂರು ರಾಜ್ಯ 'ಕರ್ನಾಟಕ' ಎಂದು ನಾಮಕರಣವಾಯಿತು ಎಂದು ಹೇಳಿದರು.

ನಾಮಕರಣ ಕರ್ನಾಟಕ ಸಂಭ್ರಮಾಚರಣೆಯನ್ನು ಗದುಗಿನಲ್ಲಿ 1973ರ ನವಂಬರ್–03 ರಂದು ಹಂಪೆಯ ವಿರುಪಾಕ್ಷೇಶ್ವರ ದೇವಾಲಯದಲ್ಲಿ ಪ್ರಜ್ವಲಿಸಿದ ಕನ್ನಡ ಜ್ಯೋತಿಯನ್ನು ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿ ಸ್ವೀಕರಿಸಿದ ಅಂದಿನ ಮುಖ್ಯಮಂತ್ರಿ ದೇವರಾಜ ಅರಸ, ಮೈಸೂರಿನ ಅರಸರಾದ ಜಯಚಾಮರಾಜೇಂದ್ರ ಒಡೆಯರ ಹಾಗೂ ಅರಣ್ಯ ಮತ್ತು ಕೃಷಿ ಸಚಿವರಾದ ಕೆ. ಎಚ್. ಪಾಟೀಲ, ಪೌರಾಡಳಿತ ಸಚಿವರಾದ ಡಿ. ಕೆ. ನಾಯ್ಕರ, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ದೇವೇಂದ್ರಪ್ಪ ಗಾಳಪ್ಪ ಹಾಗೂ ಕನ್ನಡಾಭಿಮಾನಿಗಳು ವೀರನಾರಾಯಣ ದೇವಸ್ಥಾನದಿಂದ ಕಾಟನ್ ಸೇಲ್ ಸೊಸೈಟಿಯವರೆಗೆ ಮೆರವಣಿಗೆ ಮೂಲಕ ಬಂದು ಸಾರ್ವಜನಿಕ ಸಭೆ ನಡೆಸಿ ಕರ್ನಾಟಕ ನಾಮಕರಣ ಮಹೋತ್ಸವವನ್ನು ಸಂಭ್ರಮಿಸಿದ್ದು ಇತಿಹಾಸದಲ್ಲಿ ದಾಖಲಾರ್ಹ ಎಂದು ತಿಳಿಸಿದರು. 1973 ನವಂಬರ್ 01, 02 ಮತ್ತು 03 ರಂದು ಜರುಗಿದ ಕರ್ನಾಟಕ ನಾಮಕರಣ ಮಹೋತ್ಸವವನ್ನು ಮರುಸೃಷ್ಟಿಸಿ, 2023ರ ನವಂಬರ್ 01, 02 ಮತ್ತು 03 ರಂದು ಮೂರು ದಿನಗಳ ಕಾಲ ಗದಗನಲ್ಲಿ ಗತವೈಭವ ಮರುಕಳಿಸುವ ಐತಿಹಾಸಿಕ ಕಾರ್ಯಕ್ರಮಕ್ಕೆ ತಾವೆಲ್ಲ ಸಾಕ್ಷಿಯಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೇರಿದಂತೆ ಸಚಿವ ಸಂಪುಟದ 20ಕ್ಕೂ ಹೆಚ್ಚು ಸಚಿವರು ಕನ್ನಡಾಭಿಮಾನಿಗಳು ಕರ್ನಾಟಕ ಸಂಭ್ರಮ–50ರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನಾಮಕರಣ ಮಹೋತ್ಸವದ ಇತಿಹಾಸವನ್ನು ಮೆಲುಕು ಹಾಕಿದರು. ಇಂದು 'ಕರ್ನಾಟಕ ಸಂಭ್ರಮ– 50' ಒಂದು ವರ್ಷದ ಸಂಭ್ರಮಾಚರಣೆಯ ಸಮಾರೋಪ ಸಮಾರಂಭವಾಗಿದ್ದು, ಕನ್ನಡ ನಾಡು–ನುಡಿಯ ಅಭಿಮಾನ ಬೆಳೆಸಲು ಕರ್ನಾಟಕ ರಾಜ್ಯೋತ್ಸವದ ಈ ಸಂದರ್ಭ ಔಚಿತ್ಯಪೂರ್ಣವಾಗಿದೆ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಉಪರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಅಪಾರ ಸಂಖ್ಯೆಯಲ್ಲಿ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹಿರಿಯ ಜೀವಗಳಿಗೆ ಬಟ್ಟೆ- ಸಿಹಿ ವಿತರಣೆ

## ಸುರೇಶ ಯಾದವ ಫೌಂಡೇಶನ್ ವತಿಯಿಂದ ದೀಪಾವಳಿ



**ಬೆಳಗಾವಿ:** ತಾಲೂಕಿನ ಬಸವನ ಕುಡಚಿ ದೇವರಾಜ ಅರಸ ಕಾಲನಿಯ ಚಿನ್ನಮ್ಮ ಬಸವಂತಯ್ಯ ಹಿರೇಮಠ ವೃದ್ದಾಶ್ರಮದಲ್ಲಿರುವ ಹಿರಿಯ ಜೀವಗಳಿಗೆ ಸುರೇಶ ಯಾದವ ಫೌಂಡೇಶನ ವತಿಯಿಂದ ದೀಪಾವಳಿಯ ನಿಮಿತ್ತ ಹೊಸ ಬಟ್ಟೆಗಳನ್ನು ಹಾಗೂ ಸಿಹಿ ಹಂಚುವ ಮೂಲಕ ದೀಪಾವಳಿಯನ್ನು ಆಚರಿಸಲಾಯಿತು.

ಸುರೇಶ ಯಾದವ ಫೌಂಡೇಶನ ಅಧ್ಯಕ್ಷರಾದ ಸುರೇಶ ಯಾದವ ಅವರು ಹಿರಿಯರನ್ನು ಉದ್ದೇಶಿಸಿ ಮಾತನ್ನಾಡುತ್ತಾ ಮಕ್ಕಳಿಗಾಗಿ ಸರ್ವಸ್ವವನ್ನು ತ್ಯಾಗ ಮಾಡುವ ಪೋಷಕರನ್ನು ಕೊನೆಗಳಿಗೆಯಲ್ಲಿ ಪ್ರೀತಿ, ಗೌರವದಿಂದ ಕಾಣಬೇಕು,

ಹಿರಿಯರ ಅನುಭವದ ನುಡಿಗಳೇ ಯುವಪೀಳಿಗೆಗೆ ಗುಣಪಾಠವಾಗಿದ್ದು, ಅವರ ಮಾರ್ಗದರ್ಶನದಲ್ಲಿ ಉತ್ತಮ ಸಮಾಜ ಕಟ್ಟಲು ಶ್ರಮಿಸಬೇಕಿದೆ. . ಅವರು ನಮ್ಮನ್ನು ಕಷ್ಟಪಟ್ಟು ಬೆಳೆಸಿ, ವಿದ್ಯಾವಂತರನ್ನಾಗಿ ಮಾಡಿರುತ್ತಾರೆ. ಅವರ ಮುಪ್ಪಿನ ಕಾಲದಲ್ಲಿ ಗೌರವದಿಂದ ನಡೆಸಿಕೆಣಟಿಜಜಜಿಟಿಜಜಳ್ಳುವುದು ನಮ್ಮ ಕರ್ತವ್ಯವಾಗಿದೆ ಎಂದರು.

ಆದರೆ ಇಂದಿನ ಕೆಲವು ಮಕ್ಕಳು ದೊಡ್ಡವರಾದ ಮೇಲೆ ವಿದೇಶಕ್ಕೆ ಹಾರುತ್ತಾರೆ. ಹಣ ಸಂಪಾದನೆಯ ನೆಪದಲ್ಲಿ ಪೋಷಕರು ತಂದೆ ತಾಯಿಗಳ ಮರತೇ ಹೋಗುತ್ತಾರೆ. ಹೆತ್ತು ಹೊತ್ತವರನ್ನು ವೃದ್ದಾಶ್ರಮ ಸೇರಿಸಿ ಮನುಷ್ಯತ್ವ ಕಳೆದುಕೊಳ್ಳುತ್ತಾರೆ. ನಾವು ಬಿತ್ತಿದ್ದನ್ನು ನಾವೇ ಉಣ್ಣಬೇಕು ಅನ್ನೋ ಮಾತಿದೆ. ಆದರೆ ನಮ್ಮ ವೃದ್ಧರಿಗೆ ಇದು ಸಿಗುತ್ತಿಲ್ಲ. ಅವರ ಕೊನೆಯ ದಿನಗಳಲ್ಲಿ ಅವರಿಗೆ ಮುಖದಲ್ಲಿ ನೋವೇ ಹೆಚ್ಚಾಗಿರುತ್ತದೆ ಎಂದು ವಿಷಾದ ವ್ಯಕ್ತಪಡಿಸಿದರು. ಕಾರ್ಯಕ್ರಮದ ದಿವ್ಯ ಸಾನಿದ್ಯವನ್ನು ಶ್ರೀ. ಮ. ನಿ. ಪ್ರ. ಡಾ:ಅಲ್ಲಮಪ್ರಭು ಮಹಾಸ್ವಾಮಿಗಳು ಅವರು ಆಶೀರ್ವಚನ ನೀಡುತ್ತಾ ಶ್ರೀ ಸುರೇಶ ಯಾದವ ಅವರು ಹಲವಾರು ವರ್ಷಗಳಿಂದ ನಮ್ಮ ಆಶ್ರಮಕ್ಕೆ ಬೆನ್ನುಲುಬಾಗಿ ನಿಂತು ಪ್ರತಿ ವರ್ಷ ವಸ್ತ್ರ ವಿತರಣೆ ಮಾಡುತ್ತಾರೆ. ದಿಕ್ಕು ಇಲ್ಲದವರೆಗೆ ದೇವರೇ ಗತಿ ಎಂಭತ್ತೆ ಸುರೇಶ ಯಾದವರ ಮುಖಾಂತರ ದೇವರು ಕೆಲಸ ಮಾಡಿಸುತ್ತಾರೆ. ನಿಮಗೆ ಯಾರು ಇಲ್ಲ ಎಂಭ ಭಾವನೆ ಬರಬಾರದು ಎಂದು ಅವರು ಪ್ರತಿ ವರ್ಷ ಎಲ್ಲಾ ತರಹದ ಸಹಾಯ ಮಾಡುತ್ತಾರೆ ಹಾಗೂ ಸಾನಿದ್ಯವನ್ನು ಶ್ರೀ ವೀರಭದ್ರೇಶ್ವರ ಸ್ವಾಮಿಗಳು ವಹಿಸಿದ್ದರು.


ಆಶ್ರಮದ ಉಸ್ತುವಾರಿ ಎಮ್. ಸ. ಚೌಗಲೆ ಸವಿಸ್ತಾರವಾಗಿ ಹೇಳಿದರು. ಈ ಸಂದರ್ಭದಲ್ಲಿ ಜಾನಕಿ ಮಾರುತಿ ದೇಗ್ಗಿನವರ, ಪ್ರತಾಪ, ಸುಲೋಚನ, ಜಯಶ್ರೀ, ನಿಂಗಪ್ಪ ಕರೆಪ್ಪಗೋಳ, ರಾಜಶೇಖರ್ ಶೇಂದ್ರಿ,ಮಲ್ಲಾರಿ ದೀಕ್ಷಿತ್, ನಾನಗೌಡ ಬಿರಾದಾರ, ರಮೇಶ್ ಮಗದುಮ್, ಶಾರದಾ ದೇಸಾಯಿ, ಮಾರುತಿ ತೆಲಸಂಗ್, ಪ್ರಭು ಶಿವನಾಯಕ, ಮುಂತಾದವರು ಉಪಸ್ಥಿರಿದ್ದರು.

# ಇಂದು ಬನಹಟ್ಟಿಯ ಮಲ್ಲಿಕಾರ್ಜುನ ದೇವರ ಜಾತ್ರೆ

**ರಬಕವಿ-ಬನಹಟ್ಟಿ:** ಒಂದುವರೆ ಶತಮಾನದ ಇತಿಹಾಸವಿರುವ ಇಲ್ಲಿನ ಸೋಮವಾರ ಪೇಟೆ ಸಮಸ್ತ ದೈವ ಮಂಡಳಿ ಹಾಗು ಶ್ರೀ ಮಲ್ಲಿಕಾರ್ಜುನ ಸದ್ಭಕ್ತ ಮಂಡಳಿಯವರು ಪ್ರತಿ ವರ್ಷ ನಡೆಸಿಕೊಂಡು ಬರುತ್ತಿರುವ ಶ್ರೀ ಮಲ್ಲಿಕಾರ್ಜುನ ದೇವರ ಜಾತ್ರಾ ಮಹೋತ್ಸವ ನಿಮಿತ್ತ ರಥ-'ೋತ್ಸವವು ನ.2 ಶನಿವಾರದಂದು ದೀಪಾವಳಿ ಪಾಢ್ಯಮಿ ದಿನದಂದು ಜರುಗಲಿದೆ.

ರಾತ್ರಿ 8 ಗಂಟೆಗೆ ಶ್ರೀ ಮಲ್ಲಿಕಾರ್ಜುನ ದೇವರ ರಥೋತ್ಸವ ನಡೆಯುವದು. ಸುಮಾರು 42 ಉಪಜಾತಿಗಳ ನೇತೃತ್ವದಲ್ಲಿ ಸ್ಥಾಪಿತಗೊಂಡ ಈ ದೈವ ಮಂಡಳಿಯ ನೇತೃತ್ವದಲ್ಲಿ ಜಾತ್ರೆ ನಡೆಯಲಿದ್ದು, ನಗರದ ಮಲ್ಲಿಕಾರ್ಜುನ ದೇವರ ಗುಡಿಯಿಂದ ಶಂಕರ ಜುಂಜಪ್ಪನವರರ ಮನೆಯವರೆಗೆ ರಥೋತ್ಸವ ಕಾರ್ಯಕ್ರಮವು ಜರುಗಲಿದೆ ಎಂದು ಸಮಿತಿಯು ತಿಳಿಸಿದೆ.

ನಗರದ ಆರಾಧ್ಯ ದೈವ ಶ್ರೀ ಕಾಡಸಿದ್ಧೇಶ್ವರ ಜಾತ್ರೆಯಂತೆ ಪಟಾಕಿಗಳ ಸುರಿಮಳೆ ಇಲ್ಲಿಯು ಕೂಡಾ ಅತೀ ವಿಜ್ರುಂಭಣೆಯಿಂದ ನಡೆಯಲಿದೆ. ಅಲ್ಲದೆ ನಂತರ ರಾತ್ರಿ 9 ಗಂಟೆಗೆ ಖ್ಯಾತ ಆಕಾಶವಾಣಿ ಮತ್ತು ದೂರದರ್ಶನ ಕರಡಿ ಮೇಳವಾದ ರಬಕವಿ ಹಾಗು ಮಹಾಲಿಂಗಪೂರದ ಕರಡಿ ಮೇಳ ಕಾರ್ಯಕ್ರಮವು ನಡೆಯಲಿವೆ. ನಗರದ ಗಣ್ಯ ವ್ಯಕ್ತಿಯಾಗಿದ್ದ ದಿ. ಬಸಲಿಂಗಪ್ಪ



ಶೆಟ್ಟರರು ನೀಡಿದ ಭವ್ಯವಾದ ರಥ ಜಾತ್ರೆಗೆ ಮತ್ತಷ್ಟು ಕಳೆ ನೀಡಲಿದೆ.

ಈ ಜಾತ್ರಾ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ತೇರದಾಳ ಕ್ಷೇತ್ರದ ಶಾಸಕ ಸಿದ್ದು ಸವದಿ, ಶಾಸಕಿ, ಮಾಜಿ ಸಚಿವೆ ಉಮಾಶ್ರೀ, ಸಿದ್ದು ಕೊಣ್ಣೂರ, ಡಾ. ಪದ್ಮಜೀತ ನಾಡಗೌಡ ಪಾಟೀಲ ಸೇರಿದಂತೆ ಮುಂತಾದವರು ಆಗಮಿಸಲಿದ್ದಾರೆ.

ಮರುದಿನ ನ.3 ರವಿವಾರದಂದು ಶಂಕರಲಿಂಗ ದೇವಸ್ಥಾನದಲ್ಲಿ ಮಧ್ಯಾಹ್ನ 12 ಗಂಟೆಗೆ ಅನ್ನಪ್ರಸಾದ ಹಾಗು ಅಶೋಕ ಕಾಲನಿಯ ಕುಸ್ತಿ ಮೈದಾನದಲ್ಲಿ 3 ಗಂಟೆಯಿಂದ ಜಂಗಿ ನಿಕಾಲಿ ಕುಸ್ತಿಗಳು ಕರ್ನಾಟಕ, ಮಹಾರಾಷ್ಟ್ರದ ಘಟಾನುಘಟಿಗಳಿಂದ ನಡೆಯಲಿವೆ. ಸುಮಾರು 90 ಜೋಡಿಗಳ ಬೃಹತ್ ಕುಸ್ತಿಗಳು ಅಂದು ನಗರದ ಅಶೋಕ ಕಾಲನಿಯಲ್ಲಿನ ಗಣಪತಿ ಗುಡಿಯ ಹತ್ತಿರದ ಮೈದಾನದಲ್ಲಿ ನಡೆಯಲಿದ್ದು, ಇದರ ಸಂಪೂರ್ಣ ನೇತೃತ್ವವನ್ನು ಸೋಮವಾರ ಪೇಟೆ ಸಮಸ್ತ ದೈವ ಮಂಡಳಿ ಹಾಗು ಶ್ರೀ ಮಲ್ಲಿಕಾರ್ಜುನ ಜಾತ್ರಾ ಕಮಿಟಿ ವಹಿಸಿಕೊಂಡಿದ್ದಾರೆ. ಅಂದು ಸಂಜೆ 8 ಗಂಟೆಗೆ ಹಳೆ ಅಂಚೆ ಕಚೇರಿ ಹತ್ತಿರ ನು-ರಿತ ಗಾಯಕರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

ಜಾತ್ರೆಯ ಕೊನೆಯ ದಿನ ನ.4 ಸೋಮವಾರದಂದು ಕಳಸೋತ್ಸವ ನಡೆಯಲಿದ್ದು, ಸೋಮವಾರ ಪೇಟೆಯಿಂದ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. ನಂತರ ರಾತ್ರಿ 8 ಕ್ಕೆ ಸಂಗೀತ ಸುಧೆ ಕಾರ್ಯಕ್ರಮ ಜರುಗಲಿದೆ ಎಂದು ಜಾತ್ರಾ ಕಮೀಟಿಯ ಚೇರಮನ್ ಮಲ್ಲಿಕಾರ್ಜುನ ತುಂಗಳ, ಮಹಾಶಾಂತ ಶೆಟ್ಟಿ ತಿಳಿಸಿದ್ದಾರೆ.

## ಚೂರು-ಪಾರು

### ಲಘ ಉದ್ಯೋಗ ಭಾರತಿ ಮಹಿಳಾ ಶಾಖೆಯ ವಾರ್ಷಿಕೋತ್ಸವ




ಬೆಳಗಾವಿ: ಲಘು ಉದ್ಯೋಗ ಭಾರತಿ ಬೆಳಗಾವಿ ಮಹಿಳಾ ಶಾಖೆಯ ಪ್ರಥ-'ಮವಾರ್ಷಿಕೋತ್ಸವ ನಗರದ ನ್ಯೂ ಉದಯ ಭವನದಲ್ಲಿ ಮಂಗಳವಾರ ಯಶಸ್ವಿಯಾಗಿ ಜರುಗಿತು. ಮುಖ್ಯ ಅತಿಥಿಯಾಗಿ ತೆರಿಗೆ ಇಲಾಖೆಯ ಜಂಟಿ ನಿರ್ದೇಶಕಿ ಪ್ರವಾಸೊದ್ಯಮ ಇಲಾಖೆಯ ನಿರ್ದೇಶಕಿಸೌಮ್ಯ ಬಾಪಟ್ ಮಾತನಾಡಿ, ಮಹಿಳೆಯರಿಗೆ ಸ್ವಉದ್ಯೋಗ ಹಾಗೂ ಸಣ್ಣ ಸಣ್ಣ ಕೈಗಾರಿಕೆಗಳನ್ನು ಉಳಿಸಿ ಬೆಳೆಸುವ ಈ ನಿಟ್ಟಿನಲ್ಲಿ ಈ ಶಾಖೆಯು ಕಾರ್ಯೋನ್ಮುಖ ವಾಗಿದೆ ಎಂದರು.ಇದೇ ವೇಳೆ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಲಾಯಿತುಎಲ್‌ಯುಬಿ ರಾಜ್ಯ ಕಾರ್ಯದರ್ಶಿ ಡಾ. ಪ್ರಿಯಾ ಪುರಾಣಿಕ ಅಧ್ಯಕ್ಷತೆ ವಹಿಸಿಮಾತನಾಡಿ, ಹೆಚ್ಚಿನ ಸದಸ್ಯ ರಾಔದ್ಯೋಗಿಕ ರಂಗದಲ್ಲಿ ಮಹಿಳಾ ಸದಸ್ಯರು ಭಾಗವಹಿಸಿ ಇನ್ನೂ ಹೆಚ್ಚಿನ ಉದ್ಯೋಗ ಪಡೆಯುವಂತಾಗಬೇಕೆಂದರು. ಎಲ.ಯು.ಬಿ ಮುಖ್ಯಸ್ಥರಾದ ನಳಿನಿ ವೇಮುಲ್ಕರ, ಕಾರ್ಯದರ್ಶಿ ಲತಾ ಹೂಲಿ ಸತ್ಕರಿಸಲಾಯಿತು. ಪಾಲಿಕೆ ಸದಸ್ಯೆ ವಾಣಿ ಜೋಶಿ, ಡಾ.ಅಚ್ರೇಕರ ಇತರರು ಇದ್ದರು.

### ದೀಪಾವಳಿ; ಪಟಾಕಿ ಬಳಕೆಗೆ ನಿಷೇಧ

ಯರಗಟ್ಟಿ: ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಮಾರಾಟ ಮತ್ತು ಪಟಾಕಿಗಳ ಸಿಡಿತದಿಂದ ಉಂಟಾಗುವ ಶಬ್ದ ಹಾಗೂ ವಾಯು ಮಾಲಿನ್ಯ ನಿಯಂತ್ರಣದಲ್ಲಿಡಲು, ಸಾರ್ವಜನಿಕ ಆಸ್ತಿ ಹಾಗೂ, ಆರೋಗ್ಯ ಸಂರಕ್ಷಣೆಯ ಹಿತದೃಷ್ಟಿಯಿಂದ ಹಸಿರು ಪಟಾಕಿಗಳನ್ನು ಬಿಟ್ಟು, ಉಳಿದ ಯಾವುದೇ ಇತರ ಪಟಾಕಿಗಳ ಮಾರಾಟ ಹಾಗೂ ಬಳಕೆಯನ್ನು ನಿಷೇಧಿಸಲಾಗಿದೆ.ಆಸ್ಪತ್ರೆ, ಶಾಲೆ, ಪ್ರಾರ್ಥನಾ ಮಂದಿರ ಇತ್ಯಾದಿಗಳ ಸುತ್ತಮುತ್ತ ಯವುದೇ ರೀತಿಯ ಶಬ್ದ ಉಂಟುಮಾಡುವ ಪಟಾಕಿ ಹಾಗೂ ಸಿಡಿಮದ್ದುಗಳ ಬಳಕೆಯನ್ನು ನಿಷೇಧಿಸಿದ್ದು, ಹಸಿರು ಪಟಾಕಿಯ ಚಿಹ್ನೆ ಇರುವ ಹಾಗೂ ಕ್ಯೂಆರ್‌ಕೋಡ್ ಇರುವಂತ ಪಟಾಕಿಗಳನ್ನು ಬಳಸಲು ಅವಕಾಶವಿರುತ್ತದೆ. ಚಿಹ್ನೆ ಇಲ್ಲದ ಯಾವುದೇ ಪಟಾಕಿ ಹಸಿರು ಪಟಾಕಿ ಅನುಮತಿಸುವುದಿಲ್ಲ ಅಂತವುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ರಾತ್ರಿ 8 ಗಂಟೆಯಿಂದ ರಾತ್ರಿ 10 ಗಂಟೆ ವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಿದ್ದು, ಉಳಿದ ಸಮಯದಲ್ಲಿ ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಕ್ರಮಗಳನ್ನು ಉಲ್ಲಂಘಿಸಿರುವುದು ಕಂಡುಬಂದಲ್ಲಿ ಅದಕ್ಕೆ ಕಾರಣ-ರಾದವರ ಮೇಲೆ ಕಾಯ್ದೆ ಅನುಸಾರ ಕಟ್ಟು ನಿಟ್ಟಿನ ಕ್ರಮಗಳನ್ನು ಜಾ-ರಿಗೊಳಿಸಲಾಗುವುದು, ಸಾರ್ವಜನಿಕರು ಇದಕ್ಕೆ ಸಹಕರಿಸಲು ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಡಿ. ಎನ್. ತಹಶೀಲ್ದಾರ ತಿಳಿಸಿದ್ದಾರೆ.

### ಎಲೆಗಳಲಿ ಕವಿಗಳು

ಮಹಾಲಿಂಗಪುರ: ಸಮೀಪದ ರನ್ನಬೆಳಗಲಿಯ ಸಿದ್ದಾರೂಢ ಸರಕಾರಿ ಪ್ರೌಢಶಾಲೆಯ 10 ನೇ ತರಗತಿ ವಿದ್ಯಾರ್ಥಿಗಳಾದ ಆಕಾಶ ಕಂಬಳಿ ಮತ್ತು ಮಲಕಾರಿ ಹಳ್ಳೂರ ಎಲೆಗಳ ಮೇಲೆ ಜ್ಞಾನಪೀಠ ಪುರಸ್ಕೃತ ಕನ್ನಡ ಕವಿಗಳಾದ ಕುವೆಂಪು ಮತ್ತು ಕಾರ್ನಾಡ ಭಾವಚಿತ್ರ ಬಿಡಿಸುವ ಮೂಲಕ ರಾಜ್ಯೋತ್ಸವಕ್ಕೆ ಶುಭಾಶಯ ತಿಳಿಸಿದ್ದಾರೆ. ಇವರಿಗೆ ಚಿತ್ರಕಲಾ ಶಿಕ್ಷಕ ಬಾಲಕೃಷ್ಣ ಚೋಪಡೆ ಮಾರ್ಗದರ್ಶನ ಮಾಡಿದ್ದಾರೆ.

# ಕಲಾವಿದನ ರಕ್ತದಲ್ಲಿ ಅರಳಿದ ಅಪ್ಪು

## ಮುಧೋಳ ಕಲಾವಿದ ಚಿತ್ರಿಸಿದ ಫೋಟೋ ಡಾ.ರಾಜ್ ಸಮಾಧಿ ಬಳಿ ಪ್ರದರ್ಶನ

**ಶಿವಲಿಂಗ ಸಿದ್ನಾಳ ಮಹಾಲಿಂಗಪುರ**

ರನ್ನನೂರಿನ ಉದಯೋನ್ಮುಖ ಚಿತ್ರಕಲಾವಿದ ತನ್ನ ರಕ್ತದಲ್ಲಿ ಚಿತ್ರಿಸಿದ ಪುನೀತ್ ಭಾವಚಿತ್ರ ರಾಜಧಾನಿ ಬೆಂಗಳೂರಿನಲ್ಲಿ ಡಾ.ರಾಜಕುಮಾರ ಸಮಾಧಿ ಬಳಿ ಪ್ರದರ್ಶನಗೊಂಡಿದ್ದು ಹೆಮ್ಮೆಯ ವಿಷಯವಾಗಿದೆ.

ರನ್ನನ ಹುಟ್ಟೂರು ಎಂದೇ ಹೆಸರಾದ ಮುಧೋಳ ತಾಲೂಕಿನ ರನ್ನಬೆಳಗಲಿ ಪಟ್ಟಣದ ಕಲಾವಿದ ಶಿವಾನಂದ ನೀಲನ್ನವರ ಚಿತ್ರಕಲೆಯನ್ನೇ ತನ್ನ ವೃತ್ತಿ ಮತ್ತು ಪ್ರವೃತ್ತಿಯಾಗಿಸಿಕೊಂಡು ಕುಂಚದಿಂದಲೇ ಕೊಂಚ ಹೆಸರು ಗಳಿಸಿದ್ದಾರೆ. ಆರಂಭದಲ್ಲಿ ಶಾಲೆಗಳಲ್ಲಿ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಏರ್ಪಡಿಸಿ ಗುರುತಿಸಿಕೊಂಡವರು.

ಕ್ರಮೇಣ ಕೆಎಲ್‌ಇ ಪ್ರೌಢಶಾಲೆ ಮತ್ತು ಜೇಸಿ ಪ್ರೌಢಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕನಾಗಿ ಮಕ್ಕಳಲ್ಲಿ ಚಿತ್ರಕಲೆಯ ಆಸಕ್ತಿ ಅರಳಿಸುವ ಮೂಲಕ ಸಾವಿರಾರು ಚಿತ್ರಕಲೆ ರಚಿಸಿ ಸೈ ಎನಿಸಿಕೊಂಡವರು. ಚಿತ್ರಕಲಾ ಗುರು ಬಾಳಕೃಷ್ಣ ಚೋಪಡೆ ಅವರೊಂದಿಗೆ ಬಾದಾಮಿ ಬನಶಂಕರಿ ದೇವಸ್ಥಾನಕ್ಕೆ ಬಣ್ಣ ಬಳಿಯುವ ಮತ್ತು ಗೋಡೆಗೆ ಚಿತ್ರ ಬಿಡಿಸುವ ಸೇವೆಯನ್ನೂ ಮಾಡಿದ್ದಾರೆ.

ಅನ್ನದಾತನ ತೇರು ಎನಿಸಿದ ಟ್ರ್ಯಾಕ್ಟರ್ ಗೆ ಅಲಂಕಾರಿಕ ಚಿತ್ರ ಬಿಡಿಸುವ, ಹೆಸರು ಬರೆಯುವ, ಮನೆ, ಅಂಗಡಿಗಳ ನಾಮಫಲಕ ರಚಿಸುವ,



ಗೋಡೆಗಳ ಮೇಲ್ಮೈ ಚಿತ್ರಿಸುವ ಮೂಲಕ ಹೆಚ್ಚು ಪರಿಚಿತರಾಗಿದ್ದಾರೆ. 300ಕ್ಕೂ ಹೆಚ್ಚು ಟ್ರ್ಯಾಕ್ಟರ್‌ಗಳ ಅಲಂಕಾರಕ್ಕೆ ತಮ್ಮ ಕುಂಚದ ಸ್ಪರ್ಶ ನೀಡಿದ್ದಾರೆ. ಮಹಾಲಿಂಗಪುರದ ರಿತಿ ಲೈಫ್‌ಕೇರ್ ಆಸ್ಪತ್ರೆಯ ಅಪೇಕ್ಷೆ ಇಲ್ಲೀತನಕ 120ಕ್ಕೂ ಅಧಿಕ ನವಜಾತ ಶಿಶುಗಳ ಭಾವಚಿತ್ರ ಬಿಡಿಸಿ ಕೊಟ್ಟಿದ್ದಾರೆ. ಜಮಖಮಡಿಯ ಬಿಎಲ್‌ಡಿಇ ಸಂಸ್ಥೆಯಲ್ಲಿ ತಂಡದೊಂದಿಗೆ ಒಂದು ವಾರ ಪಠ್ಯಾಧಾರಿತ ಚಿತ್ರಕಲೆ ಚಿತ್ರಿಸುವ ಮೂಲಕ ಗಮನ ಸೆಳೆದಿದ್ದಾರೆ.

ಇತ್ತೀಚೆಗೆ ಜನರ ಅಪೇಕ್ಷೆ ಮೇರೆಗೆ ಅವರ ರಕ್ತದಲ್ಲಿ ಅವರದೇ ಭಾವಚಿತ್ರ ಇಲ್ಲವೇ ಅವರ ಆಪ್ತರ, ಹೆತ್ತವರ ಭಾವಚಿತ್ರ ಬಿಡಿಸುವ ಮೂಲಕ ಈ ಭಾಗದಲ್ಲಿ ತಮ್ಮ ವೃತ್ತಿಯಲ್ಲಿ ಹೊಸ ಆವೃತ್ತಿಯನ್ನೇ ಆರಂಭಿಸಿದ್ದಾರೆ. ಇಲ್ಲೀ ತನಕ 70ಕ್ಕೂ ಹೆಚ್ಚು ಜನರ ರಕ್ತದಲ್ಲಿ ಭಾವಚಿತ್ರ ಚಿತ್ರಿಸಿ ಕೊಟ್ಟಿದ್ದಾರೆ. ಇತ್ತೀಚೆಗೆ ಭಾರತ ಕ್ರಿಕೇಟ್‌ನಲ್ಲಿ ವಿಶ್ವಕಪ್ ಗೆದ್ದ ಸಂಭ್ರಮದಲ್ಲಿ ಈ ಕಲಾವಿದ ಸ್ವತಃ ತನ್ನ ರಕ್ತದಲ್ಲೇ ವಿರಾಟ್ ಕೋಹ್ಲಿ ಭಾವಚಿತ್ರ ಬಿಡಿಸುವ ಮೂಲಕ ರಾಜ್ಯದ ಗಮನ ಸೆಳೆದಿದ್ದರು. ಇದೀಗ ಮುಂದುವರೆದು ಪುನೀತ್ ರಾಜಕುಮಾರ್ ಪುಣ್ಯಸ್ಮರಣೆ ನಿಮಿತ್ತ ತನ್ನ ರಕ್ತದಲ್ಲೇ ಪುನೀತ್ ಭಾವಚಿತ್ರ ಬಿಡಿಸುವ ಮೂಲಕ ಅಭಿಮಾನ ಮೆರೆದಿದ್ದಾರೆ.

ವಿಶೇಷವೆಂದರೆ ಈ ಭಾವಚಿತ್ರವನ್ನು ತುಮಕೂ-ರಿನ ಜಯಪ್ರಕಾಶ ಎಂಬುವರು 8 ಸಾವಿರ ರೂ.ಗೆ ಖರೀದಿಸಿ ಬೆಂಗಳೂರಿನ ಡಾ.ರಾಜಕುಮಾರ ಸಮಾಧಿ ಬಳಿ ಏರ್ಪಡಿಸಿದ ವಿಶೇಷ ಚಿತ್ರಕಲಾ ಪ್ರದರ್ಶನದ ಮ್ಯೂಜಿಯಂನಲ್ಲಿ ಪ್ರದರ್ಶನಕ್ಕಿಟ್ಟಿದ್ದಾರೆ. ಅಂತೂ ಗ್ರಾಮೀಣ ಭಾಗದ ರನ್ನನೂರಿನ ಕಲಾವಿದನ ಕೈಚಳಕದ ಕಲಾಕೃತಿ ರಾಜಧಾನಿಯ ಡಾ.ರಾಜ್ ಸಮಾಧಿ ಬಳಿ ಪ್ರದರ್ಶನಗೊಂಡಿದ್ದು ಹೆಮ್ಮೆಯ ಸಂಗತಿಯಲ್ಲವೇ? ಎಂದು ಈ ಭಾಗದ ಜನ ಹೆಮ್ಮೆ ಪಡುತ್ತಿದ್ದಾರೆ.

### ಕ್ರಿಬ್ಕೊ ಆರ್‌ಜೆಬಿ ನಿರ್ದೇಶಕ ಮುತ್ತಣ್ಣ ಹತ್ತರವಾಟಗೆ ಸನ್ಮಾನ



**ಘಟಪ್ರಭಾ:** ಇಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿ. ಮಲ್ಲಾಪೂರ ಪಿ ಜಿ ಇದರ ಅಧ್ಯಕ್ಷರಾದ ಮುತ್ತಣ್ಣ ಶಂ. ಹತ್ತರವಾಟ ಇವರು ಬೆಂಗಳೂರಿನ ಪ್ರತಿಷ್ಠಿತ ಕ್ರಿಬ್ಕೊ ಆರ್ ಜೆ ಬಿ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾದ ಪ್ರಯುಕ್ತ ದಿ ಮಲ್ಲಾಪೂರ ಅರ್ಬನ್ ಬ್ಯಾಂಕ ವತಿಯಿಂದ ಸತ್ಕರಿಸಲಾಯಿತು. ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ರಮೇಶ ತುಕ್ಕನಟ್ಟಿ, ವ್ಯವಸ್ಥಾಪಕರಾದ ರಮೇಶ ಮುರಗೋಡ, ನಿರ್ದೇಶಕರು, ಸಿಬ್ಬಂದಿ ಉಪಸ್ಥಿತರಿದ್ದರು.



**ಬನಹಟ್ಟಿಯ ಬ್ರಹ್ಮದೇವರ ದೇವಸ್ಥಾನದಲ್ಲಿ ಬ್ರಹ್ಮನ ಹಬ್ಬದ ನಿಮಿತ್ತ ನೂರಾರು ಮಹಿಳೆಯರು ಮಂಗಳಾರತಿ, ಅಂಬಲಿ ಪ್ರಸಾದ ವಿಶೇಷ ಪೂಜೆ ನೆರವೇರಿಸಿದರು.**

# ಸೇವೆಯಲ್ಲಿ ಸಾರ್ಥಕತೆ ಕಾಣುವುದೇ ಸಾರ್ಥಕತೆ

**ಬೈಲಹೊಂಗಲ:** ಜನರ ಕುಂದುಕೊರತೆ ಆಲಿಸಿ ಅವರ ಬೇಕು ಬೇಡಗಳನ್ನು ಈಡೇರಿಸುವುದಕ್ಕಾಗಿಯೇ ಜನ ಪ್ರತಿನಿಧಿಗಳಿರುವುದು. ಜನರ ಸೇವೆ ಮಾಡುವುದರಲ್ಲಿ ಸಾರ್ಥ ಕತೆ ಕಾಣುವವನೆ ನಿಜವಾದ ಜನ ನಾಯಕ ಎಂದು ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಹೇಳಿದರು.



ತಾಲೂಕಿನ ದೊಡವಾಡ ಗ್ರಾಮದ ಶಾಂತಿನಗರದಲ್ಲಿ 2 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾಗಿರುವ 6 ಹಾಸಿಗೆಗಳ ಸುಸಜ್ಜಿತ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ ಉದ್ಘಾಟನೆ ಹಾಗೂ ಗ್ರಾಮದ ವಿವಿಧೆಡೆಯ ಅಂಗನವಾಡಿ ಕೇಂದ್ರಗಳ ನೂತನ ಕಟ್ಟಡ ಕಾಮಗಾರಿಗೆ ಬುಧವಾರ ಭೂಮಿ ಪೂಜೆ ನೆರವೇರಿಸಿ ಬಳಿಕ ನಡೆದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜನರ ಮತ್ತು ಸಮಾಜದ ಅನುಕೂಲಕ್ಕಾಗಿ ಸರಕಾರ ಸಾಕಷ್ಟು ಹಣ ಖರ್ಚು ಮಾಡಿ ಆಸ್ಪತ್ರೆ ಶಾಲೆ ಕಾಲೇಜು ಸಮುದಾಯ ಭವನಗಳನ್ನು ನಿರ್ಮಿಸಿಕೊಡುತ್ತದೆ ಅವುಗಳನ್ನು ಸ್ವಂತ ಆಸ್ತಿಯಂತೆ ಸಂರಕ್ಷಿಸಿ ಉತ್ತಮ ಸ್ಥಿತಿಯಲ್ಲಿ ಕಾಪಾಡಿಕೊಂಡು ಹೋಗುವುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ಹೇಳಿದರು.

ತಾಲೂಕು ಆರೋಗ್ಯಾಧಿಕಾರಿ ಡಾ.ಎಸ್.ಎಸ್. ಸಿದ್ದನ್ನವರ, ಸಿಡಿಪಿಓ ಅರುಣಕುಮಾರ ಮಾತನಾಡಿ, ಜನರ ಕಲ್ಯಾಣಕ್ಕಾಗಿ ಸರಕಾರ ಜಾರಿಗೊಳಿಸುವ ಎಲ್ಲ ಯೋಜನೆಗಳನ್ನು ಸಾರ್ವಜನಿಕರು ಸದುಯೋಗಪಡಿಸಿಕೊಳ'ಬೇಕೆಂದು ಹೇಳಿದರು.

ಹಿರೇಮಠದ ಜಡಿಸಿದ್ದೇಶ್ವರ ಸ್ವಾಮಿಜಿ ಸಾನಿಧ್ಯ ವಹಿಸಿದ್ದರು. ಡಾ. ಸಂತೋಷಬಾಬು ಗಡಾದ, ಡಾ.ಶೆಫಾಲಿ ಚೌಹಾನ, ಡಾ.ಭಾಗ್ಯಶ್ರೀ ಗದಗ, ಪಿಡಿಓ ಎಚ್.ವಿಶ್ವನಾಥ, ಪ್ರಮುಖರಾದ ಸಂಕಪ್ಪ ಕೊರಕೊಪ್ಪ, ಈರಪ್ಪ ಹತ್ತಿಕಟಗಿ, ಬಾಳೇಶ ಅಲಸಂಧಿ, ಬಾಬು ಮುರಗೋಡ, ಶಿವಶಂಕರ ಅರಳಿಮರದ, ಸಿದ್ದಪ್ಪ ಕರಿಗಾರ, ಬಸವರಾಜ ಅಂದಾನಶೆಟ್ಟಿ, ರಾಘವರೆಡ್ಡಿ, ಶಾಸಕರ ಬೆಂಬಲಿಗರು, ಗ್ರಾಮಸ್ಥರು, ಆರತೋಗ್ಯ ಇಲಾಖೆ ಸಿಬ್ಬಂದಿ ಮತ್ತು ಅಂಗನವಾಡಿ ಆಶಾ ಕಾರ್ಯಕರ್ತೆಯರು ಭಾಗವ'ಹಿಸಿದ್ದರು.

# ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿಸಿ

**ರಬಕವಿ-ಬನಹಟ್ಟಿ:** ಶಿಕ್ಷಕರು ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿಸುವ ಕೆಲಸ ಮಾಡಬೇಕೆಂದು ಶಿವಲಿಂಗ ಗೊಂಬಿಗುಡ್ಡ ಹೇಳಿದರು.

ನಗರದ ಈಶ್ವರಲಿಂಗ ಮೈದಾ ನದಲ್ಲಿ ಬಿಆರ್‌ಡಿಎಸ್ ಸಂಸ್ಥೆಯಿಂದ ನಡೆದ ಮಕ್ಕಳ ಪ್ರತಿಭಾ ಕಾರ್ಯ ಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಮಕ್ಕಳಲ್ಲಿ ಶಾಲಾ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳ ಅರಿವು ಮುಖ್ಯವಾಗಿದೆ. ಜಾಗತಿಕಮಟ್ಟದಲ್ಲಿ ವೇಗದ ವಿಜ್ಞಾನ ಮಕ್ಕಳಲ್ಲಿ ಮೂಡಬೇಕಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ಶಿಕ್ಷಣದ ಪೈಪೋಟಿ ಅನಿವಾರ್ಯವಾಗಿದ್ದು, ಇದಕ್ಕೆ ಪೂರಕವಾಗಿ ಶಿಕ್ಷಕರು ಸನ್ನದ್ಧರಾದಾಗ ಮಾತ್ರ ಮಕ್ಕಳ ಉಜ್ವಲ ಭವಿಷ್ಯಕ್ಕೆ ಬುನಾದಿ ಯಾಗಲು ಸಾಧ್ಯವೆಂದರು.ಶ್ರೀಶೈಲ ಉಳ್ಳಾಗಡ್ಡಿ ಮಾತನಾಡಿ, ಗ್ರಾಮೀಣದ ವಿದ್ಯಾರ್ಥಿಗಳೇ ಹೆಚ್ಚಿನ ಪ್ರತಿಭೆ ತೋರಿಸುವಲ್ಲಿ ಕಾರಣವಾಗುತ್ತಿರುವದು ಹೆಮ್ಮೆ. ಬಿಆರ್‌ಡಿಎಸ್ ಸಂಸ್ಥೆಯು ಬಡಮಕ್ಕಳ ಅನುಕೂಲವಾಗಿ ಉಚಿತ ವ್ಯಾಸಾಂಗ ಹಾಗು ಅಗ್ಗದ ದರದಲ್ಲಿ ತರಬೇತಿ ನೀಡುತ್ತಿರುವದು ಹೆಮ್ಮೆಯೆಂದರು.

ಮಹಾಂತೇಶ ಗೊಂಬಿಗುಡ್ಡ, ಶಿವು ತಳವಾರ, ಪ್ರಶಾಂತ ನಾಯಕ, ರಾಕೇಶ ಕಾಂಬಳೆ, ಪುಟ್ಟುರಾಜ ಸೇರಿದಂತೆ ಅನೇಕರಿದ್ದರು.




# ತಾಳಿಕೋಟೆ ವಿ.ವಿ.ಸಂಘ ಸಂಸ್ಕಾರ ಕಲಿಸುತ್ತದೆ: ಗುಂಡಕನಾಳ ಶ್ರೀ

## ಖಾಸ್ಗತೇಶ್ವರ ಬಿ.ಇ.ಡಿ.ಶಿಕ್ಷಣ ಮಹಾವಿದ್ಯಾಲಯಲದಲಿ ದೀಪದಾನ ಸಮಾರಂಭ ಆಯೋಜನೆ

**ತಾಳಿಕೋಟೆ:** ರಾಜ್ಯದಲ್ಲಿಯ ಪ್ರಮುಖ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ತಾಳಿಕೋಟೆಯ ವೀರಶೈವ ವಿದ್ಯಾವರ್ಧಕ ಸಂಸ್ಥೆಯ ಸಂಭದಿತ ಶಿಕ್ಷಣ ನೀಡುತ್ತಿರುವ ವಿದ್ಯಾಲಯಗಳಲ್ಲಿ ಶಿಕ್ಷಣಕ್ಕೆ ಅಷ್ಟೆ ಅಲ್ಲ ವಿದ್ಯಾರ್ಥಿಗಳಿಗೆ ಈ ಹಿಂದಿನಿಂದ ಸಾಗಿಬಂದ ಭಾರತೀಯ ಒಳ್ಳೇಯ ಸಂಸ್ಕಾರವನ್ನು ಸಹ ಕಲಿಸುತ್ತಾ ಸಾಗಿ ಬಂದಿದೆ ಎಂದು ಗುಂಡಕನಾಳ ಬೃಹನ್‌ಮಠದ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು.

ಬುಧುವಾರ ಸಂಸ್ಥೆಯ ಸಂಬಂಧಿತ ಶ್ರೀ ಖಾಸ್ಗತೇಶ್ವರ ಬಿ.ಇ.ಡಿ.ಶಿಕ್ಷಣ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾದ ದೀಪದಾನ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ. ಅವರು ಈ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಒಳ್ಳೆಯ ಹಾಗೂ ಆದ-'ರ್ಶಮಯವಾದಂತಹ ಪ್ರಶಿಕ್ಷಣಾರ್ತಿಗಳನ್ನು ಜ್ಞಾನ ಮೂಡಿಸುವುದರೊಂದಿಗೆ ಅವರಿಗೆ ಶಿಕ್ಷಕ ವೃತ್ತಿಯಲ್ಲಿ ಮುಂದುವರೆದು ಶಿಕ್ಷಣ ನೀಡುವಂತಹ ಕಾರ್ಯಕ್ಕೆ ಅನುವು ಮಾಡಿಕೊಟ್ಟಿರುವುದು ಈ ವಿದ್ಯಾರ್ಥಿಗಳ ಅನಿಸಿಕೆಯಲ್ಲಿಯೇ ಗೊತ್ತಾಗಿದೆ ಎಂದರು. ಇನ್ನು ಮುಂದೆ ಪ್ರಶಿಕ್ಷಣಾರ್ತಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಾಲ್ಗೊಳ್ಳಬಹುದಾಗಿದೆ ಎಂದ ಶ್ರೀಗಳೂ ಶಿಕ್ಷಕ




ವೃತ್ತಿ ಎಂಬುದು ಪವಿತ್ರವಾಗಿದ್ದು ಒಬ್ಬ ಶಿಕ್ಷಕ ಕಲಿಸಿದರೇ ಸಾವಿರಾರೂ ವಿದ್ಯಾರ್ಥಿಗಳೂ ಜ್ಞಾನ ಮೂಡಿಸಿಕೊಳ್ಳುತ್ತಾರೆ ಇಂದು ದೀಪ ಬೆಳಗಿಸುವ ಕಾರ್ಯವನ್ನು ಕೈಗೊಂಡಿರುವುದು ಅಜ್ಞಾನದಂತಿರುವ ಕತ್ತಲೆಯನ್ನು ಒಡಿಸಿದಂತಾಗಿದೆ ಎಂದರು.ಶಿಕ್ಷಕರ ಮತ್ತು ಇಲ್ಲಿಯ ವಿದ್ಯಾರ್ಥಿಗಳ ಅವಿನಾಭಾವ ಸಂಭಂಧವೆಂಬುದು ಅತೀವ ಪ್ರೀತಿ ಪ್ರೇಮದಂತೆ ಎದ್ದು ಕಾಣುತ್ತಲಿದೆ ದುಡ್ಡಿಗಾಗಿ ಆಸೆ ಪಡದೆ ಬಡ ವಿದ್ಯಾರ್ಥಿಗಳಿಗೆ ಆಶ್ರಯ ಮಾಡಿಕೊಟ್ಟಂತಹ ವಿ.ವಿ.ಸಂಘವೆಂಬ ವಿದ್ಯಾಸಂಸ್ಥೆ ಶಿಸ್ತು ಬದ್ಧತೆ ಅಲ್ಲದೇ ತತ್ವ ಸಿದ್ದಾಂತದಂತೆ ಮುಂದುವರೆದಿರುವುದು ವಿದ್ಯಾರ್ಥಿಗಳಿಗೆ ಸಾಧನೆಗೈಯಲು ಅನೂಕಲವಾಗಿದೆ ಎಂದರು.

ಇನ್ನೋರ್ವ ಬೆನಕನ ಹಳ್ಳಿಯ ಸಹಶಿಕ್ಷಕರು ಹಾಗೂ ಸಾಹಿತಿಗಳಾದ ಸಾಹೇಬಗೌಡ ಬಿರಾದಾರ ಅವರು ಮುಖ್ಯ ಅತಿಥಿ ಸ್ಥಾನ ಅಲಂಕರಿಸಿ ಮಾತನಾಡಿ ಭವ್ಯಭಾರತವೆಂಬುದು ಇಂದಿನ ದಿನಮಾನದಲ್ಲಿ ಒಡೆದು ಹೊಗುತ್ತಲಿದೆ ಎಂಬಂತೆ ಕಾಣುತ್ತಲಿದೆ ಅದರ ರಕ್ಷಣೆ ಮಾಡುವಂತಹ ಹೊಣೆ ಶಿಕ್ಷಕರಾದ ನಮ್ಮ ಹಾಗೂ ವಿದ್ಯಾರ್ಥಿಗಳ ಕೈಯಲ್ಲಿದೆ ಎಂದರು. ಶಾಲೆಯ ಗೋಡೆಗಳ ಮಧ್ಯ ಜಗತ್ತನ್ನು ಕಟ್ಟುವಂತಹದ್ದಾಗುತ್ತದೆ ಎಂಬುದರ ಕುರಿತು ತಿಳಿಹೇಳಿದ ಶಿಕ್ಷಕ ಬಿರಾದಾರ ಅವರು ಶಿಕ್ಷಕ ಬಿತ್ತಿದ ಬೀಜವೇ ಶಿಕ್ಷಕರಾಗಲೂ ಸಾಧ್ಯವೆಂದ ಅವರು ತಮ್ಮ ತಂದೆ ಶಿಕ್ಷಕ ವೃತ್ತಿಯಲ್ಲಿ ಮುಂದುವರೆದು ತಮ್ಮನ್ನು ಸಹ ಶಿಕ್ಷಕನಾಗಲೂ ಅನುವು ಮಾಡಿಕೊಟ್ಟಿದಲ್ಲದೆ ಅವರು ಕೆಲವು ಗ್ರಂಥ-'ಗಳನ್ನು ರಚಿಸಿದ್ದರ ಕುರಿತು ಸಹ ವಿವರಿಸಿದ ಅವರು ಗುರುವಿನ ಸ್ಥಾನಹೊಂದುವವರು ಜ್ಞಾನವೆಂಬುದನ್ನು ಹೊತ್ತುಕೊಂಡು ಹೋಗಬೇಕೆಂದು ಅಲೇಕ್ಸಾಂಡರ ಅವರು ಹೇಳಿದಂತೆ ಗುರುವಿನ ಮಹಿಮೆ ದೊಡ್ಡದಂತೆ ಕತೆಯನ್ನು ಹೇಳಿದ ಶಿಕ್ಷಕ ಬಿರಾದಾರ ಅವರು ಜಗತ್ತಿನಲ್ಲಿಯೇ ಹೆಚ್ಚು ಗೌರವ ಪಡೆದವರು ಶಿಕ್ಷಕರಾಗಿದ್ದಾರೆಂದು ಅನೇಕ ಉದಾಹರಣೆಗಳನ್ನು ನೀಡಿ ಎಂತಹ ದೊಡ್ಡ ಸ್ಥಾನದಲ್ಲಿದ್ದವರು ಸಹ ಗುರು ಎನ್ನುವಂತಹ ಶಕ್ತಿಗೆ ತಲೆಬಾಗಿಸಿದರೆ ಅದರ ಒಲುಮೆ ದೊರೆಯಲಿದೆ ಎಂದು ತಮ್ಮ ಕಲಿಕೆಯಲ್ಲಿ ಶಿಕ್ಷಣಕ್ಕಾಗಿ ದಾಪುಗಾಲು ಹಾಕಿದಾಗ ಜರುಗಿದಂತಹ ಅನೇಕ ಘಟನೆಗಳ ಹಾಗೂ ಪ್ರಕರಣಗಳ ಕು-ರಿತು ನಗೆ ಚಟಾಕೆಗಳನ್ನು ಹಾರಿಸುವ ಮೂಲಕ ಪ್ರಶಿಕ್ಷಣಾರ್ಥಿಗಳಿಗೆ ತಿಳುವಳಿಕೆ ನೀಡಿದರು.

ಇನ್ನೋರ್ವ ವಿ.ವಿ.ಸಂಘದ ನೀರ್ದೆಶಕರಾದ ಸಿ.ಆರ.ಕತ್ತಿ ಅವರು ಮಾತನಾಡಿ ದೇಶ ಸಮೃದ್ಧಿ ಪಥದಲ್ಲಿ ನಡೆಯಬೇಕಾದರೇ ಆ ದೇಶದ ಶಿಕ್ಷಣದ ವ್ಯವಸ್ಥೆಯೇ ಕಾರಣವಾಗಿರುತ್ತದೆ ಶಿಕ್ಷಕರಾಗಿ ಕೇವಲ ಸಂಭಳಕ್ಕಾಗಿ ದುಡಿಯುವ ಭಾವನೆ ಬೇಡ ಅದು ಪರಿಣಾಮಬಿರಲಿದೆ ಎಂದು ಎಚ್ಚ-ರಿಸಿದ ಅವರು ಶಿಕ್ಷಕ ವೃತ್ತಿ ಎನ್ನುವಂತಹದನ್ನು ಪ್ರೀತಿಯಿಂದ ಕಾಣಬೇಕು ಅಂದರೇ ಅದು ದಾ-ರಿದೀಪವಾಗಲೂ ಸಾಧ್ಯವೆಂದು ಶ್ರೀ ಖಾಸ್ಗತರ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಣ ಪಡೆದವರೆಲ್ಲರೂಒಳ್ಳೆಯ ಮಾರ್ಗದರ್ಶಕರಾಗಿದ್ದಾರೆಂದರು.

ಪ್ರಶಿಕ್ಷಣಾರ್ಥಿಗಳಾದ ರಕ್ಷಿತಾ ಸಜ್ಜನ ಮತ್ತು ಉಮೇಶ ಮುರಗೊಡ ಅವರು ಎರಡುವರ್ಷದ ಅವಧಿಯಲ್ಲಿಯ ಪಡೆದ ಶಿಕ್ಷಣ ಕುರಿತು ಅನುಭವ ಹಂಚಿಕೊಂಡರು.ಪ್ರಶಿಕ್ಷಣಾರ್ಥಿಗಳಿಂದ ಆಡಳಿತ ಮಂಡಳಿಯವರಿಗೂ ಹಾಗೂ ಉಪನ್ಯಾಸಕರುಗಳಿಗೆ ಪ್ರಾಚಾರ್ಯರಿಗೆ ಸನ್ಮಾನಿಸಿ ಗೌರವಿಸಲಾಯಿತು.ವಿವಿಧ ಕ್ರೀಡೆಯಲ್ಲಿ ಭಾಗವಹಿಸಿ ಪ್ರಥಮ,ದ್ವಿತೀಯ,ತೃತೀಯ ಸ್ಥಾನ ಪಡೆದ ಪುರುಷ ಹಾಗೂ ಮಹಿಳಾ ವೀಭಾಗದವರಿಗೆ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ತತ್ವ ಪದಗಳ ಗ್ರಂಥವನ್ನು ರಚಿಸಿದ ಶಿಕ್ಷಕ ಸಾಹೇಬಗೌಡ ಬಿರಾದಾರ ಅವರು ಪ್ರಾಚಾರ್ಯರಾದ ಡಾ.ಆರ. ಎಮ್.ಬಂಟನೂರವರಿಗೆ ನೀಡಿ ಗೌರವಿಸಿದರರು.

ಅಧ್ಯಕ್ಷತೆ ವಹಿಸಿದ ಡಾ.ಆರ.ಎಮ್.ಬಂಟನೂರ ಪ್ರಶಿಕ್ಷಣಾರ್ಥಿಗಳಿಗೆ ದೀಪದಾನ ಹಾಗೂ ಪ್ರತಿಜ್ಞಾವಿಧಿ ಬೋಧಿಸಿದರಲ್ಲದೇ ಎರಡು ವರ್ಷ ಅವಧಿ ಮುಗಿಸಿ ಮುಂದಿನ ಶಿಕ್ಷಣಕ್ಕೆ ತೆರಳುತ್ತಿರುವ ಪ್ರಶಿಕ್ಷಣಾರ್ಥಿಗಳಿಗೆ ಶುಭಹಾರೈಸಿದರು.

ವಿ.ವಿ.ಸಂಘದ ಉಪಾಧ್ಯಕ್ಷ ಬಿ.ಎನ್.ಹಿಪ್ಪರಗಿ, ಸಹಕಾರ್ಯದರ್ಶಿ ಕಾಶಿನಾಥ ಮುರಾಳ ನೀರ್ದೆಶಕರಾದ ಎಮ್.ಆರ್.ಕತ್ತಿ, ಎಚ್. ಎಸ್.ಗೂಗಲ್ಲ, ಬಿ.ಎಮ್.ಗುರೆಡ್ಡಿ, ಅಶೋಕ ಜಾಲವಾದಿ, ಸದಸ್ಯರಾದ ಎಸ್.ಎಮ್.ಇಬ್ರಾಹಿಂ ಪೂರ,ಕಾರ್ಯದರ್ಶಿ ಉದಯಕುಮಾರ ಕಟ್ಟಿಮನಿ ಹಾಗೂ ಉಪನ್ಯಾಸಕರಾದ ಯು.ಎನ್.ಮಂಗೊಳಂಡ, ಕು.ವಿಜಯಲಕ್ಷ್ಮಿ,ಮೌನೇಶ ಕೆಲ್ಲೂರ, ಎ.ಎ.ಗಂಗನಗೌಡರ್, ವಾಯ್.ಎಚ್.ಅಂಗಡಗೇರಿ, ಶ್ರೀಮತಿ ಎ.ಎಸ್.ಹಿರೇಮಠ ಮೊದಲಾದವರು ಉಪಸ್ಥಿತರಿದ್ದರಎಸ್.ಪಿ.ಬಡಿಗೇರ ಸ್ವಾಗತಿಸಿದರು. ಎಸ್.ಬಿ.ಕುಲಕರ್ಣಿ ವಂದಿಸಿದರು.

### ಅದ್ದೂರಿ ಕನ್ನಡಾಂಬೆಯ ಭಾವಚಿತ್ರದ ಮೆರವಣಿಗೆ

# ಸ್ಥಬ್ದ ಚಿತ್ರ ಪ್ರದರ್ಶನದಲ್ಲಿ ಎನ್‌ಡಬ್ಲುಕೆಆರ್‌ಟಿಸಿ ಪ್ರಥಮ



**ಬಾಗಲಕೋಟೆ:** 69ನೇ ಕನ್ನಡ ರಾಜ್ಯೋತ್ಸವ ಪ್ರಯುಕ್ತ ಹಮ್ಮಿಕೊಂಡ ಸ್ಥಬ್ದಚಿತ್ರಗಳ ಪ್ರದರ್ಶನದಲ್ಲಿ ಬಾಗಲಕೋಟೆಯ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಾಗಲಕೋಟೆಯ ಘಟಕ ಪ್ರಥಮ ಸ್ಥಾನ ಪಡೆಯಿತು.

ಜಿಲ್ಲಾಡಳಿತದ ವತಿಯಿಂದ ಶುಕ್ರವಾರ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಸ್ಥಬ್ದ ಚಿತ್ರಗಳ ಪ್ರದರ್ಶನದಲ್ಲಿ ಕೃಷ್ಣೆ ಮತ್ತು ಘಟಪ್ರಭಾ ನದಿಗಳು ಸಂಗಮಗೊಳ್ಳುವ ಚಿಕ್ಕಸಂಗಮದ ಐತಿಹಾಸಿಕ ಸಂಗಮನಾಥನ ದೇವಾಲಯ ಬಿಂಬಿಸುವ ಸ್ಥಬ್ದಚಿತ್ರ ಇದಾಗಿದ್ದು, ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರ ಆಕರ್ಷಣೀಯ ಕೇಂದ್ರವಾಗಿತ್ತು.

ಐತಿಹಾಸಿಕ ಐಹೊಳೆ, ಬನಶಂಕರಿ, ಪಟ್ಟದಕಲ್ಲು ಹಾಗೂ ಕೂಡಲಸಂಗ, ಜ್ಞಾನಪೀಠ ಪ್ರಶಸ್ತಿ ಪಡೆದ ಮಹನೀಯರ ಹಾಗೂ ಜೋಗತಿ ಮಂಜಮ್ಮ, ಸುಧಾಮೂರ್ತಿ, ಸಾಲುಮರದ ತಿಮ್ಮಕ್ಕರಂಥಹರ ಭಾವಚಿತ್ರಗಳ ಪ್ರದರ್ಶನ ಬಿಂಬಿಸುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸ್ಥಬ್ದಚಿತ್ರ ದ್ವಿತೀಯ ಸ್ಥಾನ ಪಡೆದರೆ, ರೇಂಬೆ ಸಾಗಾಣಿಕೆ ಮನೆ, ರೈತ-ರಿಗೆ ಉಚಿತವಾಗಿ ನೀಡುವ ಸೊಂಕುನಿವಾರಕ ಮತ್ತು ಸಸ್ಯ ಸಂವರ್ಧಕಗಳ ಮಾಹಿತಿಯನ್ನೊಳಗೊಂಡ ರೇಷ್ಮೆ ಇಲಾಖೆಯ ಸ್ಥಬ್ದಚಿತ್ರ ತೃತೀಯ ಸ್ಥಾನ ಪಡೆದುಕೊಂಡಿತು.

ಪ್ರಾರಂಭದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಕನ್ನಡಾಂಬೆಯ ಭಾವಚಿತ್ರದ ಅದ್ದೂರಿ ಮೆರವಣಿಗೆಗೆ ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ವಿವಿಧ ಜಾಲಪದ ಕಲಾತಂಡಗಳು, ವಿವಿಧ ಇಲಾಖೆಯವರು ತಯಾರಿಸಿದ ಸ್ತಬ್ದ ಚಿತ್ರಗಳು ಎಲ್ಲರನ್ನು ಆಕರ್ಷಿಸಿದವು. ಮೆರವಣಿಗೆಯು ನವನಗರ ಬಸ್ ನಿಲ್ದಾಣ, ಎಲ್.ಐ.ಸಿ ವೃತ್ತದ ಮೂಲಕ ಹೆಸ್ಕಾಂ ಕಚೇರಿ ರಸ್ತೆ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣಕ್ಕೆ ಅಂತ್ಯಗೊಂಡಿತು.



ರಾಜ್ಯೋತ್ಸವ ದಿನದಂದು ರಬಕವಿ-ಬನಹಟ್ಟಿ ಅವಳಿ ನಗರಾದ್ಯಂತ ಕನ್ನಡಾಭಿಮಾನಿ, ಅಟೋ ಚಾಲಕ ತನ್ನ ಕಾಯಕದಿಂದ ದೂರ ಉಳಿದ ವಿಷ್ಣು ಪುಕಾಳೆ ಕನ್ನಡಕ್ಕಾಗಿ ಕರ್ನಾಟಕದ ಭಾವಚಿತ್ರದೊಂದಿಗೆ ಕನ್ನಡಾಭಿಮಾನದ ಹಾಡುಗಳೊಂದಿಗೆ ಸಂಚಾರ ನಡೆಸಿದ್ದು ವಿಶೇಷವಾಗಿತ್ತು.

### ತೇರದಾಳದಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ

# ಕನ್ನಡ ಭಾಷೆ ಬಳಸುವುದನ್ನು ರೂಢಿಸಿಕೊಳ್ಳಿ-ಸವದಿ




**ತೇರದಾಳ**-ಕನ್ನಡ ಭಾಷೆಗೆ ತನ್ನದೆಯಾದ ಅಪಾರ ಗೌರವ ಮತ್ತು ಗಟ್ಟಿತನ ಇದೆ. ಕನ್ನಡಿಗರಾದ ನಾವು ಕನ್ನಡ ಭಾಷೆಯನ್ನು ಮೊದಲು ಬಳಸುವುದನ್ನು ರೂಢಿಸಿಕೊಳ್ಳುವ ಅಗತ್ಯ ಇದೆ ಎಂದು ಶಾಸಕ ಸಿದ್ದು ಸವದಿ ಅಭಿಮತ ವ್ಯಕ್ತಪಡಿಸಿದರು.

ಕನ್ನಡ ರಾಜ್ಯೋತ್ಸವ ನಿಮಿತ್ತ ಇಲ್ಲಿನ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ತಾಲೂಕು ಆಡಳಿತ ಹಮ್ಮಿಕೊಂಡಿದ್ದ ರಾಜ್ಯೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಾವು ಎಲ್ಲಿ ಹೋದರು ನಮ್ಮ ಭಾಷೆಯನ್ನು ಬಿಟ್ಟು ಕೊಡಬಾರದು. ನಮ್ಮ ಭಾಷೆಯನ್ನು ನಾವೇ ಬಳಸದಿದ್ದರೆ ಬೇರೆಯವರಿಗೆ ಏನು ಪ್ರಶ್ನೆ ಮಾಡಲು ಆಗುತ್ತದೆ ಎಂಬುದನ್ನು ಕನ್ನಡಿಗರಾದ ನಾವು ಪ್ರತಿಯೊಬ್ಬರು ಅರಿಯಬೇಕೆಂದು ಹೇಳಿದ ಅವರು, ನಾಡಿನ ರಕ್ಷಣೆ ನಮ್ಮೆಲ್ಲರ ಹೊಣೆ ಎಂದು ಹೇಳಿದರು. ತಹಸೀಲ್ದಾರ್ ವಿಜಯಕುಮಾರ ಕಡಕೋಳ ಧ್ವಜಾರೋಹಣ ನೇರವೇರಿಸಿದರು. ರಾಷ್ಟ್ರ ನಾಡಗೀತೆ ಸೇರಿದಂತೆ ಐದು ಗೀತೆಗಳನ್ನು ಹಾಡಲಾಯಿತು. ವಿವಿಧ ಶಾಲಾ ಮಕ್ಕಳ ವೇಷ ಭೂಷಣ ಕಾರ್ಯಕ್ರಮದ ಗಮನ ಸೆಳೆಯಿತು. ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಕಂದಾಯ ನಿರೀಕ್ಷಕ ಪಿ.ಆರ್. ಮಠಪತಿ ಭುವನೇಶ್ವರಿ ತಾಯಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಗ್ರೇಡ್ 2 ತಹಸೀಲ್ದಾರ್ ಎಸ್.ಬಿ. ಕಾಂಬಳೆ, ಉಪತಹಸೀಲ್ದಾರ್ ಶ್ರೀಕಾಂತ ಮಾಯನ್ನವರ, ಪುರಸಭೆ ಅಧ್ಯಕ್ಷೆ ಶಿಲ್ಪಾ ರೋಡಕರ, ಉಪಾಧ್ಯಕ್ಷೆ ನಸ್ರೀನ್‌ಬಾನು ನಗಾರ್ಜಿ, ಮುಖ್ಯಾಧಿಕಾರಿ ಆನಂದ ಕೆಸರಗೊಪ್ಪ, ರೈತ ಸಂಪರ್ಕ ಕೇಂದ್ರ ಅಧಿಕಾರಿ ಎಸ್.ಎಂ. ಬಿರಾದಾರ, ಉಪನೋಂದಣಾಧಿಕಾರಿ ಎಸ್.ಪಿ. ಮುತ್ತಪ್ಪಗೋಳ, ಸಿಆರ್‌ಸಿ ಅನಂತ ಮುಧೋಳ, ಆನಂದ ನಡುವಿನಕೇರಿ, ರಮೇಶ ಧರೆನ್ನವರ, ಕರವೇ ಅಧ್ಯಕ್ಷ ಮೈನುದ್ದೀನ ಮೊಕಾಸಿ, ಕಸಾಪ ಅಧ್ಯಕ್ಷ ಎಂ.ಕೆ. ಮೇಗಾಡಿ, ವಲಯ ಅಧ್ಯಕ್ಷ ಜಿ.ಎಂ. ಮೋಪಗಾರ ಪುರಸಭೆ ಸದಸ್ಯರು, ಅಧಿಕಾರಿಗಳು, ಶಿಕ್ಷಕರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಮೆರವಣಿಗೆ ಕಾರ್ಯಕ್ರಮದ ಬಳಿಕ ಗಾಂಧಿ ಕ್ರೀಡಾಂಗಣದಿಂದ ಭುವನೇಶ್ವರಿ ಭಾವಚಿತ್ರದೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಯಿತು. ಜಾಮೀಯಾ ಮಸಜೀದ, ವಿಶೇಷ ತಹಸೀಲ್ದಾರ್ ಕಚೇರಿ, ಚಾವಡಿ ವೃತ್ತ, ಕನ್ನಡ ಶಾಲೆ, ದ್ವಾರ ಬಾಗಿಲು, ಅಲ್ಲಮಪ್ರಭು ದೇವಸ್ಥಾನ ವರೆಗೆ ಜರುಗಿ-ತು. ವಿದ್ಯಾರ್ಥಿಗಳ ಕೈಯಲ್ಲಿ ಕನ್ನಡದ ಬಾವುಟ, ಕನ್ನಡ ಸಾಧಕರ ಭಾವಚಿತ್ರಗಳು, ವೇಷಭೂಷಣ, ಗೋಲಭಾವಿಯ ಕೈಪೇಟ ಮೆರವಣಿಗೆಯ ಆಕರ್ಷಣೆಯಾಗಿದ್ದವು.

# ನಾಡು-ನುಡಿಗಾಗಿ ಧ್ವನಿ ಎತ್ತಲು ಹಿಂದೇಟು ಹಾಕಬೇಡಿ



**ಮುದ್ದೇಬಿಹಾಳ;** ಕನ್ನಡಪರ ಸಂಘಟನೆಗಳು ನಾಡು, ನುಡಿಗಾಗಿ ಧ್ವನಿ ಎತ್ತುವುದರ ಜತೆಗೆ ಸಾಮಾಜಿ-ಕ ಕಳಕಳಿಯನ್ನೂ ಬೆಳೆಸಿಕೊಳ್ಳುವ ಮೂಲಕ ಜನಸ್ನೇಹಿ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ನಮ್ಮ ಕನ್ನಡಿಗರ ವಿಜಯಸೇನೆ ವಿಜಯಪುರ ಜಿಲ್ಲಾ ಉಪಾಧ್ಯಕ್ಷ ಶಶಿಧರ ಹಿರೇಮಠ ಹೇಳಿದರು.

ಪಟ್ಟಣದ ಆಲಮಟ್ಟಿ ರಸ್ತೆಯಲ್ಲಿ ಬರುವ ಪ್ರವಾಸಿ ಮಂದಿರದಲ್ಲಿ 22 ಪದಾಧಿಕಾರಿಗಳಿಗೆ ಆದೇಶ ಪ್ರತಿ ನೀಡಿ ಮಾತನಾಡಿದ ಅವರು, ನಾಡಿನ ಇತಿಹಾಸ, ನೆಲ-ಜಲ, ಭಾಷಾ ಹೋರಾಟಗಳ ಜತೆಗೆ ತಾಲೂಕಿನಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ವಿರುದ್ಧ ಸಮಗ್ರ ಅಭಿವೃದ್ಧಿಗಾಗಿ ಹೋರಾಟಗಳನ್ನು ಮುಂದಿನ ದಿನಗಳಲ್ಲಿ ರೂಪಿಸೋಣ ಎಂದರು.

ಸಂಘಟನೆ ಬಲಿಷ್ಠ ಮತ್ತು ಶಕ್ತಿಯುತವಾಗಿ ಬೆಳೆಯಬೇಕಾದರೆ ಒಗ್ಗಟ್ಟು ಮತ್ತು ನಾವು ಹಾಕಿಕೊಂಡು ಗುರಿ ಹೆಚ್ಚು ಪರಿಣಾಮಕಾರಿ ಆಗಿರುತ್ತದೆ. ನಮ್ಮ ಹಾಕಿಕೊಂಡ ಗುರಿಗಳು ಹಾಗೂ ಹೋರಾಟಗಳು ನಮ್ಮ ಮುಂದಿನ ಯುವ ಪೀಳಿಗೆಗೆ ಮಾದರಿ ಆಗಬೇಕು ಎಂದು ತಾಲೂಕು ಅಧ್ಯಕ್ಷ ಪ್ರಕಾಶಗೌಡ ಪಾಟೀಲ್ ತಿಳಿಸಿದರು.

ನೂತನವಾಗಿ ಆಯ್ಕೆಯಾಗಿರುವ ಪದಾಧಿಕಾರಿಗಳು ತಮಗೆ ನೀಡಿರುವ ಜವಾಬ್ದಾರಿಯನ್ನು ತಪ್ಪದೇ ಒಂದೇ ಕುಟುಂಬದ ಸದಸ್ಯರಂತೆ ಸಂಘಟನೆಯನ್ನು ನಡೆಸಿಕೊಂಡು ಹೋಗಬೇಕು. ಯಾವುದೇ ಅನ್ಯಾಯ ಕಂಡರು ಗಟ್ಟಿಯಾಗಿ ಧ್ವನಿ ಎತ್ತುವ ಮನೋಭಾವ ಬೆಳೆಸಿಕೊಳ್ಳಬೇಕು. ಅನ್ಯಾಯವನ್ನು ಖಂಡಿಸಿ ನ್ಯಾಯವನ್ನು ಎತ್ತಿಹಿಡಿಯುವ ಕೆಲಸ ಇಂದಿನಿಂದಲೇ ಮಾಡುವಂತೆ ಆಗಬೇಕು ಎಂದರು.

ಈ ಸಂದರ್ಭದಲ್ಲಿ ನಮ್ಮ ಕನ್ನಡಿಗರ ವಿಜಯಸೇನೆ ತಾಲೂಕು ಉಪಾಧ್ಯಕ್ಷರು ಬಸಯ್ಯ ಹಿರೇಮಠ, ನೂತನ ಪದಾಧಿಕಾರಿಗಳಾದ ಸಿದ್ದಣ್ಣ ಬ್ಯಾಲಾಳ, ಬಸನಗೌಡ ಬಿರಾದಾರ, ಮಹಾಂತೇಶ್ ಹಡಪದ, ರಾಮನಗೌಡ ಯರಗಲ್ಲ, ಸುನೀಲ ಸಂಗಮ, ಕಾಶಿರಾಯ ಯಾಳವಾರ, ಮಹಾಂತೇಶ್ ಮಂಕಣಿ, ಸುರೇಶಗೌಡ ಪಾಟೀಲ್, ಬಸಯ್ಯ್ ಹಿರೇಮಠ, ಶೇಖು ಹಡಪದ, ಯಲ್ಲಾಲಿಂಗ ಗೋಟೂರ, ಅಂಬರೀಷ್ ಯಳವಾರ, ಚಂದ್ರಶೇಖರ ಸಂಗಮ, ಲೋಹಿತ್ ಸೇರಿದಂತೆ ಹಲವು ಪದಾಧಿಕಾರಿಗಳು ಹಾಜರಿದ್ದರು.

# ನಿತ್ಯವೂ ಹೆಚ್ಚು ಕನ್ನಡ ಭಾಷೆ ಬಳಕೆಯಾದರೆ ಕನ್ನಡ ಭಾಷೆಗೆ ಅಳಿವಿಲ್ಲ : ಅಶೋಕ ಹಂಚಲಿ

**ಬಸವನಬಾಗೇವಾಡಿ,** : ನಿತ್ಯ ಜೀವನದಲ್ಲಿ ಕನ್ನಡ ಭಾಷೆಯನ್ನು ಬಳಕೆ ಮಾಡದೇ ಹೋದರೆ ಅದು ನಶಿಸಿಹೋಗುವದರಲ್ಲಿ ಸಂದೇಹವಿಲ್ಲ. ಅದಕ್ಕಾಗಿ ಮಕ್ಕಳು ತಮ್ಮ ತಂದೆ-ತಾಯಿಯನ್ನು ಪಪ್ಪಾ-ಮಮ್ಮಿ ಎಂದು ಕರೆಯದೇ ಅಪ್ಪ-ಅಮ್ಮಾ ಎಂದು ಕರೆಯುವ ಮೂಲಕ ಮನೆಯಿಂದಲೇ ಕನ್ನಡ ಭಾಷೆಯ ಬಳಕೆ ಮಾಡಿದರೆ ಖಂಡಿತ ಕನ್ನಡ ಉಳಿಸುವಲ್ಲಿ ಪ್ರತಿಯೊಬ್ಬರೂ ತಮ್ಮ ಪಾತ್ರ ವಹಿಸಿದಂತೆ ಎಂದು ಸ್ಥಳೀಯ ಅಕ್ಕನಾಗಮ್ಮ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಅಶೋಕ ಹಂಚಲಿ ಹೇಳಿದರು.

ಪಟ್ಟಣದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ತಾಲೂಕಾಡಳಿತ ಶುಕ್ರವಾರ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ಇಂದು ಪ್ರತಿಯೊಬ್ಬ ಮಗು ಪಪ್ಪಾ-ಮಮ್ಮಿ, ಅಂಕಲ್-ಆಂಟಿ ಬಳಕೆ ಹೆಚ್ಚು ಮಾಡುವದನ್ನು ನೋಡುತ್ತಿದ್ದೇವೆ. ಮಕ್ಕಳು ಈ ಆಂಗ್ಲ ಶಬ್ದಗಳ ಬದಲಾಗಿ ಕನ್ನಡದ ಅಜ್ಜ-ಅಜ್ಜಿ, ಅಪ್ಪ-ಅಮ್ಮ, ಕಾಕಾ-ಚಿಕ್ಕಮ್ಮ, ಅತ್ತೆ, ಅಕ್ಕ-ಅಣ್ಣ, ಮಾಮಾ-ಅತ್ತಿಗೆ ಇಂತಹ ಶಬ್ದಗಳನ್ನು ನಿತ್ಯವೂ ಬಳಕೆ ಮಾಡುವ ಮೂಲಕ ಕನ್ನಡ ಭಾಷೆಯ ಉಳಿಕೆಗೆ ನಾವೆಲ್ಲರೂ ಮುಂದಾಗುವ ಅಗತ್ಯವಿದೆ. ಬದುಕಿನಲ್ಲಿ ಆದಷ್ಟು ಕನ್ನಡ ಭಾಷೆಯನ್ನು ಬಳಕೆ ಮಾಡಲು ಮುಂದಾಗಬೇಕೆಂದರು.

ಕನ್ನಡ ಭಾಷೆಯೊಂದು ಸಂಸ್ಕೃತಿಯಾಗಿದೆ. ಇದಕ್ಕೆ ದೊಡ್ಡ ಪರಂಪರೆಯಿದೆ. ಇಂತಹ ಭಾಷೆಯನ್ನು ಹೊಂದಿರುವ ನಾಡಿನಲ್ಲಿ ನಾವು ಜನಿಸಿರುವದು ಪುಣ್ಯ. 9 ನೇ ಶತಮಾನದಲ್ಲಿ ಕವಿರಾಜಮಾರ್ಗ ಕೃತಿಯಲ್ಲಿ ಕನ್ನಡ ನೆಲದ ವಿಸ್ತಾರ ಬಗ್ಗೆ ಹೇಳಲಾಗಿದೆ. ಬೆಳಗಾವಿಗೆ ಬಾಲಗಂಗಾಧರ ತಿಲಕ ಅವರು ಬಂದ ಸಂದರ್ಭದಲ್ಲಿ ಇಡೀ ಮಹಾರಾಷ್ಟ್ರದ ನೆಲವು ಕನ್ನಡ ನೆಲವಾಗಿತ್ತು ಎಂಬುವದನ್ನು ಹೇಳಿದ್ದನ್ನು ಸ್ಮರಿಸಿಕೊಂಡು ಇಂದು ಬೆಂಗಳೂರಿನಲ್ಲಿ ಕನ್ನಡ ಭಾಷೆಯು ಅನಾಥವಾಗಿದೆ ಎಂದು ಕವಿ ದುಂಡಿರಾಜ್ ತಮ್ಮ ಹನಿಗವನದಲ್ಲಿ ವ್ಯಕ್ತಪಡಿಸಿದ ಬಗ್ಗೆ ಹೇಳಿದ ಅವರು, ತಾಯಿ ನುಡಿ ಕನ್ನಡವನ್ನು ಕನ್ನಡಿಗರು ಕಾಪಾಡಬೇಕಿದೆ. ಹೃದಯದಿಂದ ಕನ್ನಡ ಭಾಷೆಯ ಬರುವಂತಾಗಬೇಕು. ಕೇವಲ ಕನ್ನಡದ ಬಗ್ಗೆ ಮಾತನಾಡಿದರೆ ಸಾಲದು. ಕನ್ನಡದ ಜಾಗೃತಿಗೆ ಸದಾ ಮುಂದಾಗಬೇಕೆಂದರು.

ಹರಿದು ಹಂಚಿಹೋಗಿದ್ದ ಕನ್ನಡ ನಾಡನ್ನು ಏಕೀಕರಣಗೊಳಿಸುವಲ್ಲಿ ಅನೇಕ ಮಹನೀಯರ ಶ್ರಮವಿದೆ. ಈ ನೆಲದ ಬಗ್ಗೆ ಮಾತನಾಡಲು ರೋಮಾಂಚನವಾಗುತ್ತದೆ. ವಿಜ್ಞಾನ ವಿಷಯದ ಕುರಿತು ಕನ್ನಡದಲ್ಲಿ ಓದುವಂತಾಗಬೇಕು. ಕನ್ನಡ ಭಾಷೆಯು ಅನ್ನದ ಭಾಷೆಯಾಗಬೇಕಿದೆ. ಆಡಳಿತದಲ್ಲಿ ಕನ್ನಡ ಭಾಷೆಯ ಸಂಪೂರ್ಣ ಜಾರಿಗೆ ಬರಬೇಕೆಂದರು.

ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಮಾತನಾಡಿ,ಜೀವನದಲ್ಲಿ ಕನ್ನಡ ಅಳವಡಿಸಿಕೊಂಡಾಗ ಮಾತ್ರ ಕನ್ನಡ ಉಳಿಯಲು ಸಾಧ್ಯ. ತಾವು ಶಿಕ್ಷಕ ವೃತ್ತಿಯಲ್ಲಿದ್ದಾಗ ಆಂಗ್ಲ ಭಾಷೆ ಪಾಠ ಮಾಡುವ ಸಂದರ್ಭದಲ್ಲಿ ಕನ್ನಡ ಭಾಷಾ ಶಿಕ್ಷಕ ಇಲ್ಲದೇ ಇರುವದರಿಂದಾಗಿ ತಾವು ಕನ್ನಡ ಪಾಠ ಮಾಡಿದೆ. ಮುಂದೆ ಕನ್ನಡ ಸಾಹಿತ್ಯವನ್ನು ತೆಗೆದುಕೊಂಡು ಕೆಎಎಸ್ ಪರೀಕ್ಷೆ ತೇರ್ಗಡೆಯಾಗಿದೆ. ಕನ್ನಡದ ಶಕ್ತಿ ಅಪಾರವಾಗಿದೆ ಎಂದರು.

ಕರವೇ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ಮಾತನಾಡಿ, ರಾಜ್ಯಕ್ಕೆ ವಿವಿಧೆಡೆಗಳಿಂದ ಜನರು ವಲಸೆ ಬಂದಿದ್ದಾರೆ. ಅವರ ಭಾಷೆ ಬೆಳೆಯದಂತೆ ಕನ್ನಡಿಗರು ನೋಡಿಕೊಳ್ಳಬೇಕು.ಕರವೇ ಹೋರಾಟ ಫಲದಿಂದಾಗಿ ಈಗಾಗಲೇ ಕನ್ನಡ ನಾಮಫಲಕ ಶೇ. 60 ರಷ್ಟು ಇರಬೇಕೆಂದು ಸರ್ಕಾರ ಆದ-ೇಶ ಹೊರಡಿಸಿದೆ. ಮುಂದಿನ ದಿನಗಳಲ್ಲಿ ಕರವೇ ಶೇ.80 ರಷ್ಟು ಉದ್ಯೋಗ ಕನ್ನಡಿಗರಿಗೆ ಸಿಗಬೇಕೆಂದು ಹೋರಾಟ ಮಾಡಲಿದೆ ಎಂದರು.



ಸಾನಿಧ್ಯ ವಹಿಸಿದ್ದ ಶಿವಪ್ರಕಾಶ ಶಿವಾಚಾರ್ಯ ಸ್ವಾಮಾಜಿ ಮಾತನಾಡಿ,ಮಾತೃಭಾಷೆಯು ಎಲ್ಲೆಡೆ ಬಳಕೆಯಾಗಬೇಕು. ಎಪಿಎಂಸಿಗಳಲ್ಲಿ ದಲ್ಲಾಳಿಗಳು ಅನ್ಯ ಭಾಷೆಯಲ್ಲಿ ಕೂಗುತ್ತಾರೆ. ಇದರ ಬದಲಾಗಿ ಅವರು ಕನ್ನಡದಲ್ಲಿಯೇ ಅಂಕಿಗಳನ್ನು ಹೇಳುವಂತಾಗಬೇಕು. ಇದ-ರಿಂದಾಗಿ ರೈತರಿಗೆ ಅನುಕೂಲವಾಗುತ್ತದೆ. ಸರ್ಕಾರ ಕನ್ನಡ ಶಾಲೆಗಳಿಗೆ ಆದ್ಯತೆ ನೀಡಬೇಕು. ಕನ್ನಡ ಭಾಷೆಗೆ ಹೆಚ್ಚು ಆದ್ಯತೆ ನೀಡುವಂತಾಗಬೇಕೆಂದರು.

ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಕರವೇ ಮುಖಂಡ ಸುನೀಲ ರಾಠೋಡ ಮಾತನಾಡಿದರು.

ವೇದಿಕೆಯಲ್ಲಿ ತಾಪಂ ಇಓ ಪ್ರಕಾಶ ದೇಸಾಯಿ,ಬಿಇಓ ವಸಂತ ರಾಠೋಡ, ಪುರಸಭೆ ಮುಖ್ಯಾಧಿಕಾರಿ ಅಪ್ರೋಜಅಹ್ಮದ ಪಟೇಲ, ತಾಲೂಕು ಕಸಾಪ ಅಧ್ಯಕ್ಷ ಶಿವಾನಂದ ಡೋಣೂರ, ಜಯಕರ್ನಾಟಕ ಅಧ್ಯಕ್ಷ ಶರಣು ಹೂಗಾರ, ಡಿಎಸ್‌ಎಸ್ ಮುಖಂಡ ಅರವಿಂದ ಸಾಲವಾಡಗಿ ಇದ್ದರು. ಅಕ್ಕನಾಗಮ್ಮ ಬಾಲಕಿಂ-ುರ ಪ್ರೌಢಶಾಲೆಯ ವಿದ್ಯಾರ್ಥಿಗಳು ನಾಡಗೀತೆ, ರೈತಗೀತೆ ಹಾಡಿದರು.

ಬಿಇಓ ವಸಂತ ರಾಠೋಡ ಸ್ವಾಗತಿಸಿದರು. ಶಿಕ್ಷಕರಾದ ಕೊಟ್ರೇಶ ಹೆಗ್ಡಾಳ, ಬಿ.ವಿ.ಚಕ್ರಮನಿ ನಿರೂಪಿಸಿದರು. ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಎಸ್.ಎಸ್.ಅವಟಿ ವಂದಿಸಿದರು.

ಸಮಾರಂಭದಲ್ಲಿ ಉಪನ್ಯಾಸಕರು ಮಾತನಾಡಿದ ನಂತರ ಉದ್ಘಾಟನೆ, ಪ್ರಾಸ್ತವಿಕ ನುಡಿ, ಅತಿಥಿಗಳ ಭಾಷಣ ಜರುಗಿತು. ನಾಡದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಲಿಲ್ಲ. ನಿರೂಪಕರು ಸಮಾರಂಭದ ಆಹ್ವಾನ ಪತ್ರಿಕೆಯಲ್ಲಿ ಪ್ರಕಟಿಸಿದ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ನಿಯಮದಂತೆ ಹಾಕಲಾಗಿದ್ದ ಎಲ್ಲ ಗಣ್ಯರ ಹೆಸರನ್ನು ಅವರು ಬಾರದೇ ಇದ್ದರೂ ಅವರು ವೇದಿಕೆಗೆ ಬರುವಂತೆ ಹೇಳಿದರು. ತಾಪಂ ಅಧಿಕಾರಿ ಕನ್ನಡದ ಶಾಲು ಹಾಕಿಕೊಳ್ಳದೇ ಇರುವದನ್ನು ಗಮನಿಸಿದ ಕರವೇ ಕಾರ್ಯಕರ್ತರು ನಂತರ ಅವರಿಗೆ ವೇದಿಕೆಯಲ್ಲಿ ಹಾಕಿದ್ದು ಕಂಡುಬಂದಿತ್ತು.

ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಾಡದೇವಿಯ ಭಾವಚಿತ್ರದ ಮೆರವಣಿಗೆ ಜರುಗಿತು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣ, ಭುವನೇಶ್ವರಿ, ಸಂಗೊಳ್ಳಿ ರಾಯಣ್ಣ ಸ್ತಬ್ಧ ಚಿತ್ರಗಳು ಗಮನ ಸೆಳೆದವು. ಹಂಚಿನಾಳ ಕರವೇ ಕಾರ್ಯಕರ್ತರು ಕನ್ನಡ ಗೀತೆಗಳಿಗೆ ಮಾಡಿದ ಲೇಜಿಮ್ ನೃತ್ಯ ಜನರ ಗಮನ ಸೆಳೆಯಿತು. ಮೆರವಣಿಗೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು, ವಿವಿಧ ಶಾಲೆಯ ಸಿಬ್ಬಂದಿ, ಕೆಲವೇ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಜಿಲ್ಲೆಯಲ್ಲಿ ರಾಜ್ಯೋತ್ಸವ ದಿನ ಆಚರಣೆ

# ಕಳೆದ ಒಂದು ವರ್ಷದಲ್ಲಿ ಕೈಗಾರಿಕೋದ್ಯಮಗಳಲ್ಲಿ 24645 ಉದ್ಯೋಗಾವಕಾಶ: ಸಚಿವ ಡಾ.ಎಂ.ಬಿ.ಪಾಟೀಲ

**ವಿಜಯಪುರ:** ಜಿಲ್ಲೆಯಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಜಿಲ್ಲೆಯಲ್ಲಿ 9,300 ಲಕ್ಷ ರೂಪಾಯಿಗಳ ಬಂಡವಾಳ ಹೂಡಿಕೆಯೊಂದಿಗೆ ಸ್ಥಾಪಿತಗೊಂಡಿರುವ 4,537 ಕೈಗಾರಿಕೋದ್ಯಮಗಳಲ್ಲಿ 24,645 ಉದ್ಯೋಗಾವಕಾಶ ಕಲ್ಪಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರು ಮತ್ತು ಬಿಜಾಪುರ ಜಿಲ್ಲಾ ಉಸ್ತುವಾರಿ ಸಚಿವರು ಡಾ. ಎಂ.ಬಿ.ಪಾಟೀಲ ಹೇಳಿದರು.

ಜಿಲ್ಲಾಡಳಿತದ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ " ಚಿರಕಾಲ ಬೆಳಗಲೀ ಕನ್ನಡದ ದೀಪ, ಜನಕೆಲ್ಲ ಬೆಳಕಾಗಿ ಪುಣ್ಯ ಪ್ರದೀಪ ಭಾರತಕೆ ಬಲವಾಗಿ ಭವ್ಯ ಪ್ರದೀಪ, ಕಳೆಯುತ್ತ ತಾಪ ಬೆಳೆಸುತ್ತ ಸೈಪ ಹೊತ್ತಿತೋ ಹೊತ್ತಿತು ಕನ್ನಡದ ದೀಪ! ಹಚ್ಚೇವು ಕನ್ನಡದ ದೀಪ! ಕರುನಾಡ ದೀಪ, ಸಿರಿ ನುಡಿಯ ದೀಪ!! ಎಂಬ ಕವನದೊಂದಿಗೆ ತಮ್ಮ ಸಂದೇಶ ಆರಂಭಿಸಿ ಅವರು ಮಾತನಾಡಿದರು.

ಕೆ.ಐ.ಎ.ಡಿ.ಬಿ ಅಲಿಯಾಬಾದ ಹಂತ-3 ಹೊಸ ಕೈಗಾರಿಕಾ ಪ್ರದೇಶ ಸ್ಥಾಪನೆಗಾಗಿ 1870 ಎಕರೆ ಜಮೀನು ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ಕೈಗಾರಿಕೆ ಅಭಿವೃದ್ಧಿಗಾಗಿ ಒಟ್ಟು 3239 ಎಕರೆ ಕೈಗಾರಿಕಾ ಪ್ರದೇಶ ಅಭಿವೃದ್ಧಿಗಾಗಿ ಕ್ರಮವಹಿಸಲಾಗಿದೆ. ಈಗಾಗಲೆ 245 ಕೋಟಿ ರೂಪಾಯಿಗಳ ಬಂಡವಾಳ ಹೂಡಿ ಕೊಲ್ಹಾರ ತಾಲೂಕಿನಲ್ಲಿ 614 ಎಕರೆ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ಹೊಸ ಕೈಗಾರಿಕೆಗಳ ಸ್ಥಾಪನೆಗಾಗಿ 411 ನಿವೇಶನಗಳು ಲಭ್ಯವಿವೆ ಎಂದು ಅವರು ಹೇಳಿದರು.

ಬಬಲೇಶ್ವರ ತಾಲೂಕಿನ ಐತಿಹಾಸಿಕ ಮಮದಾಪುರ ಕೆರೆಯನ್ನು ಕೈಗಾರಿಕೆ ಇಲಾಖೆಯ ಸಿ.ಎಸ್.ಆರ್ 1 ಕೋಟಿ ರೂಪಾಯಿ ಅನುದಾನದಲ್ಲಿ ಸೌಂದರೀಕರಣ ಮಾಡಲಾಗುತ್ತಿದೆ. ಮತ್ತು ಆದಿಲ್ ಶಾಹಿಗಳ ಕಾಲದ ಬೇಸಿಗೆ ಅರಮನೆ ಪಕ್ಕದಲ್ಲಿರುವ ಕುಮಟಗಿ ಕೆರೆ ಪ್ರವಾಸೋದ್ಯಮ ಕೇಂದ್ರವನ್ನಾಗಿ ಮತ್ತು ಪಕ್ಕದ 17 ಎಕರೆ ಪ್ರದೇಶದಲ್ಲಿ ಥೀಮ್ ಪಾರ್ಕ್ ಕೈಗಾರಿಕೆ ಇಲಾಖೆಯ ಸಿ.ಎಸ್.ಆರ್.,ರೂಪಾಯಿ 2 ಕೋಟಿ ಅನುದಾನದಲ್ಲಿ ಸೌಂದರೀಕರಣಗೊಳಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ ವತಿಯಿಂದ ಸಿಎಸ್‌ಆರ್ ಅನುದಾನದಲ್ಲಿ ಬಬಲೇಶ್ವರ ಹಾಗೂ ತಿಕೋಟಾ ತಾಲೂಕುಗಳನ್ನು ಬಿಜಾಪುರ ಜಿಲ್ಲೆಯಲ್ಲಿ ಮಾಡೇಲ್ ತಾಲೂಕುಗಳು ಎಂದು ಆಯ್ಕೆ ಮಾಡಿಕೊಂಡು ಇಲ್ಲಿನ ಆಯ್ದ 1000 ಸರಕಾರಿ ಶಾಲೆಗಳ ಕಟ್ಟಡಗಳ ದುರಸ್ಥಿ, ನಿರ್ಮಾಣ ಹಾಗೂ ಅತ್ಯಾಧುನಿಕ ಸ್ಮಾರ್ಟ್ ಕ್ಲಾಸ್ ಅಳವಡಿಕೆ ಮಾಡುವ ಕಾರ್ಯವು ಭರದಿಂದ ಸಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವಿವಿಧ ರೀತಿಯ ಡಿಜಿಟಲ್ ಸೌಕರ್ಯಗಳನ್ನು ಪೂರೈಸಿ, ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಕ್ರಮ ವಹಿಸಲಾಗಿದೆ ಎಂದು ಅವರು ಹೇಳಿದರು.

ಕರ್ನಾಟಕ ಸಂಭ್ರಮ-50 "ಹೆಸರಾಯಿತು ಕರ್ನಾಟಕ-ಉಸಿರಾಗಲಿ ಕನ್ನಡ" ಅಭಿಯಾನದಡಿ ನವ್ಹೆಂಬರ್-2023 ರಿಂದ ಇಲ್ಲಿಯವರೆಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಅದರಲ್ಲಿ ಕನ್ನಡದ ಮೊದಲ ಶಾಸನವೆಂದು ಪರಿಗಣಿಸಲ್ಪಟ್ಟಿರುವ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಅಳವಡಿಸಲು ಉದ್ದೇಶಿಸಲಾಗಿದ್ದು, ಅದರಂತೆ ಬಿಜಾಪುರ ಜಿಲ್ಲೆಯಲ್ಲಿ ಸಾರ್ವಜನಿಕರ ವೀಕ್ಷಣೆಗಾಗಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಅಳವಡಿಸಲಾಗಿದೆ.

ನಡೆದಾಡುವ ದೇವರು, ಪ್ರಕೃತಿಯ ಆರಾಧಕರಾಗಿದ್ದ, ಬಯಲಲ್ಲಿ ಬಯಲಾದ ಶತಮಾನದ ಸಂತ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳ ಜೀವನ ಸಂದೇಶಗಳನ್ನು ಮುಂದಿನ ಪೀಳಿಗೆಗೆ ಪ್ರೇರಣೆಯಾಗಿಸುವ ಉದ್ದೇಶದಿಂದ ಬಬಲೇಶ್ವರ ತಾಲೂಕಿನ ಮಮದಾಪುರ ಕೆರೆಯ ಸುತ್ತಲಿನ 1654 ಎಕರೆ ಪ್ರದೇಶದಲ್ಲಿ ಮಾನವ ನಿರ್ಮಿತ ಅರಣ್ಯವನ್ನು ಬೆಳೆಸಲಾಗುತ್ತಿದೆ. ಈ ಪ್ರದೇಶವನ್ನು ರಾಜ್ಯ ಸರ್ಕಾರ ಜೀವವೈವಿಧ್ಯತೆಯ ಪಾರಂಪರಿಕ ಅರಣ್ಯ ಎಂದು ಘೋಷಿಸಿದೆ. ಮುಂದಿನ ದಿನಗಳಲ್ಲಿ ಇದು ದೇಶದಲ್ಲಿಯೇ ಮಾದರಿ ಮಾನವ ನಿರ್ಮಿತ ಅರಣ್ಯ ಎಂಬುದಾಗಿ ರೂಪಿಸಬೇಕೆಂಬ ವಿಶೇಷ ಆಸಕ್ತಿ ವಹಿಸಿದ್ದೇನೆ. ಕೈಗಾರಿಕೆ ಇಲಾಖೆ ಸಿ.ಎಸ್. ಆರ್ 1 ಕೋಟಿ ರೂಪಾಯಿ ಅನುದಾನದಲ್ಲಿ, ಪ್ರವೇಶ ದ್ವಾರ, ಧ್ಯಾನ ಕೇಂದ್ರ ಮತ್ತು ಗ್ರಂಥಾಲಯ, ಕಾವಲು ಕೊಠಡಿ ಮತ್ತು ವೀಕ್ಷಣಾ ಗೋಪುರ ನಿರ್ಮಿಸಲು ಸದ್ಯ ಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ವಿವಿಧ ಹಂತಗಳಲ್ಲಿ ಈ ಪ್ರದೇಶವನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ಅವರು ಹೇಳಿದರು.



ಜನಪ್ರಿಯ ಜನನಾಯಕ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದಲ್ಲಿನ ನಮ್ಮ ಸರ್ಕಾರವು ಶ್ರದ್ಧೆ, ನಿಷ್ಠೆ ಮತ್ತು ಕಾಳಜಿ ಪೂರ್ವಕವಾದ ಜನಪರ ನಿಲುವುಗಳೊಂದಿಗೆ ಕಾರ್ಯ ನಿರ್ವಹಿಸುತ್ತ ಕರ್ನಾಟಕ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗಾಗಿ ಹಗಲಿರುಳು ಶ್ರಮಿಸಲಾಗುತ್ತಿದೆ. ದೇಶದಾದ್ಯಂತ ಸಂಚಲನ ಸೃಷ್ಟಿಸಿರುವ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ಫಲಾನುಭವಿಗಳ ಬದುಕಿನಲ್ಲಿ ಬೆಳಕು ಮತ್ತು ಭರವಸೆ ತುಂಬುವಲ್ಲಿ ಸಫಲವಾಗಿವೆ. ಅನ್ನಭಾಗ್ಯ ಯೋಜನೆಯಡಿ ಯ 5 ಕೆ.ಜಿ ಅಕ್ಕಿ ಹಾಗೂ ಇನ್ನೂ 5 ಕೆ.ಜಿ ಬದಲಾಗಿ ನೀಡುತ್ತಿರುವ ತಲಾ ರೂಪಾಯಿ 170 ರ ಲೆಕ್ಕಾಚಾರದಲ್ಲಿ ಜುಲೈ ಅಂತ್ಯಕ್ಕೆ 4,43,877 ಪಡಿತರ ಚೀಟಿಗಳ ಪೈಕಿ 15,84,147 ಫಲಾನುಭವಿ ಸದಸ್ಯರುಗಳಿಗೆ ಜುಲೈ-2023 ರಿಂದ ಜುಲೈ-2024 ರ ವರೆಗೆ 322.6 ಕೋಟಿ ಮೊತ್ತವನ್ನು ಡಿ.ಬಿ.ಟಿ ಮೂಲಕ ಜಮೆ ಮಾಡಲಾಗಿದೆ ಎಂದು ಹೇಳಿದರು.

ವಿಮಾನ ನಿಲ್ದಾಣಕ್ಕೆ ಸಂಬಂಧಿಸಿದ ರನ್‌ವೇ ಸಹಿತ ಎಲ್ಲ ಕಾಮಗಾರಿಗಳು ಮುಗಿದಿದೆ. ಆದ-ರೆ, ಪರಿಸರ ಸಚಿವಾಲಯಕ್ಕೆ ಸಂಬಂಧಿಸಿದ ಅನುಮತಿಗಳು ಹಿಂದಿನಿಂದಲೂ ಬಾಕಿ ಇವೆ. ಈ ಮಧ್ಯೆ ಮಾನ್ಯ ಸರ್ವೋಚ್ಚ ನ್ಯಾಯಾಲಯ ಚನ್ನೈ ವಿಮಾನ ನಿಲ್ದಾಣಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ, ರಾಷ್ಟದ ಎಲ್ಲ ನೂತನ ವಿಮಾನ ನಿಲ್ದಾಣಗಳಿಗೆ ಪರಿಸರ ಸಂಬಂಧಿತ ವಿಷಯಗಳ ಇತ್ಯಥ-ರ್ವಾಗುವವರೆಗೆ ತಡೆಯಾಜ್ಞೆ ನೀಡಿದೆ. ಈ ತಡೆಯಾಜ್ಞೆ ತೆರವಾದ ಎರಡು ತಿಂಗಳ ಒಳಗೆ ವಿಮಾನ ಹಾರಾಟ ಆರಂಭಿಸಲಾಗುವುದು ಎಂದು ಅವರು ಹೇಳಿದರು.

ಬಿಜಾಪುರ ವಿಮಾನ ನಿಲ್ದಾಣದಲ್ಲಿ ಏರ್‌ಬಸ್-320 ವಿಮಾನಗಳ ಹಗಲು ಹಾರಾಟದ ವ್ಯವಸ್ಥೆಗಾಗಿ ಮಂಜೂರಾಗಿರುವ 347.92 ಕೋಟಿ ರೂಪಾಯಿಗಳ ಅನುದಾನದಲ್ಲಿ 2 ಪ್ಯಾಕೇಜಗಳಲ್ಲಿ ಕೈಗೊಂಡ ಎಲ್ಲ ಕಾಮಗಾ-ರಿಗಳೂ ಮುಕ್ತಾಯವಾಗಿವೆ. ವಿಮಾನಯಾನ ಕಾರ್ಯಾಚರಣೆಗೆ ಅವಶ್ಯವಿರುವ ಯಡಿಛಿಡಿಚಿಜಿಣ ಖಇಛಿಣಾಜ ಈಡಿಜ ಈಖುಣಖುಟಿ ಗಿಖುಛಿಟಛಿ ಖರೀದಿಸುವ ಸಲುವಾಗಿ ಏಖಖಖಆಅ ವತಿಯಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ. ಸದರಿ ವಿಮಾನ ನಿಲ್ದಾಣದಲ್ಲಿ ರಾತ್ರಿ ವೇಳೆಯಲ್ಲಿಯೂ ಕಾರ್ಯಾಚರಣೆ ಕೈಗೊಳ್ಳಲು ಮತ್ತು ರಾಷ್ಟ್ರೀಯ ಹೆದ್ದಾರಿ-50 ರಿಂದ ವಿಮಾನ ನಿಲ್ದಾಣಕ್ಕೆ ನೇರ ಸಂಪರ್ಕ ರಸ್ತೆಯನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗಿರುತ್ತದೆ. ಇದಕ್ಕಾಗಿ 117 ಕೋಟಿ ರೂಪಾಯಿಗಳ ಹೆಚ್ಚುವರಿ ಮೊತ್ತದ ಡಿ.ಪಿ.ಆರ್ ತಯಾರಿಸಿ ಅನುಮೋದನೆಗಾಗಿ ಸಲ್ಲಿಸಲಾಗಿದೆ ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ದಿನಾಂಕ: 23-09-2024 ರಂದು ಸುರಿದ ಭಾರೀ ಮಳೆಯಿಂದ ಬಿಜಾಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 87 ಮನೆಗಳು ಭಾಗಶಃ ಹಾನಿಗೊಳಗಾಗಿದ್ದು, ಸುಮಾರು 842 ಮನೆಗಳಲ್ಲಿ ಮಳೆ ನೀರು ನುಗ್ಗಿ ಗೃಹೋಪಯೋಗಿ ವಸ್ತುಗಳು ಹಾನಿಗೊಳಗಾಗಿರುತ್ತವೆ. ಸದರಿ ಕುಟುಂಬಗಳಿಗೆ ಎಸ್.ಡಿ.ಆರ್.ಎಫ್ ಮತ್ತು ಎನ್.ಡಿ.ಆರ್.ಎಫ್ ಮಾರ್ಗಸೂಚಿಯನುಸಾರ ಪರಿಹಾರ ವಿತರಣಾ ಕಾರ್ಯ ಪ್ರಗತಿಯಲ್ಲಿದೆ.

ಬಿಜಾಪುರ ನಗರದ ಕನಕದಾಸ ಬಡಾವಣೆಯಲ್ಲಿರುವ 6 ಎಕರೆ ಸರ್ಕಾರಿ ಜಾಗದಲ್ಲಿ 4 ಮಹಡಿಗಳ ಜಿಲ್ಲಾ ಕಚೇರಿಗಳ ಸಂಕೀರ್ಣ ನಿರ್ಮಾಣಕ್ಕಾಗಿ 55.60 ಕೋಟಿ ರೂಪಾಯಿಗಳ ಅನುದಾನಕ್ಕೆ ಆಡಳಿತಾತ್ಮಕ ಅನುಮೋದನೆ ದೊರೆತಿ-ದ್ದು, ಪರಿಷ್ಕೃತ ಅಂದಾಜು ಪತ್ರಿಕೆಯನ್ನು ಸಿದ್ಧಪಡಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆಗಾಗಿ ಸಲ್ಲಿಸುವ ಕಾರ್ಯವು ಪ್ರಗತಿಯಲ್ಲಿದೆ ಎಂದು ಹೇಳಿದರು.

ಬಿಜಾಪುರ ಮಹಾನಗರ ಪಾಲಿಕೆಯ ಮಹಾತ್ಮಗಾಂಧಿ ನಗರ ವಿಕಾಸ ಯೋಜನೆಯ 2ನೇ ಹಂತದಲ್ಲಿ 150 ಕೋಟಿ ರೂಪಾಯಿಗಳ ಅನುದಾನ ಹಂಚಿಕೆಯಾಗಿರುತ್ತದೆ. ವಿವಿಧ ಕಾಮಗಾರಿಗಳನ್ನು ನಿರ್ಧರಿಸಿ ಕ್ರಿಯಾಯೋಜನೆ ಸಿದ್ಧಪಡಿಸುವ ಕಾರ್ಯವು ಪ್ರಗತಿಯಲ್ಲಿದೆ. ರಾಜ್ಯದ ಎಲ್ಲ ಸ್ಥಳೀಯ ಸಂಸ್ಥೆಗಳಲ್ಲಿ ಮತ್ತು ಮಹಾನಗರ ಪಾಲಿಕೆಗಳಲ್ಲಿ ಹಾಲಿ ಇರುವ ಸಾಂಪ್ರದಾಯಿಕ ಬೀದಿ ದೀಪಗಳನ್ನು ಬದಲಿಸಿ ಕೇಂದ್ರಿಕೃತ ಚಾಲನೆ ಮತ್ತು ನಿರ್ವಹಣೆಯುಳ್ಳ ಎಲ್.ಇ.ಡಿ ಬೀದಿ ದೀಪಗಳನ್ನು ಮುಂದಿನ ದಿನಗಳಲ್ಲಿ ಅನುಷ್ಠಾನಗೊಳಿಸಲಾಗುವುದು .ಬಿಜಾಪುರ ನಗರದ ಸೌಂದರ್ಯಕ್ಕಾಗಿ ಅಮೃತ 2.0 ಯೋಜನೆಯಡಿಯಲ್ಲಿ 25 ಕೋಟಿ ರೂಪಾಯಿಗಳ ಅನುದಾನದಲ್ಲಿ ಬೇಗಂ ತಲಾಬ್ ಹಾಗೂ ಭೂತನಾಳ ಕೆರೆಗಳನ್ನು ಪುನಃಶ್ಚೇತನಗೊಳಿಸುವ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.

ಅಚ್ಚ ಕನ್ನಡ ಭಾಷೆಯಲ್ಲಿ ವಚನಗಳನ್ನು ರಚಿಸುವ ಮೂಲಕ ದೇವರೊಂದಿಗೆ ನೇರವಾಗಿ ಆತ್ಮಸಂವಾದ ನಡೆಸಿದವರು 12 ನೇ ಶತಮಾನದ ವಚನಕಾರರು. ಬಿಜಾಪುರದ ಗೋಲಗುಮ್ಮಟಕ್ಕೆ ಸರಿಸಾಟಿಯಾಗಿ ಬಿಜಾಪುರದ ವಚನ ಗುಮ್ಮಟವೆಂಬ ಖ್ಯಾತಿಗೆ ಭಾಜನರಾದ ವಚನಪಿತಾಮಹ ಡಾ.ಫ. ಗು.ಹಳಕಟ್ಟಿಯವರು ಬಸವಾದಿ ಪ್ರಮಥ-ರ ವಚನಸಾಹಿತ್ಯವನ್ನು ಸಂಗ್ರಹಿಸಿ, ಪರಿಷ್ಕರಿಸಿ, ಮುಂಬರುವ ಪೀಳಿಗೆಗಳಿಗಾಗಿ ಸಂರಕ್ಷಿಸಿಡುವ ಮೂಲಕ ಅತ್ಯಮೂಲ್ಯ ಸಾಹಿತ್ಯ ಸೇವೆ ಮಾಡಿದ್ದಾರೆ. ಅಲ್ಲದೇ, ಹಳಕಟ್ಟಿ ಅವರು ಬಿಜಾಪುರ ನಗರಸಭೆ ಅಧ್ಯಕ್ಷರಾಗಿದ್ದಾಗ ಮರಾಠಿಮಯವಾಗಿದ್ದ ಬಿಜಾಪುರದಲ್ಲಿ ಕನ್ನಡ ಶಾಲೆ ಆರಂಭಿಸಿದರು ಎಂದು ಹೇಳಿದರು.

ಬಿಜಾಪುರ ಜಿಲ್ಲೆಯ ಪರಮ ಪೂಜ್ಯ ಶ್ರೀ ಬಂಥನಾಳ ಶಿವಯೋಗಿಗಳು, ಜ್ಞಾನಯೋಗಾಶ್ರಮದ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ನಡೆದಾಡುವ ದೇವರೆಂದೇ ಪೂಜಿಸಲ್ಪಟ್ಟ ದಾರ್ಶನಿಕ ಶತಮಾನದ ಸಂತ ಪರಮಪೂಜ್ಯ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು, ಮಧುರಚೆನ್ನರು, ಚಡಚಣದ ಸಿಂಪಿ ಲಿಂಗಣ್ಣನವರು, ಡಾ.ಆರ್.ಡಿ.ರಾನಡೆ, ಗಣಪತರಾವ್ ಮಹಾರಾಜ, ಧೂಲಾಸಾಹೇಬ, ರಂ.ಸಿ.ಮುಗಳಿ, ಶ್ರೀರಂಗರು, ಲಕ್ಕಪ್ಪ ಶಿರಹಟ್ಟಿ, ಡಾ.ಗುರುಲಿಂಗ ಕಾಪಸೆ, ಡಾ.ಎಂ.ಎಂ.ಕಲಬುರ್ಗಿ, ಡಾ.ಕೃಷ್ಣ ಕೊಲ್ಹಾರಕುಲಕರ್ಣಿ, ಪ್ರೊ.ಎನ್.ಜಿ.ಕರೂರ, ಪ್ರೊ.ಸಂಗಮನಾಥ ಹಂಡಿ, ಮಹಾಂತ ಗುಲಗಂಜಿ, ಶಿಶು ಸಂಗಮೇಶ, ಸಂಗಮೇಶ ಬಾಗಲಕೋಟ, ಈಶ್ವರಚಂದ್ರ ಚಿಂತಾಮಣಿ, ಶರಣಪ್ಪ ಕಂಚ್ಯಾಣಿ, ಕಾಶೀಮಸಾಬ ಹು.ವಿಜಾಪುರ, ಪಾ.ಭೀ.ಪಾಟೀಲ, ಹ.ಮ.ಅಂಬಿಗೇರ, ಈಶ್ವರ ಕಾಪಸೆ, ಡಾ.ಬಿ. ಎಸ್.ಶೇತೆ, ಡಾ.ಎಂ.ಎನ್.ವಾಲಿ, ಡಾ.ಬಿ.ಬಿ.ಹೆಂಡಿ, ಡಾ.ಎಸ್.ಕೆ.ಕೊಪ್ಪಾ, ಡಾ.ಎಂ.ಎಂ.ಪಡಶೆಟ್ಟಿ, ಡಾ.ಚನ್ನಪ್ಪ ಕಟ್ಟಿ, ಪ್ರೊ.ಬಿ.ಎಂ.ಹಿರೇಮಠ, ಡಾ.ಆರ್.ಸಿ.ಮುದ್ದೇಬಿಹಾಳ, ಡಾ.ಅರವಿಂದ ಮಾಲಗತ್ತಿ, ಡಾ.ರಾಜಶೇಖರ, ಹ.ಮ.ಪೂಜಾರ, ದಾನಪ್ಪ ಜತ್ತಿ, ಪ್ರೊ.ಬಿ.ಆರ್.ಪೋಲಿಸ್ ಪಾಟೀಲ, ಅರ್ಜುನ ಗೊಳಸಂಗಿ, ಡಾ.ಅಮೀರುದ್ದೀನ ಖಾಜಿ, ಸೋಮನಾಥ ಯಾಳವಾರ, ಎ.ಕೆ.ರಾಮೇಶ್ವರ, ರಂಜಾನ್ ದರ್ಗಾ, ಡಾ.ಸಿ.ಆರ್.ಯರವಿನತೆಲಿಮಠ ಮತ್ತು ಡಾ.ಎಂ.ಎಸ್.ಮದಭಾವಿಯವರೂ ಸೇ-ರಿದಂತೆ ಇನ್ನೂ ನೂರಾರು ಹಿರಿಯರು ಮತ್ತು ಇತ್ತೀಚಿನ ಹಲವಾರು ಯುವ ಸಾಹಿತಿಗಳು ತಮ್ಮ ವಿಶಿಷ್ಟ ಬರವಣಿಗೆಗಳ ಮೂಲಕ ಕನ್ನಡ ಭಾಷೆಯ ಶ್ರೀಮಂತಿಕೆಯನ್ನು ಹೆಚ್ಚಿಸಿದ್ದಾರೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮೇಯರ್ ಮಹೇಜಬಿನ್ ಹೊರ್ತಿ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನಾನ್ ಮುಶ್ರೀಪ್,ಉಪ ಮೇಯರ್ ದಿನೇಶ ಹಳ್ಳಿ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ಕನ್ನಡಪರ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 224 Postal Reg No. PMG/KA/NK/BM/135/22-24 / POST AT Vantamury Colony Post Office